# ಬೆಳಗಾವಿ ವರದಿ

ಗಡಿ ಜಿಲ್ಲೆಯ ಧ್ವನಿ...

VOL. 04 ISSUE. 285 ₹4. SATURDAY, 6 JANUARY 2024 NEWSBELAGAVI@GMAIL.COM 9900332089 RNI. KARKAN/2020/79084 REG.NO G-2/PMG/KA/NK/BM/139/2024-26

## ನೇಮಕಾತಿ ವೇಳೆ ಎಸ್ಸೆಸ್ಸೆಲ್ಸಿ ನಕಲಿ ಮಾರ್ಕ್ ನೀಡಿ ಸಿಕ್ಕಿಬಿದ್ದ ಕಿಡಿಗೇಡಿ: ದೂರು ದಾಖಲು




ಕಲಬುರಗಿ: ಅಂಚೆ ಇಲಾಖೆಯ 1714 ಹುದ್ದೆಗಳ ನೇಮಕಾತಿಯಲ್ಲಿ ಉದ್ಯೋಗ ಗಿಟ್ಟಿಸಿ ಕೊಳ್ಳಲು ಕಲಬುರಗಿ ಯಲ್ಲಿ ಅಭ್ಯರ್ಥಿಗಳು ಎಸ್ಸೆಸ್ಸೆಲ್ಸಿ ನಕಲಿ ಮಾರ್ಕ್ ಕಾರ್ಡ್ ನೀಡಿ ಸಿಕ್ಕಿಬಿದ್ದ ಘಟನೆ ನಡೆದಿದೆ. ಅಂಚೆ ಇಲಾಖೆಯಿಂದ ಎಸ್‌ಎಸ್‌ಎಲ್ಸಿ ಅಂಕಪಟ್ಟಿ ಪರಿಶೀಲನೆ ವೇಳೆ ಎಂಟು ಮಂದಿ ಅಭ್ಯರ್ಥಿಗಳು ಸಿಕ್ಕಿಬಿದ್ದಿದ್ದು, ನಕಲಿ ಅಂಕಪಟ್ಟಿ ಸಲ್ಲಿಸಿದ ಅಭ್ಯರ್ಥಿಗಳ ವಿರುದ್ಧ ಅಂಚೆ ಇಲಾಖೆಯಿಂದ ವಂಚನೆ ದೂರು ನೀಡಲು ಸಿದ್ಧತೆ ನಡೆಸಲಾಗುತ್ತಿದೆ.

ಪರೀಕ್ಷಾ ಅಕ್ರಮದ ತವರು ಎಂಬ ಕುಖ್ಯಾತಿಗೆ ಒಳಗಾಗುತ್ತಿರುವ ಕಲಬುರಗಿಯಲ್ಲಿ ಇದೀಗ ಮತ್ತೊಂದು ಅಕ್ರಮ ಬಯಲಿಗೆ ಬಂದಿದೆ.

ಈ ಹಿಂದೆ 545 ಪಿಎಸ್‌ಐ ನೇಮಕಾತಿ ಪರೀಕ್ಷೆ, ಕೆಇಎ ವಿವಿಧ ಹುದ್ದೆಗಳ ನೇಮಕಾತಿ ಸೇರಿದಂತೆ ವಿವಿಧ ಇಲಾಖೆಯಲ್ಲಿನ ನೇಮಕಾತಿಯಲ್ಲಿ ಅಕಮ್ರ ಎಸಗಲಾಗಿದೆ. ವ್ಯಾಪಕ ಅಕ್ರಮ ನಡೆಯುತ್ತಿರುವುದರಿಂದ ಜಿಲ್ಲೆಯಲ್ಲಿ ನೇಮಕಾತಿ ಪರೀಕ್ಷೆ ನಡೆಸದಿರುವ ನಿರ್ಧಾರಕ್ಕೆ ಬರಲಾಗಿದೆ.

## ಬೆಳಗಾವಿ ಶಾಲಾ ಮಕ್ಕಳ ಪ್ರವಾಸ; ಧಾರವಾಡದ ಅಡ್ವೆಂಚರ್ ಪಾರ್ಕನಲ್ಲಿ ಅಪಘಾತ

### ಇಬ್ಬರು ಮಕ್ಕಳ ಕೈಕಾಲು ಮುರಿತ; ಬಿಲ್ ಪಾವತಿಗೆ ಹಿಂಜರಿತ

ಬೆಳಗಾವಿ: ಶಾಲಾ ಮಕ್ಕಳನ್ನು ಪ್ರವಾಸಕ್ಕೆ ಕರೆದೊಯ್ಯುವುದು ತಪ್ಪಲ್ಲ. ಮಕ್ಕಳ ಸರ್ವತೋಮುಖ ಅಭಿವೃದ್ಧಿಯ ದೃಷ್ಟಿಯಿಂದ ಇಂತಹ ಚಟುವಟಿಕೆಗಳು ಅಗತ್ಯ. ಆದರೆ ಮಕ್ಕಳನ್ನು ಹೊರಗೆ ಕರೆದೊಯ್ದಾಗ ಅವರ ಸುರಕ್ಷತೆಯತ್ತ ಗಮನ ಹರಿಸುವುದು ಅಷ್ಟೇ ಮುಖ್ಯ. ಮೇಲಾಗಿ ಪ್ರವಾಸಿ ತಾಣದ ಸ್ಥಳದಲ್ಲಿ ಸುರಕ್ಷತೆ ಇದೆಯೇ ಎಂಬುದನ್ನು ಪರಿಶೀಲಿಸುವುದು ತುಂಬಾ ಮುಖ್ಯ. ಅನುಮಾನ ಕಂಡುಬಂದಲ್ಲಿ ಅಲ್ಲಿಮಕ್ಕಳನ್ನು ಆಟವಾಡಲು ಮತ್ತು ವೀಕ್ಷಣೆಗೆ ಬಿಡಲೇಬಾರದು.

ಗುರುವಾರ ಬೆಳಗಾವಿಯ ಚನ್ನಮ್ಮ ವೃತ್ತದ ಹತ್ತಿರದಲ್ಲಿರುವ ಬಿ ಎಸ್ ಹಂಚಿನಾಳ ಶಾಲಾ ಮಕ್ಕಳನ್ನು ಧಾರವಾಡದ ಅಡ್ವೆಂಚರ್ ಪಾರ್ಕ್ಗೆ ಕರೆದೊಯ್ಯಲಾಗಿತ್ತು. ಈ ಪಾರ್ಕ್ ಅನ್ನು ಮಕ್ಕಳಿಗೆ ತೋರಿಸುವುದು ಒಳ್ಳೆಯ ಸಂಗತಿ. ಆದರೆ ಅಲ್ಲಿ ನಡೆದಿರುವ ಅವಘಡವನ್ನು ನೋಡಿದರೆ ಮಕ್ಕಳನ್ನು ಎಲ್ಲಿಗೂ ಕಳುಹಿಸಬಾರದು ಎಂದು ಅನ್ನಿಸದೇ ಇರದು.

ಈ ಅಡ್ವೆಂಚರ್ ಪಾರ್ಕ್ ನಲ್ಲಿ ಮಕ್ಕಳನ್ನು ಒಂದು ಸುತ್ತು ಹಾಕಿಸಲು ಟ್ರ್ಯಕ್ಟರ್ ವ್ಯವಸ್ಥೆ ಮಾಡಲಾಗಿದೆ. ಎರಡು ಟ್ರ್ಯಕ್ಟರ್ ಗಳಲ್ಲಿ ಮಕ್ಕಳ ಸುತ್ತಾಟಕ್ಕೆ ವ್ಯವಸ್ಥೆ ಮಾಡಲಾಗಿದೆ. ಅದರಲ್ಲಿ ಒಂದು ಟ್ರ್ಯಕ್ಟರ್ ನಲ್ಲಿ 9 ಮಕ್ಕಳಿರುತ್ತಾರೆ.ಈ ಟ್ರ್ಯಕ್ಟರ್ ಪಲ್ಟಿ ಹೊಡೆದು ಮಕ್ಕಳಿಗೆ ಗಂಭೀರ ಗಾಯಗಳಾಗಿವೆ. ಆದರೆ ಎಲ್ಲ ಮಕ್ಕಳೂ ಅಪಾಯದಿಂದ ಪಾರಾಗಿದ್ದಾರೆ. ಈ ಟ್ರ್ಯಕ್ಟರ್



ಚಲಾಯಿಸುತ್ತಿದ್ದ ಹುಡುಗ ಅಪ್ರಾಪ್ತ ವಯಸ್ಸಿನ ಬಾಲಕ ನಾಗಿದ್ದ ಎಂದು ಪೋಷಕ ರು ಬೆಳಗಾವಿ ವರದಿಗೆ ಮಾಹಿತಿ ನೀಡಿದ್ದಾರೆ. ಈ ಟ್ರ್ಯಕ್ಟರ್ ನಲ್ಲಿದ್ದ ಸುಂದರ್ ತಳವಾರ ಎಂಬ ಬಾಲಕನ ಕೈ ಮುರಿದಿದ್ದರೆ ಸಮರ್ಥ ದೇಸೂರಕರ್ ಎಂಬ ಬಾಲಕನ ಕಾಲು ಮುರಿದಿದೆ. ತಕ್ಷಣವೇ ಅಡ್ವೆಂಚರ್ ಪಾರ್ಕ್ ಮಾಲೀಕರು ಪ್ರಥಮ ಚಿಕಿತ್ಸೆ ಕೊಡಿಸಿದ್ದಾರೆ. ನಂತರ ಮಕ್ಕಳನ್ನು ಬೆಳಗಾವಿಗೆ ಕರೆತರಲಾಗಿದೆ. ಬೆಳಗಾವಿಯಲ್ಲಿ ಈ ಇಬ್ಬರೂ ಬಾಲಕರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಇಲ್ಲಿಂದ ಮತ್ತೊಂದು ಸಮಸ್ಯೆ ಆರಂಭವಾಗಿದೆ. ಮಕ್ಕಳು ಹಲವು ದಿನಗಳ ಕಾಲ ಆಸ್ಪತ್ರೆಯಲ್ಲಿ ಇರಬೇಕಾಗುತ್ತದೆ ಎಂದು ಆಸ್ಪತ್ರೆಯ ವೈದ್ಯರು ಹೇಳಿದ್ದಾರೆ. ಆದರೆ ಆಸ್ಪತ್ರೆಯ ಬಿಲ್ ಪಾವತಿಸುವವರು ಯಾರು ಎಂಬ ಸಮಸ್ಯೆ ಉದ್ಭವವಾಗಿದೆ. ಅಡ್ವೆಂಚರ್ ಪಾರ್ಕ್ ಮಾಲೀಕರು ಯಾರು ಎಂದು ಪೋಷಕರಿಗೆ ಗೊತ್ತಿಲ್ಲ. ಅವರನ್ನು ಸಂಪರ್ಕಿಸುವುದೂ ಸಾಧ್ಯವಿಲ್ಲ. ಶಾಲಾ ಪ್ರಿನ್ಸಿಪಾಲರನ್ನು ಕೇಳಿದರೆ ಸಮರ್ಪಕ ಉತ್ತರ ನೀಡುತ್ತಿಲ್ಲ. ನೀವು ಬಿಲ್ ಪಾವತಿಸಿ ನಂತರ ನೋಡೋಣ ಎಂದು ಸಬೂಬು ಹೇಳುತ್ತಿದ್ದಾರೆ ಎಂದು ಪೋಷಕರು ಅಪಾದಿಸುತ್ತಾರೆ. ಅಡ್ವೆಂಚರ್ ಪಾರ್ಕ್ ಮಾಲೀಕರೇ ಅಂತಿಮ ಬಿಲ್ ಪಾವತಿ ಮಾಡುತ್ತಾರೆ ಎಂದೂ ಹೇಳುತ್ತಿದ್ದಾರೆ. ಇದರಿಂದ ಅವರಿಗೆ ಆತಂಕ ಶುರುವಾಗಿದೆ. ಒಂದು ಕಡೆ ಮಕ್ಕಳಿಗೆ ಆದ ಅಪಾಯ ಮತ್ತೊಂದು ಕಡೆ ಬಿಲ್ ಪಾವತಿಸುವ ಸಮಸ್ಯೆ. ಈ ಶಾಲೆಯನ್ನು ಪ್ರತಿಷ್ಠಿತ ಕೆಎಲ್ ಇ ಸಂಸ್ಥೆ ನಡೆಸುತ್ತಿದೆ ಎಂದು ತಿಳಿದು ಬಂದಿದೆ. ಈ ಅವಘಡವನ್ನು ಕುರಿತು ಶಿಕ್ಷಣ ಇಲಾಖೆಯ ಬಿಇಓ ಅವರಿಗೆ ಮಾಹಿತಿ ನೀಡಿಲ್ಲ ಎಂದೂ ಹೇಳಲಾಗುತ್ತಿದೆ. ಇಂತಹ ಅಚಾತುರ್ಯಗಳು ನಡೆದಾಗ ಶಿಕ್ಷಣ ಇಲಾಖೆಯ ಗಮನಕ್ಕೆ ತರುವುದು ಶಾಲಾ ಆಡಳಿತ ಮಂಡಳಿಯ ಕರ್ತವ್ಯ. ಆದರೆ ಈ ಕೆಲಸವನ್ನು ಬೆಳಗಾವಿ ವರದಿ ದಿನಪತ್ರಿಕೆ ಮಾಡುತ್ತಿದೆ. ಕೂಡಲೇ ಶಿಕ್ಷಣ ಇಲಾಖೆ ಸೂಕ್ತ ಕ್ರಮ ಕೈಗೊಳ್ಳಬೇಕು. ಭವಿಷ್ಯದಲ್ಲಿ ಇಂತಹ ಘಟನೆಗಳು ನಡೆಯದ ಹಾಗೆ ಶಾಲೆಗಳು ಗಮನ ಹರಿಸಬೇಕು ಎನ್ನುವುದಷ್ಟೇ ಪತ್ರಿಕೆಯ ಕಾಳಜಿ.

## ಸತೀಶ್ ಜಾರಕಿಹೊಳಿಗೆ ಡಿಸಿಎಂ ಸ್ಥಾನ ನೀಡುವಂತೆ ದಲಿತ ಮುಖಂಡರ ಒತ್ತಾಯ



ಗೋಕಾಕ: ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಅವರಿಗೆ ಡಿಸಿಎಂ ಸ್ಥಾನ ನೀಡುವಂತೆ ಒತ್ತಾಯಿಸಿ ದಲಿತ ಸಂಘರ್ಷ ಸಮಿತಿ ಸೇರಿದಂತೆ ಇತರ ದಲಿತ ಸಮುದಾಯದ ಮುಖಂಡರು ಬುಧವಾರ ಒತ್ತಾಯಿಸಿದ್ದಾರೆ. ಪಟ್ಟಣದಲ್ಲಿ ಮಾಧ್ಯಮದವರೊಂದಿಗೆದಲಿತ ಸಮುದಾಯದ ಮುಖಂಡ ರಮೇಶ ಮಾದರ ಮಾತನಾಡಿ, ಸತೀಶ್ಜಾರಕಿಹೊಳಿ ಅವರು ಸಮಾಜ ಮೌಢ್ಯದ ವಿರುದ್ಧ ಕಾರ್ಯಕ್ರಮಗಳನ್ನು ರೂಪಿಸಿಕೊಂಡು ಸಮಾಜವನ್ನು ತಿದ್ದುವ ಕಾರ್ಯದಲ್ಲಿ ತೊಡಗಿದ್ದು, ನಿಷ್ಪಕ್ಷಪಾತ ಸೇವೆಯನ್ನು ಸಲ್ಲಿಸುತ್ತಿದ್ದಾರೆ. ಪ್ರಗತಿಪರ ಚಿಂತನೆಯನ್ನು ಮೈಗೂಡಿಸಿಕೊಂಡು ಶೋಷಣೆಗೊಳಗಾದ ಸಮುದಾಯಗಳಾದ ಎಸ್ಸಿ, ಎಸ್ಟಿ ಹಾಗೂ ಹಿಂದುಳಿದ ವರ್ಗಗಳು, ಅಲ್ಪಸಂಖ್ಯಾತರ ಸಾಮಾಜಿಕ, ಶೈಕ್ಷಣಿಕ ಹಾಗೂ ರಾಜಕೀಯ ಶ್ರೇಯೋ ಭಿವೃದ್ಧಿಗಾಗಿ ಶ್ರಮಿಸುತ್ತಿದ್ದಾರೆ. ಇಂತಹ ವರಿಗೆ ಸಮಾಜದಲ್ಲಿ ಹೆಚ್ಚಿನ ಸೇವೆ ಮಾಡಲು ಕಾಂಗ್ರೆಸ್ ಪಕ್ಷ ಡಿಸಿಎಂ ಸ್ಥಾನಮಾನ ನೀಡಬೇಕು ಎಂದು ಆಗ್ರಹಿಸಿದ್ದಾರೆ.

## ಅಂಧ ವಿದ್ಯಾರ್ಥಿನಿಗೆ ಸ್ಥಳದಲ್ಲೇ ಕೆಲಸ ಕೊಡಿಸಿದ ಡಿಸಿಎಂ ಡಿಕೆಶಿ



ಬೆಂಗಳೂರು: ಬಿಎ ಪದವಿ ಪಡೆದ ಅಂಧ ವಿದ್ಯಾರ್ಥಿನಿಗೆ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಆಸರೆ ಆಗಿದ್ದಾರೆ.

ಸುಂಕದಕಟ್ಟೆ ಶಾಂತಿಧಾಮ ಸಂಸ್ಥೆಯ ಅಂಧ ವಿದ್ಯಾರ್ಥಿನಿಯಾಗಿರುವ ದಿವ್ಯಾಂಜಲಿ ಎಂಬುವವರಿಗೆ ಸ್ವಾವಲಂಬಿ ಜೀವನ ನಡೆಸುವ ಉದ್ದೇಶದಿಂದ ಕೆಲಸವೊಂದನ್ನು ಕೊಡಿಸುವ ಮೂಲಕ ಅಂಧ ವಿದ್ಯಾರ್ಥಿನಿ ಬಾಳಿಗೆ ಬೆಳಕಾಗಿದ್ದಾರೆ.

ಯಲಹಂಕದ ಅಂಬೇಡ್ಕರ್ ಭವನದಲ್ಲಿ ಜನಸ್ಪಂದನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಈ ವೇಳೆ ಅಲ್ಲಿಗೆ ಆಗಮಿಸಿದ್ದ ದಿವ್ಯಾಂಜಲಿ ಅವರು, 'ನನಗೆ ಕಣ್ಣು ಕಾಣಲ್ಲ, ಹಾಗಾಗಿ ಎಲ್ಲೂ ಕೆಲಸ ಸಿಗುತ್ತಿಲ್ಲ. ಹೀಗಾಗಿ ಕೆಲಸ ಕೊಡಿಸುವಂತೆ ಡಿಕೆ ಶಿವಕುಮಾರ್ ಅವರಿಗೆ ಮನವಿ ಮಾಡಿಕೊಂಡಿದ್ದರು. ಕೂಡಲೇ ಮನವಿಗೆ ಸ್ಪಂದಿಸಿದ ಡಿಸಿಎಂ, ಸ್ಥಳದಲ್ಲಿಯೇ ದಿವ್ಯಾಂಜಲಿಗೆ ಃಃಒಕ ಯಲ್ಲಿ ಕೆಲಸ ಕೊಡಿಸಿದ್ದಾರೆ.

ಹೌದು, ದಿವ್ಯಾಂಜಲಿ ಅವರ ಪದವಿ ಸರ್ಟಿಫಿಕೇಟ್ ಪರಿಶೀಲಿಸಿ, ಬಿಬಿಎಂಪಿ ಅಧಿಕಾರಿಗಳಿಗೆ ಕೆಲಸಕೊಡುವಂತೆ ತಾಕೀತು ಮಾಡಿದ್ದಲ್ಲದೆ, ಕಾಲ್ ಸೆಂಟರ್ ಅಥವಾ ಕೂತು ಮಾಡುವ ಕೆಲಸವನ್ನೇ ಕೊಡಲು ಬಿಬಿಎಂಪಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಇದೇ ಜನವರಿ.03 ರಿಂದ ಬೆಂಗಳೂರಿನಲ್ಲಿ ಜನಸ್ಪಂದನಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಬಿಬಿಎಂಪಿ ಕೇಂದ್ರ ಕಚೇರಿಯ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯ ಬಳಿಕ ಮಾತನಾಡಿದ್ದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು 'ಸುಮಾರು 10 ದಿನ ಜನಸ್ಪಂದನಾ ಕಾರ್ಯಕ್ರಮ ನಡೆಯಲಿದೆ. ನಾನು, ಸಂಬಂಧಪಟ್ಟ ಶಾಸಕರು, ಅಧಿಕಾರಿಗಳು ಭಾಗಿಯಾಗಲಿದ್ದೇವೆ ಎಂದಿದ್ದರು. ಅದರಂತೆ ಜನರ ಸಮಸ್ಯೆಗಳಿಗೆ ಸ್ಪಂಧಿಸಿದ ಅವರು ಸ್ಥಳದಲ್ಲೇ ಆದಷ್ಟು ಸಾರ್ವಜನಿಕರ ಸಮಸ್ಯೆಗಳನ್ನು ಬಗೆಹರಿಸಿದರು.

## ಇನ್ನು ಹಾಜರಾತಿ ಆಧರಿಸಿ ವೇತನ: ಗ್ರಾಪಂ ಸಿಬ್ಬಂದಿಗೆ ಆನ್ ಲೈನ್ ಹಾಜರಾತಿ ಕಡ್ಡಾಯ




ಬೆಂಗಳೂರು: ಗ್ರಾಮ ಪಂಚಾಯತಿ ಸಿಬ್ಬಂದಿಗೆ ಆನ್ಲೈನ್ ಹಾಜರಾತಿ ಕಡ್ಡಾಯಗೊಳಿಸಲಾಗಿದೆ. ಹಾಜರಾತಿ ಆಧರಿಸಿ ವೇತನ ಪಾವತಿಸಲಾಗುವುದು.

ಪಂಚಾಯತ್ ರಾಜ್ ಸಂಸ್ಥೆಗಳ ಕಾರ್ಯನಿರ್ವಹಣೆ ಸುಗಮಗೊಳಿಸುವ ಉದ್ದೇಶದಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ವತಿಯಿಂದ ಪಂಚತಂತ್ರ 2.0 ತಂತ್ರಾಂಶ ಅನುಷ್ಠಾನಗೊಳಿಸಲಾಗಿದೆ. ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಗ್ರಾಪಂ ಕಾರ್ಯದರ್ಶಿ, ದ್ವಿತೀಯ ದರ್ಜೆ ಲೆಕ್ಕ ಸಹಾಯಕರು, ಗ್ರಾಮ ಪಂಚಾಯಿತಿ ಸಿಬ್ಬಂದಿಗೆ ಪ್ರತಿದಿನ ತಮ್ಮ ಹಾಜರಾತಿನ ನಮೂದಿಸಲು ಈ ತಂತ್ರಾಂಶದಲ್ಲಿ ಅವಕಾಶ ಕಲ್ಪಿಸಲಾಗಿದೆ. ಗ್ರಾಮ ಪಂಚಾಯತಿ ಸಿಬ್ಬಂದಿ ಮಾಸಿಕ ವೇತನವನ್ನು ಇದೇ ತಂತ್ರಾಂಶದ ಮೂಲಕ ಆನ್ಲೈನ್ ನಲ್ಲಿ ಪಾವತಿಸಲಾಗುವುದು. ಅನೇಕರು ತಮ್ಮ ಹಾಜರಾತಿಯನ್ನು ನಿಯಮತವಾಗಿ ದಾಖಲಿಸುತ್ತಿಲ್ಲ. ಈ ಹಿನ್ನಲೆಯಲ್ಲಿ ಇನ್ನು ಇ-ಹಾಜರಾತಿ ಮಾಡ್ಯೂಲ್ ನಲ್ಲಿ ದಾಖಲಾದ ಹಾಜರಾತಿ ಆಧರಿಸಿ ಸಿಬ್ಬಂದಿ ವೇತನ ಪಾವತಿಸಲಾಗುವುದು. ಕಡ್ಡಾಯವಾಗಿ ಪಂಚತಂತ್ರ ತಂತ್ರಾಂಶ ಮತ್ತು ಮೊಬೈಲ್ ಆಪ್ ಮೂಲಕ ಗ್ರಾಮ ಪಂಚಾಯತಿ ಸಿಬ್ಬಂದಿ ದೈನಂದಿನ ಹಾಜರಾತಿಯನ್ನು ತಪ್ಪದೇ ಅಳವಡಿಸಲು ಪಂಚಾಯತ್ ರಾಜ್ ಇಲಾಖೆ ಆಯುಕ್ತರು ತಿಳಿಸಿದ್ದಾರೆ.

## ರಾಜ್ಯ ಬಿಜೆಪಿಯಲ್ಲಿ ಮೂಲೆಗುಂಪಾಗಿರುವ ಬೊಮ್ಮಾಯಿ ಅವರಿಗೆ ಇಂತಹ ಹುಸಿ ಆರೋಪ ಅನಿವಾರ್ಯ; ಮಾಜಿ ಸಿಎಂ ಗೆ ಸಿಎಂ ಟಾಂಗ್



ಬೆಂಗಳೂರು: ಬರಪರಿಹಾರ ಬಿಡುಗಡೆಗೆ ಕೇಂದ್ರ ಸರ್ಕಾರದ ಆರ್ಥಿಕ ದುಸ್ಥಿತಿ ಕಾರಣ ಎಂದು ಬಸವರಾಜ ಬೊಮ್ಮಾಯಿ ಅವರು ಹೇಳಬೇಕಾಗಿತ್ತು, ಬಾಯಿ ತಪ್ಪಿ ಕೇಂದ್ರ ಸರ್ಕಾರದ ಬದಲಿಗೆ ರಾಜ್ಯ ಸರ್ಕಾರ ಎಂದು ಹೇಳಿದಂತೆ ಕಾಣುತ್ತಿದೆ ಎಂದು ಸಿಎಂ ಸಿದ್ದರಾಮಯ್ಯ ಟಾಂಗ್ ನೀಡಿದ್ದಾರೆ.

ರಾಜ್ಯದ ರೈತರು ಬರಗಾಲದ ಬವಣೆಯಿಂದ ತತ್ತರಿಸಿಹೋಗಿದ್ದಾರೆ. ಬರಪರಿಹಾರದ ಕೆಲಸಗಳಿಗಾಗಿ 18,177 ಕೋಟಿ ರೂಪಾಯಿ ನೀಡಲು ಮೂರು ತಿಂಗಳುಗಳಿಂದ ಕೇಂದ್ರ ಸರ್ಕಾರವನ್ನು ಒತ್ತಾಯಿಸುತ್ತಾ ಬಂದಿದ್ದೇವೆ. ಪತ್ರ ಬರೆದಿದ್ದೇವೆ, ಇಲ್ಲಿಯ ವರೆಗೆ ನಯಾಪೈಸೆ ಹಣ ನೀಡಿಲ್ಲ. ಕೇಂದ್ರ ಸರ್ಕಾರದ ಇಂತಹ ಕಠಿಣ ನಿಲುವಿಗೆ ಒಂದೋ ಸನ್ಮಾನ್ಯ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರದ ದ್ವೇಷದ ರಾಜಕಾರಣ ಕಾರಣ ಇರಬಹುದು, ಇಲ್ಲದೆ ಇದ್ದರೆ ಕೇಂದ್ರ ಸರ್ಕಾರದ ಆರ್ಥಿಕ ದುಸ್ಥಿತಿ ಕಾರಣವಾಗಿರಬಹುದು. ಅದೇನು ಎನ್ನುವುದನ್ನು ಬೊಮ್ಮಾಯಿಯವರೇ ರಾಜ್ಯದ ಜನತೆಗೆ ಸ್ಪಷ್ಟೀಕರಣ ನೀಡಬೇಕು ಎಂದಿದ್ದಾರೆ.

ಮಳೆಗಾಲ ಕಳೆದುಹೋಗಿ ರಾಜ್ಯ ಬೇಸಿಗೆ ಕಾಲಕ್ಕೆ ಕಾಲಿಡುತ್ತಿದೆ. ಕಳೆದ ಆರು ತಿಂಗಳಿಂದ ಬರಪೀಡಿತ ಪ್ರದೇಶದ ರೈತರು ಕಡುಕಷ್ಟದಲ್ಲಿ ಜೀವನ ಸಾಗಿಸುತ್ತಿದ್ದಾರೆ. ಬರಪೀಡಿತ ರೈತ ಕುಟುಂಬಕ್ಕೆ ತಲಾ ಎರಡು ಸಾವಿರ ರೂಪಾಯಿ ನಗದಿನ ಜೊತೆ ಸಾಧ್ಯ ಇರುವ ಎಲ್ಲ ನೆರವನ್ನು ರಾಜ್ಯ ಸರ್ಕಾರ ನೀಡುತ್ತಿದೆ. ಅನ್ನಭಾಗ್ಯವೂ ಸೇರಿದಂತೆ ನಮ್ಮ ಗ್ಯಾರಂಟಿ ಯೋಜನೆಗಳಿಂದಾಗಿ ಜನತೆ ಕಷ್ಟ-ನಷ್ಟದ ನಡುವೆಯೂ ಉಸಿರಾಡುವಂತಾಗಿದೆ. ಹೀಗಿದ್ದರೂ ಕಟುಕನಂತೆ ವರ್ತಿಸುತ್ತಿರುವ ಕೇಂದ್ರದ ಬಿಜೆಪಿ ಸರ್ಕಾರ ಬರಪರಿಹಾರ ನೀಡದೆ ಸತಾಯಿಸುತ್ತಿದೆ.

ಕೇಂದ್ರ ಸರ್ಕಾರದ ರಾಜ್ಯ ವಿರೋಧಿ ನೀತಿಯಿಂದಾಗಿ ತೆರಿಗೆ ಹಂಚಿಕೆಯಲ್ಲಿಯೂ ಕರ್ನಾಟಕಕ್ಕೆ ಅನ್ಯಾಯವಾಗುತ್ತಿದೆ. ಜಿಎಸ್‌ಟಿ ಪಾವತಿಯಲ್ಲಿ ಕರ್ನಾಟಕ ರಾಜ್ಯ ದೇಶದಲ್ಲಿಯೇ ಎರಡನೇ ಸ್ಥಾನದಲ್ಲಿ ಇದ್ದರೂ ತೆರಿಗೆ ಹಂಚಿಕೆಯಲ್ಲಿ ಕೇಂದ್ರ ಸರ್ಕಾರ ಮಾಡುತ್ತಿರುವ ಅನ್ಯಾಯ ಈಗ ಜಗಜ್ಜಾಹೀರಾಗಿದೆ. ಸ್ಥಳೀಯ ಸಂಸ್ಥೆಗಳು, ವಿಪತ್ತು ನಿರ್ವಹಣೆ ಮತ್ತು ಆರೋಗ್ಯ ಕ್ಷೇತ್ರಗಳಿಗೆ 2021-22ರಿಂದ 2023-24ರ ವರೆಗಿನ ಮೂರು ವರ್ಷಗಳ ಅವಧಿಗೆ 29,110 ಕೋಟಿ ರೂಪಾಯಿ ಬಿಡುಗಡೆ ಮಾಡಬೇಕಾಗಿತ್ತು, ಬಿಡುಗಡೆಗೊಳಿಸಿದ್ದು ಕೇವಲ 11,449 ಕೋಟಿ ರೂಪಾಯಿ ಮಾತ್ರ.

ವಿಪತ್ತು ನಿರ್ವಹಣೆಗೆ ಅನುದಾನದ ರೂಪದಲ್ಲಿ ಕೇಂದ್ರ ಸರ್ಕಾರವೇ ನಿಗದಿಗೊಳಿಸಿರುವ ಮಾನದಂಡಗಳನ್ನು ಆಧರಿಸಿ ಹದಿನೈದನೆ ಹಣಕಾಸು ಆಯೋಗದ ಶಿಫಾರಸ್ಸಿನಂತೆ ರೂ.4,369 ಕೋಟಿ ನೀಡಬೇಕಾಗಿತ್ತು. ಆದರೆ ಕಳೆದ ಮೂರು ವರ್ಷಗಳಲ್ಲಿ ಕೇಂದ್ರ ಸರ್ಕಾರ ಕರ್ನಾಟಕಕ್ಕೆ ನೀಡಿರುವುದು ಕೇವಲ ರೂ.1,803 ಕೋಟಿ ಮಾತ್ರ. ಆರು ತಿಂಗಳುಗಳ ಹಿಂದೆ ಬಸವರಾಜ ಬೊಮ್ಮಾಯಿ ಅವರೇ ಮುಖ್ಯಮಂತ್ರಿಯಾಗಿದ್ದರು. ಆದರೆ ಕರ್ನಾಟಕಕ್ಕೆ ಕೇಂದ್ರ ಸರ್ಕಾರದಿಂದ ಆಗುತ್ತಿರುವ ಅನ್ಯಾಯದ ವಿರುದ್ಧ ಸೊಲ್ಲೆತ್ತುವ ಧೈರ್ಯ ಮಾಡದೆ ರಾಜ್ಯದ ರೈತರಿಗೆ ದ್ರೋಹ ಎಸಗಿದ್ದರು. ಇವರಿಗೆ ನಮ್ಮ ಸರ್ಕಾರದ ವಿರುದ್ಧ ಸುಳ್ಳು ಆರೋಪಗಳನ್ನು ಮಾಡುವ ನೈತಿಕತೆ ಎಲ್ಲಿದೆ? ಎಂದು ಪ್ರಶ್ನಿಸಿದ್ದಾರೆ.

ಬಿ.ಎಸ್. ಯಡಿಯೂರಪ್ಪ ಮತ್ತು ಬಸವರಾಜ ಬೊಮ್ಮಾಯಿ ಅವರು ತಮ್ಮ ಅಧಿಕಾರಾವಧಿಯ ನಾಲ್ಕು ವರ್ಷಗಳ ಆಳ್ವಿಕೆಯಲ್ಲಿ ದುರಾಡಳಿತ ಮತ್ತು ಭ್ರಷ್ಟಾಚಾರದಿಂದಾಗಿ ಕರ್ನಾಟಕ ರಾಜ್ಯವನ್ನು ದಿವಾಳಿ ಸ್ಥಿತಿಗೆ ತಂದಿಟ್ಟಿದ್ದರು. ಸಾವಿರಾರು ಕೋಟಿ ರೂಪಾಯಿಗಳ ಬಾಕಿ ಬಿಲ್ ಗಳನ್ನು ನಾವು ಪಾವತಿ ಮಾಡಬೇಕಾಗಿದೆ. ಈಗ ತಮ್ಮ ಪಾಪದ ಹೊರೆಯನ್ನು ನಮ್ಮ ಸರ್ಕಾರದ ಹೆಗಲಿಗೆ ಹೊರಿಸಲು ಬೊಮ್ಮಾಯಿಯವರು ಒದ್ದಾಡುತ್ತಿದ್ದಾರೆ. ರಾಜ್ಯದ ಜನತೆಗೆ ಸತ್ಯ ತಿಳಿದಿದೆ.

ಕನ್ನಡಿಗರು ಕೇಂದ್ರ ಸರ್ಕಾರಕ್ಕೆ 1 ರೂಪಾಯಿ ತೆರಿಗೆ ಪಾವತಿಸಿದರೆ ಕರ್ನಾಟಕದ ಅಭಿವೃದ್ಧಿಗಾಗಿ ವಾಪಾಸ್ ಸಿಗುತ್ತಿರುವುದು ಕೇವಲ 15 ಪೈಸೆ. ಕನ್ನಡಿಗರು ಬೆವರು ಸುರಿಸಿ ದುಡಿದ ದುಡ್ಡನ್ನು ಉತ್ತರದ ರಾಜ್ಯಗಳಿಗೆ ಹಂಚಿಕೆ ಮಾಡಲಾಗುತ್ತಿದೆ. ಆರ್ಥಿಕ ವರ್ಷ ಆರಂಭವಾಗಿ 6 ತಿಂಗಳು ಕಳೆದರೂ ಕೇಂದ್ರ ಸರ್ಕಾರದ ಸಹಯೋಗದ 61 ಯೋಜನೆಗಳಿಗೆ ಸಂಬಂಧಿಸಿದಂತೆ 23 ಇಲಾಖೆಗಳಿಗೆ ನಯಾಪೈಸೆ ಅನುದಾನ ಬಿಡುಗಡೆಯಾಗಿರಲಿಲ್ಲ. ಈ ಅನ್ಯಾಯವನ್ನು ಪ್ರಶ್ನಿಸುವ ಎದೆಗಾರಿಕೆ ಬಸವರಾಜ ಬೊಮ್ಮಾಯಿ ಅವರಿಗಿಲ್ಲ. ಇದಕ್ಕಾಗಿ ತಮ್ಮ ವೈಫಲ್ಯವನ್ನು ಮುಚ್ಚಿಡಲು ಬಿಜೆಪಿ ನಾಯಕರು ನಮ್ಮ ಸರ್ಕಾರದ ವಿರುದ್ಧ ಹುಸಿ ಆರೋಪಗಳನ್ನು ಮಾಡುತ್ತಿದ್ದಾರೆ. ರಾಜ್ಯ ಬಿಜೆಪಿಯಲ್ಲಿ ಮೂಲೆಗುಂಪಾಗಿರುವ ಬೊಮ್ಮಾಯಿ ಅವರಿಗೆ ತನ್ನ ಅಸ್ತಿತ್ವವನ್ನು ತೋರಿಸಲು ಇಂತಹ ಹುಸಿ ಆರೋಪಗಳು ಅನಿವಾರ್ಯವಾಗಿರಬಹುದು ಎಂದು ವ್ಯಂಗ್ಯವಾಡಿದ್ದಾರೆ.

## ರೈತರೇ ಬೆಳೆಸಿದ ಮಾದರಿ ರೈತ ನಾಯಕ ಬಾಬಾಗೌಡ್ರು ಪಾಟೀಲ

ನಮ್ಮ ಈ ಭರತ ಭೂಮಿ ಸ್ವಾಭಿಮಾನಕ್ಕೆ ಹೆಸರಾಗಿದ್ದು ಈ ನೆಲ, ಶತಮಾನಗಳ ಇತಿಹಾಸ ಹೊಂದಿದೆ. ಉಳುವ ಯೋಗಿಯ ನ್ಯಾಟ್ಟ ಅನ್ನೋ ಕುವೆಂಪು ಅವರ ಸಾಲಿನಂತೆ ನಿಕೃಷ್ಟವಾಗಿ ಕಾಣುತ್ತಿರುವ ಸಮಾಜದಲ್ಲಿ ರೈತನಿಗೂ ಒಂದು ಗೌರವ ಇದೆ ಆ ರೈತರು ಮನಸು ಮಾಡಿದರೆ ವಿಧಾನಸೌಧವೂ ನಡುಗುತ್ತದೆ ಅನ್ನೋದನ್ನು ಸಾಬೀತು ಮಾಡಿದ ರೈತ ನಾಯಕ ಬಾಬಾಗೌಡ್ರು ಪಾಟೀಲರು. ಈ ನೆಲದ ದುಡಿಮೆಗಾರರ ಬೆವರಿಗೆ ಸೂಕ್ತ ಮನ್ನಣೆ ಸಿಗಬೇಕು ಕೃಷಿಕರು ಎಲ್ಲರಂತೆ ಸ್ವಾಭಿಮಾನದ ಬದುಕು ಕಂಡುಕೊಳ್ಳಬೇಕು ಎಂದು ಹಗಲಿರುಳು ಚಿಂತೆನೆ ಹೋರಾಟ ,ಮಾಡಿದ ಜೀವ ನಮ್ಮ ಉತ್ತರ ಕರ್ನಾಟಕದ ಹೆಮ್ಮೆಯ ಹೋರಾಟಗಾರ ಇವರು.

ಸ್ವಾತಂತ್ರ ಹೊಂದಿದ ನಂತರ ತಮ್ಮ ಹಕ್ಕುಗಳಿಗೆ ದೀನದಲಿತರು ಕಾರ್ಮಿಕರು ಹೋರಾಟ ಮಾಡತೊಡಗಿದರು. ಭ್ರಷ್ಟ ಅಧಿಕಾರಿಗಳ ಬಟ್ಟೆ ಬಿಚ್ಚಿ, ರಾಜಕಾರಣಿಗಳನ್ನು ಕಂಬಕ್ಕೆ ಕಟ್ಟಿ ಹಾಕಿ, ರೈತರ ಅಪ್ಪಣೆಯಿಲ್ಲದೆ ಯಾವುದೇ ಸರಕಾರಿ ನೌಕರರು ಗ್ರಾಮ ಪ್ರವೇಶ ಮಾಡೋ ಹಾಗಿಲ್ಲ ರೈತನಲ್ಲ ಸಾಲಗಾರ ಸರಕಾರವೇ ಬಾಕಿದಾರ



ಸರ್ಕಾರವೇ ಬಾಕಿದಾರ

ನೇರವಾಗಿ ಚಳುವಳಿ ಮಾಡಲು ಸಾಧ್ಯ ಅಂದ್ರೆ ಅಂದಿನ ರೈತ ಸಂಘ.

ಇದರಲ್ಲಿಯ ರೈತರನ್ನು ಒಡಗೂಡಿಸಿ ಅವರ ಬೆವರ ಹನಿಗೆ ಫಲ ನೀಡದವರು ಕರ್ನಾಟಕದ ರೈತನಾಯಕರಾದ ನಂಜುಂಡಸ್ವಾಮಿ, ಬಾಬಾಗೌಡ ಪಾಟೀಲ,ಸುಂದರೇಶ, ಪುಟ್ಟಣ್ಣಯ್ಯ, ರುದ್ರಪ್ಪನವರು .

ಅಂತಹ ನಾಯಕರಲ್ಲಿ ಒಬ್ಬರಾದ ಬಾಬಾಗೌಡ ಪಾಟೀಲರಿಗೆ ಇಂದು ಜನ್ಮದಿನದ ಸಂಭ್ರಮ . ಆ ನಿಮಿತ್ಯಕ್ಕಾಗಿ ಅವರ ಹೋರಾಟದ ಕೆಲವು ತುಣುಕುಗಳ ನೆನೆಯುವ ಪ್ರಯತ್ನ ಇದು.

ದೇಶದ ಬೆನ್ನಲುಬಿಗೆ ಆಸರೆಯಾಗಿ ನಿಂತ ನಾಯಕ ಬಾಬಾಗೌಡರು ಸಾಮನ್ಯ ಕೃಷಿಕುಟುಂಬದಲ್ಲಿ ಹುಟ್ಟಿದ ಇವರು ದಿಲ್ಲಿಯ ಸಂಸದ ಭವನ ಪ್ರವೇಶಿಸಿ ಕೇಂದ್ರ ಮಂತ್ರಿಗಳಾದರು.

ಪ್ರಬಲ ವಾಗ್ಮಿಗಳಾದ ಶ್ರೀ ಬಾಬಾಗೌಡ ಪಾಟೀಲರು ಇಂದು ಅವರು ನಮ್ಮನ್ನು ಅಗಲಿ ಮೂರು ವರ್ಷವಾಯಿತು ಆದರೆ ಅವರು ಬಿತ್ತಿದ ಬೀಜಗಳು ಹೆಮ್ಮರವಾಗಿ ರೈತಪರ ಕೂಗಿಗೆ ಶಕ್ತಿಯಾಗಿವೆ.

ರೈತ ಹಾಗೂ ಅವನ ಅವಲಂಬಿತನ ಕುಟುಂಬ ನೆಮ್ಮದಿಯಾಗಿ ಬದುಕಬೇಕೆಂದರೆ ಆತ ಬಿತ್ತಿ ಬೆಳೆದ ಬೆಳೆಗೆ ಸೂಕ್ತ ಬೆಲೆ ಸಿಗಬೇಕು. ರೈತವಿರೋಧಿ ಕಾನೂನುಗಳಿಗೆ ಮನ್ನಣೆ ಸಿಗಬಾರದು.ಆತನು ಈ ದೇಶದಲ್ಲಿ ಗೌರವಯುತ ಜೀವನ ನಡಸೇಕು ಎಂದು ಬೀದಿಗಿಳಿದು ಚಳುವಳಿ ಮಾಡಿದರು. ಜನ ಬುತ್ತಿಗಂಟು ಸಮೇತ ಬಾಬಾಗೌಡರ ಜೊತೆಯಾದರು.ರೈತನ ಕಷ್ಟಗಳಿಗೆ ಕೇಂದ್ರದಲ್ಲಿ ಮಂತ್ರಿಯಾದ ಸಂದರ್ಭದಲ್ಲಿ ಗ್ರಾಮ ಸಡಕ್ ಯೋಜನೆಯನ್ನು ಜಾರಿಗೆ ತಂದರು. ಮರಣಹೊಂದುವ ಮುನ್ನಾ ವರ್ಷಗಳಲ್ಲಂತೂ ರೈತಸಂಘದ ಹಿಂದಿನ ಹೋರಾಟಗಳನ್ನು ನೆನಪಿಸುವಂತಹ ಪ್ರತಿಭಟನೆ ಹಾಗೂ ಭಾಷಣಗಳನ್ನು ಮಾಡುವ ಮೂಲಕ ರೈತನ ಕೂಗಿಗೆ ಧ್ವನಿಯಾಗಿದ್ದರು. ಕೇಂದ್ರದಲ್ಲಿ ದಿವಗಂತ ಪ್ರಧಾನ ಮಂತ್ರಿ ವಾಜಪೇಯಿಯವರ ಸಂಪುಟದಲ್ಲಿ ಅಷ್ಟು ದೊಡ್ಡ ಹುದ್ದೆಯಲ್ಲಿದ್ದು ಬಂದಿದ್ದರೂ ಹಳ್ಳಿಯ ತಮ್ಮ ನಿತ್ಯ ಕಾಯಕ ಕೃಷಿಯಲ್ಲಿ ನಿರತರಾಗಿದ್ದರು. ಕೃಷಿಯಲ್ಲಿ ಪ್ರಯೋಗಗಳನ್ನು ಮಾಡುತ್ತಾ ಹೋರಾಟಗಳನ್ನು ಮುಂದುವರೆಸಿದ್ದರು ಏನು ಗೊತ್ತಿಲ್ಲ ಇಂದಿನ ಈ ತಲಿಮಾರಿನ ಯುವಜನಕ್ಕೆ ನಮ್ಮ ಬಾಬಾಗೌಡ ಪಾಟೀಲ್ರು ಹಾಗೂ ಅವರ ಜೊತೆ ಇದ್ದ ರೈತ ಹೋರಾಟಗಾರರ ಬಗ್ಗೆ ಪರಿಚಯ ಇಲ್ಲದೆ ಇರಬಹುದು ಆದರೆ ತಿಳಿದುಕೊಳ್ಳಬೇಕಾಗಿರೋ ಪರಿಸ್ಥಿತಿ ಬಂದಿದೆ. ಇತಿಹಾಸ ತಿಳಿಯದ ದೇಶಕ್ಕೆ ಭವಿಷ್ಯವಿಲ್ಲ ಅಂತಾರೆ ಹಾಗೆ ಕ್ರಾಂತಿಕಾರಿ ರೈತ ನಾಯಕ ಬಾಬಾ ಗೌಡ್ರು ಪಾಟೀಲ್ರು ಅವರ ಇತಿಹಾಸ ಅವರ ಹೋರಾಟವನ್ನು ನಾವು ತಿಳಿಯದೆ ಇದ್ದರೆ ನಿಜವಾಗಿಯೂ ನಾವೆಲ್ಲ ಭವಿಷ್ಯವನ್ನು ಕಳೆದುಕೊಳ್ಳುತ್ತಿದ್ದೇವೆ..

ದೇಶಕ್ಕೆ ಹಸಿರೇ ಮುಖ್ಯ ಆ ಹಸಿರಿಗೆ ಉಸಿರು ನೀಡಿದ ಬಾಬಾಗೌಡರೆ ಮತ್ತೊಮ್ಮೆ ಹುಟ್ಟಿ ಬನ್ನಿ.

## ಬುದ್ಧಿಮಾಂದ್ಯ ಮಗಳ ಮೇಲೆ ತಂದೆಯಿಂದಲೇ ಅತ್ಯಾಚಾರ




ಬೆಳಗಾವಿ: ಬುದ್ಧಿಮಾಂದ್ಯ ಮಗಳ ಮೇಲೆ ತಂದೆಯೇ ನಿರಂತರ ಅತ್ಯಾಚಾರ ಎಸಗಿ, ಗರ್ಭಿಣಿಯನ್ನಾಗಿಸಿದ ಪ್ರಕರಣ ಮಗು ಜನಿಸಿದ ಬಳಿಕ ಬೆಳಕಿಗೆ ಬಂದ ಘಟನೆ ಬೆಳಗಾವಿ ಜಿಲ್ಲೆಯ ಬೆಳವಟ್ಟಿ ಗ್ರಾಮದಲ್ಲಿ ನಡೆದಿದೆ.

ತಾಲೂಕಿನ ಬೆಳವಟ್ಟಿ ಗ್ರಾಮದಲ್ಲಿ ತಾಯಿ ಇಲ್ಲದ ಮಾನಸಿಕ ಅಸ್ವಸ್ಥ ಮಗಳೊಂದಿಗೆ ಮನೆಯಲ್ಲಿ ಆಕೆಯ ತಂದೆಯೇ ನಿರಂತರ ಅತ್ಯಾಚಾರ ಎಸಗಿದ್ದು, ಆಕೆ ಗರ್ಭಿಣಿಯಾಗಿರುವ ಬಗ್ಗೆ ಸ್ಥಳೀಯರಿಂದ ಅನುಮಾನ ವ್ಯಕ್ತವಾದ ಬಳಿಕ ಗ್ರಾಮದ ಆಶಾ ಕಾರ್ಯಕರ್ತೆಯರ ಮೂಲಕ ತಪಾಸಣೆ ನಡೆಸಿದಾಗ ಗರ್ಭಿಣಿಯಾಗಿರುವ ಮಾಹಿತಿ ದೃಢಪಟ್ಟಿದೆ.

ಸರ್ಕಾರೇತರ ಸಂಸ್ಥೆಯೊಂದು 2023ರ ಫೆಬ್ರವರಿ ತಿಂಗಳಲ್ಲಿ ಬೆಳಗಾವಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ ಆಧಾರದ ಮೇಲೆ ಪ್ರಕರಣ ದಾಖಲಿಸಿಕೊಂಡ ಪೊಲೀಸರು ತನಿಖೆ ನಡೆಸಿದ್ದಾರೆ. ಬುದ್ಧಿಮಾಂದ್ಯೆಯ ತಂದೆ ಮೇಲೆ ಅನುಮಾನಗೊಂಡು ತಂದೆ ಹಾಗೂ ಆಕೆಗೆ ಜನಿಸಿದ ಮಗುವಿನ ಡಿಎನ್‌ಎ ಪರೀಕ್ಷಿಸಿದ ಬಳಿಕ ಆತನೇ ಮಗುವಿನ ತಂದೆ ಎನ್ನುವುದು ದೃಢಪಟ್ಟಿದೆ ಎನ್ನಲಾಗಿದೆ.

ಈ ಬಗ್ಗೆ ಪ್ರತಿಕ್ರಿಯಿಸಿರುವ ಪೊಲೀಸ್ ಆಯುಕ್ತ ಎಸ್.ಎನ್.ಸಿದ್ದರಾಮಪ್ಪ ಅವರು, ಬುದ್ಧಿಮಾಂದ್ಯೆಯ ಮೇಲೆ ಅತ್ಯಾಚಾರ ನಡೆಸಲಾಗಿದೆ ಎಂದು ಎನ್.ಜಿ.ಓ ದೂರು ನೀಡಿತ್ತು.

ಈ ಬಗ್ಗೆ ತನಿಖೆ ನಡೆಸಿದಾಗ ಆಕೆಯ ತಂದೆಯೇ ಕೃತ್ಯ ಎಸಗಿರುವುದು ತಿಳಿದು ಬಂದಿದೆ. ಈ ಕುರಿತು ಸಂಬಂಧಿಸಿದ ನ್ಯಾಯಾಲಯಕ್ಕೆ ಈಗಾಗಲೇ ಚಾರ್ಜ್ ಶೀಟ್ ಸಲ್ಲಿಸಲಾಗಿದೆ ಎಂದು ತಿಳಿಸಿದ್ದಾರೆ.

## ಕೋಟ್ಯಂತರ ರೂ. ಅಕ್ರಮ ಸಾಬೀತು: ಬಿಎಸ್ ವೈ ಆಪ್ತನ ಆಸ್ತಿ ಜಪ್ತಿಗೆ ಮುಂದಾದ ಸರ್ಕಾರ

ಮಂಡ್ಯ: 2008-09 ಮತ್ತು 2011-12ರ ಅವಧಿಯಲ್ಲಿ ಮೈಷುಗರ್ ಅಧ್ಯಕ್ಷರಾಗಿದ್ದ ಮಂಡ್ಯದ ಬಿಜೆಪಿ ಮುಖಂಡ, ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಅವರ ಅತ್ಯಾಪ್ತನಾಗಿರುವ ನಾಗರಾಜಪ್ಪನ ವಿರುದ್ಧ ಕೇಳಿ ಬಂದಿದ್ದ ನೂರಾರು ಕೋಟಿ ಅಕ್ರಮ ಮತ್ತು ಭ್ರಷ್ಟಾಚಾರ ಆರೋಪ ತನಿಖೆಯಿಂದ ಸಾಬೀತಾಗಿದೆ.

ತನ್ನ ಅಧ್ಯಕ್ಷತೆಯ ಅಧಿಕಾರವಧಿಯಲ್ಲಿ ಮೈಷುಗರ್ ಕಾರ್ಖಾನೆಗೆ ಬರೋಬ್ಬರಿ ?121 ಕೋಟಿಗಳಷ್ಟು ನಷ್ಟವನ್ನು ಉಂಟು ಮಾಡಿರುವುದು ಉಪ ಲೋಕಾಯುಕ್ತರ ತನಿಖೆಯಿಂದ ಸಾಬೀತಾಗಿದ್ದು, ಇದೀಗ ರಾಜ್ಯದ ಸರ್ಕಾರಿ ಸ್ವಾಮ್ಯದ ಏಕೈಕ ಸಕ್ಕರೆ ಕಾರ್ಖಾನೆ ಮೈಶುಗರ್ ಮಾಜಿ ಅಧ್ಯಕ್ಷ ನಾಗರಾಜಪ್ಪನಿಂದ ನಷ್ಟದ ಹಣ ವಸೂಲಿ ಮಾಡಿ, ಆತನ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಲು ರಾಜ್ಯ ಸರ್ಕಾರ ಮುಂದಾಗಿದೆ.

ಆಪಾದಿತ ನಾಗರಾಜಪ್ಪನ ಆಸ್ತಿ ಗುರುತಿಗೆ ಮಂಡ್ಯ ಜಿಲ್ಲಾಧಿಕಾರಿಗೆ ಮೈಷುಗರ್ ಕಾರ್ಖಾನೆಯ ವ್ಯವಸ್ಥಾಪಕ ನಿರ್ದೇಶಕ ಪತ್ರ ಬರೆದಿದ್ದು, ನಾಗರಾಜಪ್ಪನ ಸ್ಥಿರಾಸ್ತಿ, ಚರಾಸ್ತಿ ವಶಕ್ಕೆ ಪಡೆಯಲು ರಾಜ್ಯ ಸರ್ಕಾರ ಚಿಂತನೆ ಮಾಡಿದೆ. ಲೋಕಾಯುಕ್ತ ತನಿಖೆಯಲ್ಲಿ ಮಾಜಿ ಅಧ್ಯಕ್ಷ ನಾಗರಾಜಪ್ಪ ನಡೆಸಿದ ಅಕ್ರಮ, ಭ್ರಷ್ಟಾಚಾರ ಸಾಬೀತಾದ ಹಿನ್ನೆಲೆಯಲ್ಲಿ ಮಾಜಿ ಅಧ್ಯಕ್ಷನಿಂದ ನಷ್ಟದ ಹಣ ವಸೂಲು ಮಾಡಿ, ಕ್ರಿಮಿನಲ್ ಮೊಕದ್ದಮೆ ದಾಖಲಿಸಲು ಸೂಚನೆ ನೀಡಲಾಗಿದೆ.

2008ರಲ್ಲಿ ಮುಖ್ಯಮಂತ್ರಿಯಾಗಿದ್ದ,



ಬಿಜೆಪಿ ಹಿರಿಯ ಮುಖಂಡ ಬಿಎಸ್ ಯಡಿಯೂರಪ್ಪ ಅವರ ಅಧಿಕಾರವಧಿಯಲ್ಲಿ ನಾಗರಾಜಪ್ಪ ಮೈಶುಗರ್ ಕಾರ್ಖಾನೆ ಅಧ್ಯಕ್ಷರಾಗಿದ್ದರು. ನಾಗರಾಜಪ್ಪ, ಬಿಎಸ್ ಯಡಿಯೂರಪ್ಪ ಅವರ ಸಂಬಂಧಿ ಹಾಗೂ ಪರಮಾಪ್ತನಾಗಿದ್ದಾನೆ. ತಾನು ಅಧ್ಯಕ್ಷನಾಗಿದ್ದ ಅವಧಿಯಲ್ಲಿ ನಾಗರಾಜಪ್ಪ ಹೊಸ ಮಿಲ್ ಖರೀದಿ, ಡಿಸ್ಟಿಲರಿ ಮಾರಾಟ-ಸೋರಿಕೆ, ಮೈ ರಮ್, ಮೈ ವಿಸ್ಕಿ, ಸಕ್ಕರೆ ಮಾರಾಟದಲ್ಲಿ ಭಾರಿ ಅಕ್ರಮ, ಭ್ರಷ್ಟಾಚಾರ ಎಸಗಿದ್ದಾನೆ, ಅಷ್ಟೇ ಅಲ್ಲದೇ ನಾಗರಾಜಪ್ಪ ಮೈಶುಗರ್ ಅಧ್ಯಕ್ಷರಾಗಿದ್ದ ವೇಳೆ ಕಾರ್ಖಾನೆಗೆ 121 ಕೋಟಿ ರೂ. ನಷ್ಟ ಉಂಟಾಗಿತ್ತು ಎಂಬ ಆರೋಪವೂ ಕೇಳಿಬಂದಿತ್ತು.

ಇನ್ನು ನಾಗರಾಜಪ್ಪ ನಡೆಸಿದ ಭ್ರಷ್ಟಾಚಾರದ ವಿರುದ್ಧ ತನಿಖೆಗೆ ಅಂದಿನ ಮುಖ್ಯಮಂತ್ರಿ ಸದಾನಂದಗೌಡ ನೇತೃತ್ವದ ಸರ್ಕಾರ ಲೋಕಾಯುಕ್ತಕ್ಕೆ ಪ್ರಕರಣವನ್ನು ವಹಿಸಿತ್ತು. ಲೋಕಾಯುಕ್ತ ತನಿಖೆ ವೇಳೆ ಅಕ್ರಮ, ಭ್ರಷ್ಟಾಚಾರ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ನಾಗರಾಜಪ್ಪನಿಂದ ನಷ್ಟದ ಹಣ ವಸೂಲಿ ಮಾಡಿ, ಸಿವಿಲ್ ಪ್ರಕರಣ ದಾಖಲಿಸಲು ಲೋಕಾಯುಕ್ತ ಆದೇಶಿಸಿತ್ತು.

ಆದರೆ ಲೋಕಾಯುಕ್ತ ನ್ಯಾಯಾಧೀಶರ ಆದೇಶ ಪಾಲಿಸಲು ಈ ಹಿಂದಿನ ಸರ್ಕಾರ ಹಿಂದೇಟು ಹಾಕಿತ್ತು. ಆದರೆ ಇದೀಗ ಹಾಲಿ ಸಿದ್ದರಾಮಯ್ಯ ಸರ್ಕಾರ ಪ್ರಕರಣ ದಾಖಲಿಸಲು ಮುಂದಾಗಿದೆ. ಹೀಗಾಗಿ ಮೈಷುಗರ್ ಕಾರ್ಖಾನೆಗೆ ಕೋಟ್ಯಂತರ ರೂಪಾಯಿ ವಂಚಿಸಿ ಅಕ್ರಮ ಎಸಗಿದ ನಾಗರಾಜಪ್ಪ ಮತ್ತು ಆತನ ಕುಟುಂಬದ ಆಸ್ತಿ ವಿವರದ ಪಟ್ಟಿ ಸಲ್ಲಿಸುವಂತೆ ಜಿಲ್ಲಾಧಿಕಾರಿಗಳಿಗೆ ಮೈಶುಗರ್ ವ್ಯವಸ್ಥಾಪಕ ನಿರ್ದೇಶಕ ರವಿಕುಮಾರ್ ಪತ್ರ ಬರೆದಿದ್ದಾರೆ.

## ಜಿಲ್ಲಾ ಮಕ್ಕಳ ಕಲ್ಯಾಣ ಮತ್ತು ರಕ್ಷಣಾ ಸಮಿತಿ ಸಭೆ

# ಗ್ರಾಮ ಪಂಚಾಯಿತಿಗಳಲ್ಲಿ ಮಹಿಳಾ ಕಾವಲು ಸಮಿತಿ ರಚನೆ ಕಡ್ಡಾಯ: ಜಿಲ್ಲಾಧಿಕಾರಿ ನಿತೇಶ್ ಪಾಟೀಲ

ಬೆಳಗಾವಿ: ಜಿಲ್ಲೆಯ ಪ್ರತಿ ಗ್ರಾಮ ಪಂಚಾಯಿತಿಗಳಲ್ಲಿ ಮಹಿಳೆ ಮತ್ತು ಮಕ್ಕಳ ರಕ್ಷಣೆಗಾಗಿ ಕಾವಲು ಸಮಿತಿಗಳನ್ನು ಕಡ್ಡಾಯವಾಗಿ ರಚಿಸಬೇಕು. ಮಹಿಳೆಯರ ದೌರ್ಜನ್ಯ, ಬಾಲ್ಯವಿವಾಹ, ಪೋಕ್ಸೋ ಪ್ರಕರಣಗಳನ್ನು ತಡೆಗಟ್ಟಲು ಇಂತಹ ಸಮಿತಿಗಳ ಮೂಲಕ ಕಟ್ಟುನಿಟ್ಟಾಗಿ ಕ್ರಮಗಳನ್ನು ತೆಗೆದುಕೊಳ್ಳಬೇಕು. ಪ್ರತಿಯೊಂದು ಗ್ರಾಮ ಪಂಚಾಯಿತಿಗಳಲ್ಲಿ ಪ್ರತಿ ಮೂರು ತಿಂಗಳಿಗೊಮ್ಮೆ ಸಭೆ ನಡೆಸಿ ವರದಿಯನ್ನು ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶುಕ್ರವಾರ (ಜ.05) ನಡೆದ ಜಿಲ್ಲಾ ಮಕ್ಕಳ ಕಲ್ಯಾಣ ಮತ್ತು ರಕ್ಷಣಾ ಸಮಿತಿ ಸಭೆ ಹಾಗೂ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಇತ್ತೀಚೆಗೆ ಜಿಲ್ಲೆಯಲ್ಲಿ ಮಹಿಳೆಯರು ಮಕ್ಕಳ ಮೇಲೆ ದೌರ್ಜನ್ಯ ನಡೆಯುತ್ತಿರುವ ಪ್ರಕರಣಗಳು ಹೆಚ್ಚಾಗಿ ವರದಿಯಾಗುತ್ತಿವೆ. ಆದ್ದರಿಂದ ಈ ನಿಟ್ಟಿನಲ್ಲಿ ಕಟ್ಟುನಿಟ್ಟಾಗಿ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದರು.

ಬೆಳಗಾವಿ ಹಾಗೂ ಚಿಕ್ಕೋಡಿಯಲ್ಲಿ ಎಲ್ಲಾ ಶಾಲಾ ಕಾಲೇಜುಗಳಲ್ಲಿ ಮಕ್ಕಳ ರಕ್ಷಣಾ ಸಮಿತಿ ಕಡ್ಡಾಯವಾಗಿ ರಚಿಸಬೇಕು. ಯಾವ ಗ್ರಾಮ ಪಂಚಾಯತಿಗಳಲ್ಲಿ ಕಾವಲು ಸಮಿತಿ ಸಭೆ ಆಗಿಲ್ಲ; ಅಂತಹ ಕಡೆ ಕೂಡಲೇ ಸಮಿತಿ ರಚಿಸಿ, ಸಭೆಗಳನ್ನು ಮಾಡಬೇಕು ಎಂದು ತಿಳಿಸಿದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ವತಿಯಿಂದ ಈಗಾಗಲೇ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ತರಬೇತಿ ನೀಡಲಾಗಿದೆ.



ಅದರಂತೆ ಜಿಲ್ಲೆಯಲ್ಲಿ ಇನ್ನೂ ಹೆಚ್ಚು ತರಬೇತಿ ಅಗತ್ಯವಿದೆ. ಪೋಕ್ಸೋ ದೌರ್ಜನ್ಯ ಕುರಿತು ಶಾಲಾ ಕಾಲೇಜುಗಳಲ್ಲಿ ಜಾಗೃತಿ ಕಾರ್ಯಕ್ರಮಗಳು ಆಗಬೇಕು.

ಬೆಳಗಾವಿ ಹಾಗೂ ಚಿಕ್ಕೋಡಿ ವಿಭಾಗದಲ್ಲಿ ಪದರತಿ ಶಾಲೆಯಲ್ಲಿ ಒಬ್ಬರು ಮಹಿಳಾ ಶಿಕ್ಷಕಿಯನ್ನು ಆಯ್ಕೆ ಮಾಡಿ ಅವರು ಮಕ್ಕಳು-ಮಹಿಳಾ ದೌರ್ಜನ್ಯಗಳ ಕುರಿತು ಮಕ್ಕಳಿಗೆ ಅರಿವು ಮೂಡಿಸಲು ನಿಯೋಜಿಸಬೇಕು ಎಂದು ತಿಳಿಸಿದರು.

ಬಾಲ್ಯ ವಿವಾಹ, ಪೋಕ್ಸೋ ಪ್ರಕರಣಗಳು ಕಂಡುಬಂದರೆ ತಕ್ಷಣ ವರದಿ ಸಲ್ಲಿಸಿ, ರಕ್ಷಣಾ ಕಾರ್ಯಾಚರಣೆ ಕೈಗೊಳ್ಳಬೇಕು. ರಾಮದುರ್ಗ ಹಾಗೂ ಸವದತ್ತಿಯಲ್ಲಿ ಕಳೆದ ವರ್ಷ ಹೆಚ್ಚು ಪ್ರಕರಣಗಳು ಕಂಡು ಬಂದಿದ್ದು, ಹೆಚ್ಚು ಜಾಗೃತಿ ಕಾರ್ಯಕ್ರಮ ಆಯೋಜನೆ ಮಾಡಬೇಕು. ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಭೀಮಾಶಂಕರ ಗುಳೇದ ಅವರು ತಿಳಿಸಿದರು.

ಬಾಲ್ಯವಿವಾಹ ಹಾಗೂ ಮಕ್ಕಳ ಮೇಲಿನ ದೌರ್ಜನ್ಯ ತಡೆಗೆ ಸಂಬಂಧಿಸಿದ ಎಲ್ಲ ಇಲಾಖೆಗಳಿಗೆ ಪೊಲೀಸ್ ಇಲಾಖೆಯು ಎಲ್ಲ ರೀತಿಯ ಸಹಕಾರ ನೀಡಲಿದೆ. ಯಾವುದೇ ಕಾರಣಕ್ಕೂ ಇಂತಹ ಘಟನೆಗಳು ನಡೆಯದಂತೆ ನಾವೆಲ್ಲರೂ ತಡೆಯಬೇಕಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ್ ಗುಳೇದ ಹೇಳಿದರು.

**ಮಕ್ಕಳ ರಕ್ಷಣಾ ನಿಯಮಾವಳಿ ಪುಸ್ತಕ ಬಿಡುಗಡೆ:** ಇದೇ ವೇಳೆ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಮಕ್ಕಳ ಹಕ್ಕು, ರಕ್ಷಣೆ ಹಾಗೂ ವಿವಿಧ ಇಲಾಖೆಗಳ ಕಾರ್ಯಕ್ರಮಗಳ ಮಾಹಿತಿಯಿರುವ ಮಕ್ಕಳ ರಕ್ಷಣಾ ನಿಯಮಾವಳಿಯ ಕುರಿತು ಪುಸ್ತಕ ಬಿಡುಗಡೆಗೊಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಭೀಮಾಶಂಕರ ಗುಳೇದ, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪಿ. ಮುರಳಿ ಮೋಹನ್ ರೆಡ್ಡಿ , ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಹಾಂತೇಶ ಭಜಂತ್ರಿ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಗಂಗಾಧರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಬಸವರಾಜ ನಗರ, ಅಪರಾಧ ವಿಭಾಗದ ಎಸಿಪಿ ಕಟ್ಟಿಮನಿ, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಬಸವರಾಜ ಕುರಿಹುಲಿ ಸೇರಿದಂತೆ ಮತ್ತಿತರ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ಶ್ರೀ ಯಲ್ಲಮ್ಮದೇವಿ ಕೊಕಟನೂರ ಜಾತ್ರೆ ನಿಮಿತ್ಯ ವಿಶೇಷ ಹೆಚ್ಚುವರಿ ಬಸ್ಸುಗಳ ಕಾರ್ಯಾಚರಣೆ

ಬೆಳಗಾವಿ: ಅಥಣಿ ತಾಲೂಕಿನ ಕೊಕಟನೂರ ಗ್ರಾಮದ ಯಲ್ಲಮ್ಮವಾಡಿಯ ಶ್ರೀ ಯಲ್ಲಮ್ಮಾದೇವಿ ಜಾತ್ರೆಯು ಜ.6 ರಿಂದ ಜರುಗಲಿದ್ದು, ಜಾತ್ರೆಗೆ ಅಥಣಿ/ತೆಲಸಂಗ/ಕಾಗವಾಡ/ಸಾವಳಗಿ/ಬಬಲೇಶ್ವರ/ಮಿರಜ/ಸಾಂಗ್ಲಿ/ಜತ್ತ ಮುಂತಾದ ಸ್ಥಳಗಳಿಂದ ಪ್ರಯಾಣಿಸುವ ಯಾತ್ರಿಕರಿಗೆ ಚಿಕ್ಕೋಡಿ ವಿಭಾಗದ ಅಥಣಿ ಘಟಕದಿಂದ ದಿನಾಂಕ:06.01.2024 ರಿಂದ 12.01.2024 ರವರೆಗೆ ವಿಶೇಷ ಹೆಚ್ಚುವರಿ ಬಸ್ಸುಗಳ ವ್ಯವಸ್ಥೆ ಕಲ್ಪಿಸಲಾಗುವುದು. ಅದೇ ರೀತಿಯಲ್ಲಿ ಕೊಕಟನೂರದಿಂದ ನೇರವಾಗಿ ಪೂಣೆ, ಮುಂಬೈ, ಬೋರಿವೆಲಿ, ಬಾರಾಮತಿವರೆಗೆ ಹೋಗುವ ಪ್ರಯಾಣಿಕರಿಗೂ ಕೂಡ ವಿಶೇಷ ಹೆಚ್ಚುವರಿ ಬಸ್ಸುಗಳ ವ್ಯವಸ್ಥೆ ಕಲ್ಪಿಸಲಾಗುವುದು.

ಅಥಣಿ ಬಸ್ ನಿಲ್ದಾಣ, ಮಿರಜ ಬಿಂದು, ಹಾಗೂ ಕೊಕಟನೂರ ಜಾತ್ರಾ ಕೇಂದ್ರದಲ್ಲಿ ಪ್ರತ್ಯೇಕ ಜಾತ್ರಾ ನಿಯಂತ್ರಣ ಬಿಂದುಗಳಲ್ಲಿ ನುರಿತ ಸಾರಿಗೆ ನಿಯಂತ್ರಕ ಸಿಬ್ಬಂದಿಗಳನ್ನು ನಿಯೋಜಿಸಿ ಪ್ರಯಾಣಿಕರಿಗೆ ಸುವ್ಯವಸ್ಥಿತ ವಿಶೇಷ ವಾಹನಗಳ ವ್ಯವಸ್ಥೆ ನೆರವು ಮಾಡಲಾಗುವುದು. ಯಾತ್ರಿಕರು ಸದರಿ ಸೌಲಭ್ಯದ ಸದುಪಯೋಗ ಪಡೆದುಕೊಳ್ಳಬೇಕು ಎಂದು ವಾಕರಸಾಸಂಸ್ಥೆ, ಚಿಕ್ಕೋಡಿ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದರಾರೆ.

## ಶ್ರೀ ಕ್ಷೇತ್ರ ಅಮ್ಮಣಗಿ ಮಲ್ಲಿಕಾರ್ಜುನ ಜಾತ್ರೆ ನಿಮಿತ್ಯ ವಿಶೇಷ ಹೆಚ್ಚುವರಿ ಬಸ್ಸುಗಳ ಕಾರ್ಯಾಚರಣೆ

ಬೆಳಗಾವಿ: ಶ್ರೀ ಕ್ಷೇತ್ರ ಅಮ್ಮಣಗಿ ಮಲ್ಲಿಕಾರ್ಜುನ ಜಾತ್ರೆ ಜನವರಿ 13 ರಿಂದ ಜರುಗಲಿದ್ದು, ಜಾತ್ರೆಗೆ ಹೋಗುವ ಪ್ರಯಾಣಿಕರಿಗೆ ಚಿಕ್ಕೋಡಿ ವಿಭಾಗದ ಚಿಕ್ಕೋಡಿ/ಸಂಕೇಶ್ವರ/ಹುಕ್ಕೇರಿ ಘಟಕಗಳಿಂದ ದಿನಾಂಕ:13.01.2024 ರಿಂದ 16.01.2024 ರವರೆಗೆ ವಿಶೇಷ ಹೆಚ್ಚುವರಿ ಬಸ್ಸುಗಳ ವ್ಯವಸ್ಥೆ ಕಲ್ಪಿಸಲಾಗುವುದು. ಸಂಕೇಶ್ವರ ಬಸ್ ನಿಲ್ದಾಣದಲ್ಲಿ ಹಾಗೂ ಶ್ರೀಕ್ಷೇತ್ರ ಅಮ್ಮಣಗಿ ಜಾತ್ರಾ ಕೇಂದ್ರದಲ್ಲಿ ಪ್ರತ್ಯೇಕ ಜಾತ್ರಾ ನಿಯಂತ್ರಣ ಬಿಂದುಗಳಲ್ಲಿ ನುರಿತ ಸಾರಿಗೆ ನಿಯಂತ್ರಕ ಸಿಬ್ಬಂಧಿ ಹಾಗೂ ಭದ್ರತಾ ಸಿಬ್ಬಂಧಿಗಳನ್ನು ನಿಯೋಜಿಸಿ ಪ್ರಯಾಣಿಕರಿಗೆ ಸುವ್ಯವಸ್ಥಿತ ವಿಶೇಷ ವಾಹನಗಳ ವ್ಯವಸ್ಥೆ ಮಾಡಲಾಗುವುದು ಎಂದು ವಾಕರಸಾಸಂಸ್ಥೆ, ಚಿಕ್ಕೋಡಿ ವಿಭಾಗದ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದರಾರೆ.

## ಗಣರಾಜ್ಯೋತ್ಸವ: ಪೂರ್ವಭಾವಿ ಸಭೆ ಜ.10 ರಂದು

ಬೆಳಗಾವಿ: ಭಾರತ ಗಣರಾಜ್ಯೋತ್ಸವವನ್ನು ಜನವರಿ 26 ರಂದು ಆಚರಿಸುವ ಕುರಿತು ಪೂರ್ವಬಾವಿ ಸಿದ್ಧತೆ ಬಗ್ಗೆ ಚರ್ಚಿಸಲು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಬುಧವಾರ (ಜ.10) ಸಂಜೆ 4.30 ಗಂಟೆಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಎರಡನೇ ಮಹಡಿ ಸಭಾಂಗಣದಲ್ಲಿ ಅಧಿಕಾರಿಗಳು ಹಾಗೂ ಅಧಿಕಾರೇತರ ಗಣ್ಯರ ಸಭೆಯನ್ನು ಆಯೋಜಿಸಲಾಗಿದೆ.

ಸದರಿ ಸಭೆಗೆ ಹಾಜರಾಗಿ ಗಣರಾಜ್ಯೋತ್ಸವ ದಿನಾಚರಣೆ ಆಚರಿಸಲು ತಮ್ಮ ಸಲಹೆ, ಸೂಚನೆಗಳನ್ನು ನೀಡಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ್ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

## ವಿದ್ಯುತ್ ತಗುಲಿ ರೈತ ಸಾವು

ಬೆಳಗಾವಿ: ವಿದ್ಯುತ್ ತಗುಲಿ ರೈತನೊಬ್ಬ ಮೃತಪಟ್ಟಿರುವ ಘಟನೆ ಖಾನಾಪುರ ತಾಲೂಕಿನ ಬೇಕವಾಡದಲ್ಲಿ ನಡೆದಿದೆ.

ಖಾನಾಪುರ ತಾಲೂಕಿನ ಜುಂಜವಾಡ ಗ್ರಾಮದ ರೈತ ಧ್ಯಾನೇಶ್ವರ ಚನ್ನಪ್ಪ ಮಾಳವಿ (34) ಮೃತಪಟ್ಟ ರೈತ. ಈತನು ಹೊಲದಲ್ಲಿ ಮೆಣಸಿನಕಾಯಿ ಕೃಷಿ ಮಾಡುತ್ತಿದ್ದಾಗ ಬೋರ್ ವೆಲ್ ಪ್ರಾರಂಭವಾಗದ ಕಾರಣ ವಿದ್ಯುತ್ ಬಟನ್ ಮತ್ತು ಸ್ಟಾರ್ಟರ್ ತಪಾಸಣೆ ಮಾಡುತ್ತಿದ್ದಾಗ ವಿದ್ಯುತ್ ಸ್ಪರ್ಶಿಸಿ ಏಕಾಏಕಿ ದೂರಕ್ಕೆ ಎಸೆಯಲ್ಪಟ್ಟು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ನಂದಗಡ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಕಾರ್ಯಗಾರ

### ಚಿಂತೆ, ಆತಂಕಗಳು ಇದ್ದರೇನೇ ಸಾಧಿಸಲು ಛಲ ಬರುವುದು: ಡಯಟ್ ಪ್ರಾಚಾರ್ಯ ರವಿ ಭಜಂತ್ರಿ

ಬೆಳಗಾವಿ: ಪರೀಕ್ಷೆಯ ಬಗೆಗೆ ಚಿಂತೆ, ಆತಂಕಗಳು ಇದ್ದಾಗ ಅವುಗಳನ್ನು ಎದುರಿಸಿ ಯಾವ ರೀತಿ ಸಾಧಿಸಬೇಕು ಎಂಬ ಛಲ ಬರುವುದು.ಆ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಎಲ್ಲ ಸಂದರ್ಭಗಳನ್ನು ಸಮಯೋಚಿತವಾಗಿ ಎದುರಿಸಿ ಸಾಧನೆಯ ದಡ ತಲುಪಲು ಕಾರ್ಯಾಗಾರ ದಲ್ಲಿಯ ಸಂಪನ್ಮೂಲಗಳನ್ನು ಸದ್ಬಳಕೆ ಮಾಡಿಕೊಳ್ಳಿ ಎಂದು ಡಯಟ್ ನ ಪ್ರಭಾರಿ ಪ್ರಾಚಾರ್ಯ ರವಿ ಭಜಂತ್ರಿ ಗುರುವಾರ ದಿ.4 ರಂದು ಬೆಳಗಾವಿ ಗ್ರಾಮೀಣ ವಲಯದ ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳಿಗೆ ಬೆಳಗಾವಿ ತಾಲೂಕಿನ ಕಾಕತಿಯ ಸರಕಾರಿ ಪ್ರೌಢಶಾಲೆಯಲ್ಲಿ ಹಮ್ಮಿಕೊಳ್ಳಲಾದ ಒಂದು ದಿನದ ಶೈಕ್ಷಣಿಕ ಕಾರ್ಯಗಾರ ಉದ್ಘಾಟಿಸಿ ಮಾತನಾಡಿದರು.

ಗಣಿತ ಮತ್ತು ವಿಜ್ಞಾನ ವಿಷಯದ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ



ಜಬ್ಬಾರ ಸನದಿ ವಿಷಯದಲ್ಲಿಯ ಕ್ಲಿಷ್ಟತೆಗಳು ಮತ್ತು ಹೆಚ್ಚು ಅಂಕ ಪಡೆಯುವುದು ಹೇಗೆ ಮತ್ತು ಯಾವ ಅಂಶಗಳ ಕುರಿತು ಹೆಚ್ಚಿನ ಗಮನ ಕೇಂದ್ರೀಕರಿಸಬೇಕು ಎಂಬುದನ್ನು ವಿವರಿಸಿದರು. ಇಂಗ್ಲೀಷ್ ವಿಷಯದ ರಾಜ್ಯ ಸಂಪನ್ಮೂಲ ಶಿಕ್ಷಕ ಅಲ್ತಾಫ್ ಜಹಂಗೀರ್ ರವರು ಇಂಗ್ಲಿಷ್ ವಿಷಯದಲ್ಲಿಯ ವ್ಯಾಕರಣ ಅಂಶಗಳ ಕ್ಲಿಷ್ಟತೆಯನ್ನು ನಿವಾರಿಸಿ ಮಕ್ಕಳನ್ನು ಕ್ರಿಯಾತ್ಮಕವಾಗಿ ತೊಡಗಿಸಿಕೊಳ್ಳುವರ ಮೂಲಕ ವ್ಯಾಕರಣ ಅಂಶಗಳನ್ನು ಎಳೆಎಳೆಯಾಗಿ ಬಿಚ್ಚಿಟ್ಟರು.

ಕನ್ನಡ ಭಾಷೆಯಲ್ಲಿಯ ವ್ಯಾಕರಣ ಮತ್ತು ಹಳೆಗನ್ನಡದ ಕುರಿತಾದ ಕೆಲವು ಪ್ರಶ್ನೆಗಳಿಗೆ ಕನ್ನಡ ಭಾಷೆ ಶಿಕ್ಷಕ ರವಿ ಹಲಕರ್ಣಿ ವಿವರಣೆ ನೀಡಿದರು.

ಬೆಳಗಾವಿಯ ಎಕ್ಸ ಪರ್ಟ್ ಅಕಾಡೆಮಿ ಸಂಸ್ಥೆಯ ಅಧ್ಯಕ್ಷ ನಾಗೇಶ ದಂಡಾಪುರೆ ರವರು ಕಾರ್ಯಗಾರದಲ್ಲಿ ಭಾಗವಹಿಸಿದ ಎಲ್ಲಾ ವಿದ್ಯಾರ್ಥಿಗಳಿಗೆ ತಮ್ಮ ಸಂಸ್ಥೆಯ ವತಿಯಿಂದ ಪರೀಕ್ಷಾ ಪ್ರಮುಖ ಅಂಶ ಗಳನ್ನು ಒಳಗೊಂಡ ಮಾಹಿತಿ ಪುಸ್ತಕಗಳನ್ನು ವಿತರಿಸುವುದರ ಜೊತೆಗೆ ಧ್ಯಾನದ ಮೂಲಕ ಏಕಾಗ್ರತೆ ಹೆಚ್ಚಿಸಿಕೊಳ್ಳುವುದರ ಜೊತೆಗೆ ನಮ್ಮ ವಿದ್ಯಾಭ್ಯಾಸದಲ್ಲಿ ಪ್ರಗತಿ ಸಾಧಿಸಬಹುದು. ನಿಷ್ಠೆ ಮತ್ತು ಛಲದಿಂದ ವಿರಮಿಸದೆ ಅಭ್ಯಸಿಸಿ ಎಂದು ತಿಳಿ ಹೇಳುತ್ತಾ ಮುಂದಿನ ಶೈಕ್ಷಣಿಕ ಹಾದಿಯ ಕುರಿತು ಮಾಹಿತಿ ನೀಡಿದರು.

ಡಯಟ್ ಹಿರಿಯ ಉಪನ್ಯಾಸಕ ಬಸವರಾಜ ಕುಸುಗಲ್ ರವರು ಅತ್ಯುನ್ನತ ಶ್ರೇಣಿಯಲ್ಲಿ ಪಾಸಾಗುವ ಎರಡು ವಿದ್ಯಾರ್ಥಿಗಳ ಮುಂದಿನ ಶೈಕ್ಷಣಿಕ ವೆಚ್ಚ ಭರಿಸುವದಾಗಿ ವಾಗ್ದಾನ ನೀಡಿದರು.

ಗ್ರಾಮೀಣ ವಲಯದ ಕ್ಷೇತ್ರ ಸಮನ್ವಯ ಅಧಿಕಾರಿ ಡಾ. ಎಂಎಸ್ ಮೇದಾರರವರು ಕಾರ್ಯಾಗಾರದಲ್ಲಿ ಭಾಗವಹಿಸಿದ ಶೇಕಡ 95ಕ್ಕಿಂತ ಹೆಚ್ಚು ಅಂಕ ಗಳಿಸುವ ಪ್ರತಿ ವಿದ್ಯಾರ್ಥಿಗೆ 1000 ರೂಪಾಯಿ ಬಹುಮಾನ ನೀಡುವುದಾಗಿ ಘೋಷಿಸಿದರು. ಕಾರ್ಯಗಾರದಲ್ಲಿ ಬಿ ಆರ್ ಪಿ ಸುನಿಲ್ ಕುಟ್ರೆ, ಎಂ.ಐ. ಬುಳ್ಳಾ,ಸಿ.ಬಿ ಸುಗಟೆ,ಪಿಜೆ ಕದ್ದು ಯು. ಜಿ.ಮುತೇಕರ, ಎಸ್. ಪಿ. ಅಗಸಿಮನಿ, ಎಸ್ ಎ ಸುಬ್ಬಾಪುರಮಠ, ಗೀತಾ ಕಾನಟ್ಟಿ ಸುಮಿತ್ರಾ ಕರವಿನಕೊಪ್ಪ, ಮಹೇಶ ಅಕ್ಕಿ,ಸೇರಿದಂತೆ ವಿವಿಧ ಶಾಲೆಗಳ ಉತ್ತಮ 10 ವಿದ್ಯಾರ್ಥಿಗಳಂತೆ 180 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಕಾರ್ಯಕ್ರಮದ ಆರಂಭದಲ್ಲಿ ಪ್ರಭಾರಿ ಮುಖ್ಯ ಶಿಕ್ಷಕ ಅಶೋಕ ಖೋತ ಸ್ವಾಗತಿಸಿದರು, ಶಿಕ್ಷಕ ಶಿವಾನಂದ ತಲ್ಲೂರ ಕಾರ್ಯಕ್ರಮ ನಿರೂಪಿಸಿ ನಿರ್ವಹಿಸಿದರು ಕೊನೆಯಲ್ಲಿ ಲಲಿತಾ ಮಹಾಜನಶೆಟ್ಟಿ ವಂದಿಸಿದರು.

## ಮದುವೆಗೆ ಬಂದವರ ವ್ಯಾನಿಟಿ ಬ್ಯಾಗ್ ಸಮೇತ ಪರಾರಿಯಾಗಿದ್ದ ಕಳ್ಳನ ಬಂಧನ



ಬೆಳಗಾವಿ: ಬೆಳಗಾವಿ ಪೊಲೀಸರು ಖತರ್ನಾಕ್ ಕಳ್ಳನನ್ನು ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

ದಿನಾಂಕ 4-1.2024 ರಂದು ಮಾಳಮಾರುತಿ ಠಾಣಾ ವ್ಯಾಪ್ತಿಯ ವಿದ್ಯಾಧಿರಾಜ ಕಲ್ಯಾಣ ಮಂಟಪದಲ್ಲಿ ಮದುವೆಗೆ ಆಗಮಿಸಿದ ಪಂಚಾಕ್ಷರಿ ಎಂ.ಕೆ., ದಾವಣಗೆರೆ ಇವರ ಹೆಂಡತಿಯ ವೆನಿಟಿ ಬ್ಯಾಗಿನಲ್ಲಿ ಇಟ್ಟಿದ್ದ ಸುಮಾರು 3,51,000 ಮೌಲ್ಯದ ಬಂಗಾರದ ಆಭರಣ ಹಾಗೂ 3500/- ಹಣ ಹೀಗೆ ಒಟ್ಟು 3,54, 500 ಗಳಷ್ಟು ವಸ್ತುಗಳನ್ನು ವೆನಿಟಿ ಬ್ಯಾಗ್ ಸಮೇತ ಕಳುವು ಮಾಡಿಕೊಂಡು ಹೋಗಿದ್ದ. ಆರೋಪಿತನನ್ನು ಮಾಳಮಾರುತಿ ಪೊಲೀಸ್ ಠಾಣೆಯವರು ಪತ್ತೆ ಮಾಡಿದ್ದಾರೆ. ಕಳ್ಳತನ ಮಾಡಿದ ಆರೋಪಿ ಇಮ್ತಿಯಾಜ್ ಮಹಮ್ಮದ್ ಗೌಸ್ ಹುಬ್ಬಿವಾಲೆ - 63 ವರ್ಷ ಸಾ. ವೀರಭದ್ರನಗರ ಬೆಳಗಾವಿ ಈತನನ್ನು ವಶಕ್ಕೆ ಪಡೆದುಕೊಂಡು, ಈತನಿಂದ ಕಳ್ಳತನ ಮಾಡಿದ ಬಂಗಾರದ ಆಭರಣ ಹಾಗೂ ಹಣವನ್ನು ಮರಳಿ ಜಪ್ತುಪಡಿಸಿಕೊಳ್ಳಲಾಗಿದೆ. ಆರೋಪಿತನ ವಿರುದ್ಧ ಕಾನೂನು ಕ್ರಮ ಕೈಗೊಂಡು ತನಿಖೆ ಮುಂದುವರಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

## ಹಳೆ ವೈಷಮ್ಯಕ್ಕೆ ಚಾಕುವಿನಿಂದ ಇರಿದು ಯುವಕನ ಹತ್ಯೆ

ಚಿತ್ರದುರ್ಗ: ಹಳೆ ವೈಷಮ್ಯದ ಹಿನ್ನೆಲೆಯಲ್ಲಿ ಚಾಕುವಿನಿಂದ ಇರಿದು ಯುವಕನನ್ನು ಹತ್ಯೆ ಮಾಡಿದ ಘಟನೆ ಹೊಸದುರ್ಗ ತಾಲ್ಲೂಕಿನ ನಾಗನಾಯಕನ ಕಟ್ಟೆ ಗ್ರಾಮದಲ್ಲಿ ಗುರುವಾರ ರಾತ್ರಿ ನಡೆದಿದೆ.

ಹೊಸದುರ್ಗ ತಾಲ್ಲೂಕಿನ ನಾಗನಾಯಕನಕಟ್ಟೆ ಗ್ರಾಮದ ಮನೋಜ್ (21) ಕೊಲೆಯಾದ ಯುವಕ. ಹಿರಿಯೂರು ತಾಲ್ಲೂಕಿನ ಸೋಮೇನಹಳ್ಳಿ ತಾಂಡಾದ ರಘು ಕೊಲೆ ಮಾಡಿದ್ದು, ತಲೆಮರೆಸಿಕೊಂಡಿದ್ದಾನೆ.

ರಘು ಮತ್ತು ಮನೋಜ್ ನಡುವೆ ಹಳೆ ವೈಷಮ್ಯವಿತ್ತು ಎನ್ನಲಾಗಿದೆ. ನಾಗನಾಯಕನಕಟ್ಟೆಯಲ್ಲಿ ಗುರುವಾರ ರಾತ್ರಿ ಊರ ಹಬ್ಬ ನಡೆಯುತ್ತಿದ್ದಾಗ ಐವರು ಸಹಚರರೊಂದಿಗೆ ದಾಳಿ ನಡೆಸಿ ಮಾರಕಾಸ್ತ್ರಗಳಿಂದ ಹಲ್ಲೆ ನಡೆಸಿದ್ದಾನೆ.

ಗಂಭೀರವಾಗಿ ಗಾಯಗೊಂಡಿದ್ದ ಮನೋಜ್ ಅವರನ್ನು ಹೊಸದುರ್ಗ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಲಾಯಿತು. ಚಿಕಿತ್ಸೆಗೆ ಸ್ಪಂದಿಸದೇ ಮೃತಪಟ್ಟಿದ್ದಾರೆ ಎಂದು ಶ್ರೀರಾಂಪುರ ಠಾಣೆಯ ಪೊಲೀಸರು ತಿಳಿಸಿದ್ದಾರೆ. ಪೊಲೀಸ್ ಇನ್‌ಸ್ಪೆಕ್ಟರ್ ಮಧು ಸ್ಥಳಕ್ಕೆ ಭೇಟಿ ಪರಿಶೀಲನೆ ನಡೆಸಿದರು.

# ಮತ್ತೆ ಬೆಳಗಾವಿ ಗಡಿ ವಿವಾದ ಕೆದಕಿದ ಮಹಾರಾಷ್ಟ್ರ

ಬೆಳಗಾವಿ: ಕೆಲವೇ ತಿಂಗಳುಗಳಲ್ಲಿ ಎದುರಾಗಲಿರುವ ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಮಹಾರಾಷ್ಟ್ರ ಏಕೀಕರಣ ಸಮಿತಿ ತನ್ನ ಅಸ್ತಿತ್ವ ಕಂಡುಕೊಳ್ಳಲು ಮುಂದಾಗಿದೆ. ಇದಕ್ಕೆ ಮಹಾರಾಷ್ಟ್ರ ಸರಕಾರ ಬೆನ್ನೆಲುಬಾಗಿ ನಿಲ್ಲಲು ಮುಂದಾಗಿರುವ ಸಂಗತಿ ಇದೀಗ ಬಯಲಾಗಿದೆ.

ಚುನಾವಣೆ ಹೊತ್ತಲ್ಲೇ ಮತ್ತೆ ಬೆಳಗಾವಿ ಗಡಿಭಾಗದ ಮರಾಠಿಗರನ್ನು ಎಚ್ಚರಿಸಲು ಮಹಾರಾಷ್ಟ್ರದ ಉನ್ನತ ನಿಯೋಗ ಗುರುವಾರ ಬೆಳಗಾವಿಗೆ ಆಗಮಿಸಿ ನಿಮ್ಮೊಂದಿಗೆ ನಾವು ಸದಾ ಇರುತ್ತೇವೆ ಎಂದು ಅಭಯ ನೀಡಿ ಕೆಲ ಭರವಸೆಗಳನ್ನು ನೀಡಿದ್ದಾರೆ.

ಮಹಾರಾಷ್ಟ್ರ ಗಡಿ ವಿವಾದ ಪ್ರಕರಣದಲ್ಲಿ ಕೆಲವು ಕಾನೂನು ಅಡೆತಡೆಗಳಿವೆ. ಇದೇ ಕಾರಣಕ್ಕೆ ಸುಪ್ರೀಂಕೋರ್ಟಿನಲ್ಲಿ ಪ್ರಕರಣ ನಿಲ್ಲುತ್ತಿಲ್ಲ. ಹೀಗಾಗಿ ಈ ಎಲ್ಲಾ ಅಡೆತಡೆಗಳನ್ನು ಸರಿಪಡಿಸಲು ಮಹಾರಾಷ್ಟ್ರ ಸರ್ಕಾರ ತಿದ್ದುಪಡಿಗೆ ಮುಂದಾಗಿದೆ ಎಂದು ಮಹಾರಾಷ್ಟ್ರ ಗಡಿ ವಿವಾದದ ಮಹಾರಾಷ್ಟ್ರದ ಉನ್ನತಾಧಿಕಾರ ಸಮಿತಿ ಅಧ್ಯಕ್ಷ ಹಾಗೂ ಸಂಸದ ಧೈರ್ಯಶೀಲ ಮಾನೆ ಹೇಳಿದ್ದಾರೆ.

ಬೆಳಗಾವಿಯಲ್ಲಿ ಗುರುವಾರ ಎಂಇಎಸ್ ಆಯೋಜಿಸಿದ್ದ ಮಹಾರಾಷ್ಟ್ರ ಸರ್ಕಾರದ ಆರೋಗ್ಯ ವಿಮೆಯ ಫಲಾನುಭವಿಗಳ ಸಭೆ,



ಮಾರ್ಗದರ್ಶಿ ಕೈಪಿಡಿ ಬಿಡುಗಡೆ ಹಾಗೂ ಉದ್ಯೋಗ ಭರವಸೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮಹಾರಾಷ್ಟ್ರ ಸರ್ಕಾರ ಗಡಿ ವಿವಾದಕ್ಕೆ ಅಗ್ರಸ್ಥಾನ ನೀಡಿದೆ. ಇಷ್ಟಕ್ಕೂ ಮಹಾರಾಷ್ಟ್ರದ ಹಾಲಿ ಮುಖ್ಯಮಂತ್ರಿ ಏಕನಾಥ ಶಿಂಧೆ ಗಡಿ ವಿವಾದದಿಂದಲೇ ಬೆಳಕಿಗೆ ಬಂದವರು ಅವರಿಗೆ ಬೆಳಗಾವಿ ವಿವಾದದ ಸಂಪೂರ್ಣ ಅರಿವಿದೆ ಅವರು ಬೆಳಗಾವಿ ಮರಾಠಿಗರ ಹಿತಶಕ್ತಿ ಕಾಪಾಡಲು ಸದಾ ಬದ್ಧರಾಗಿದ್ದಾರೆ ಅವರೇ ನಮ್ಮ ಶಕ್ತಿಯಾಗಿರುವಾಗ ಬಂದವರು.

ಹೀಗಾಗಿ ಬೆಳಗಾವಿ ಮರಾಠಿಗರು ಯಾವುದೇ ರೀತಿಯಲ್ಲೂ ಭಯಪಡುವ ಅಗತ್ಯ ಇಲ್ಲ ಎಂದು ಅವರು ಹೇಳಿದರು.

ಗಡಿ ಪ್ರಕರಣ ಇಷ್ಟು ದೀರ್ಘಾವಧಿ ತೆಗೆದುಕೊಳ್ಳಬಾರದಿತ್ತು. ಪ್ರಕರಣ ದಾಖಲಿಸುವ ಸಂದರ್ಭದಲ್ಲಿ ಎಂಇಎಸ್ ಮಾಡಿದ ಕೆಲವು ಲೋಪಗಳ ಕಾರಣ ಸುಪ್ರೀಂಕೋರ್ಟ್ ಕೈಗೆತ್ತಿಕೊಳ್ಳುತ್ತಿಲ್ಲ. ಈ ವಿಚಾರದಲ್ಲಿ ಮಹಾರಾಷ್ಟ್ರ ಸರ್ಕಾರ ಕಾನೂನು ತಜ್ಞರೊಂದಿಗೆ ನಿರಂತರ ಸಂಪರ್ಕದಲ್ಲಿದೆ. ಆದಷ್ಟು ಬೇಗ ತಿದ್ದುಪಡಿಯ ಮೂಲಕ ಅಡೆತಡೆ ನಿವಾರಣೆ ಮಾಡುವ ಭರವಸೆ ಇದೆ. ಏಕನಾಥ ಶಿಂಧೆ ಗಡಿ ವಿವಾದದ ಪ್ರತ್ಯಕ್ಷ ಸಾಕ್ಷಿ ಆಗಿದ್ದಾರೆ. ಗಡಿ ಹೋರಾಟದ ಮೂಲಕವೇ ರಾಜಕೀಯದಲ್ಲಿ ಬೆಳೆದು ಬಂದಿದ್ದಾರೆ. ಅವರಿಗೆ ಸಾಕಷ್ಟು ಹಿಡಿತವಿದೆ. ಪ್ರಕರಣದಲ್ಲಿ ಏನೇನು ಅಡ್ಡಿಗಳು ಇವೆ ಹಾಗೂ ಕರ್ನಾಟಕದಲ್ಲಿ ಮರಾಠಿಗರಿಗೆ ಏನೇನು ಅನ್ಯಾಯ ಆಗುತ್ತಿದೆ ಎಂಬ ಬಗ್ಗೆ ಸೂಕ್ಷ್ಮವಾಗಿ ಗಮನಿಸುತ್ತಲೇ ಇದ್ದಾರೆ. ಸದನದಲ್ಲಿ ಚರ್ಚೆ ಮಾಡಲಾಗಿದೆ. ಮಹಾರಾಷ್ಟ್ರದ ಎಲ್ಲ ಸಂಸದರೊಂದಿಗೆ ಚರ್ಚೆ ನಡೆಸಿದ್ದು, ಸಂಸತ್ ಅಧಿವೇಶನದಲ್ಲಿ ಧ್ವನಿ ಎತ್ತಲು ತಿಳಿಸಲಾಗಿದೆ. ಸರ್ವಪಕ್ಷಗಳ ಮುಖಂಡರ ನಿಯೋಗದೊಂದಿಗೆ ಹೋಗಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಿ ಮನವಿ ಸಲ್ಲಿಸುವ ಸಿದ್ಧತೆ ನಡೆದಿದೆ ಎಂದು ಹೇಳಿದರು.

ಕಳೆದ ವರ್ಷ ಕೇಂದ್ರ ಗೃಹಸಚಿವ ಅಮಿತ್ ಶಾ ಅವರು ಆಗಿನ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಹಾಗೂ ಕರ್ನಾಟಕ ಮುಖ್ಯಮಂತ್ರಿಯಾಗಿದ್ದ ಬಸವರಾಜ ಬೊಮ್ಮಾಯಿ ಅವರನ್ನು ಕರೆದು ಸಮನ್ವಯ ಸಮಿತಿ ರಚಿಸಿದ್ದರು. ಇದರಿಂದ ಏನೂ ಪ್ರಯೋಜನ ಆಗಲಿಲ್ಲ. ಮರಾಠಿಗರ ಅನ್ಯಾಯ ನಿಂತಿಲ್ಲ ಎಂದು ಆರೋಪಿಸಿದರು.

ವಿವಾದಕ್ಕೆ ಒಳಪಟ್ಟ ಗಡಿಯ 865 ಹಳ್ಳಿಗಳ ಜನರನ್ನೂ ನಾವು ಮಹಾರಾಷ್ಟ್ರದ ಪ್ರಜೆಗಳು ಎಂದೇ ಪರಿಗಣಿಸಿದ್ದೇವೆ ಎಂದೂ ಹೇಳಿದರು.

ಗಡಿ ಪ್ರದೇಶ ಜನರಿಗೆ ಮಹಾರಾಷ್ಟ್ರದಿಂದ ಆರೋಗ್ಯ ವಿಮೆ : ಮಹಾರಾಷ್ಟ್ರ ಸರ್ಕಾರದಿಂದ ಗಡಿ ಪ್ರದೇಶದ ಜನರಿಗೆ ವ್ಯದ್ಯಕೀಯ ಸೇವೆ ನೀಡಲು ನಿರ್ಧರಿಸಿದೆ ಎಂದು ಮಹಾರಾಷ್ಟ್ರದ ವಿಶೇಷಾಧಿಕಾರಿ ಮಂಗೇಶ್ ಚಿವ್ಟೆ ಹೇಳಿದರು.

ಮಹಾರಾಷ್ಟ್ರದ ವೈದ್ಯಕೀಯ ಚಿಕಿತ್ಸಾ ಘಟಕದ ಮುಖ್ಯಸ್ಥ ಹಾಗೂ ಮುಖ್ಯಮಂತ್ರಿಗಳ ವಿಶೇಷಾಧಿಕಾರಿ ಮಂಗೇಶ್ ಚಿವ್ಟೆ ಅವರು ಯೋಜನೆ ಬಗ್ಗೆ ವಿವರಿಸಿ ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ನಂತರ ತಮ್ಮ ಮೊದಲ ಭಾಷಣದಲ್ಲಿ ಮುಖ್ಯಮಂತ್ರಿ ಏಕನಾಥ ಶಿಂಧೆ ಅವರು ಗಡಿ ಸಮಸ್ಯೆ ಬಗೆಹರಿಸಲು ಹಾಗೂ ಗಡಿ ಭಾಗದಲ್ಲಿ ರುವ ಮರಾಠಿಗರ ರಕ್ಷಣೆಗೆ ಮೊದಲ ಆದ್ಯತೆ ನೀಡುವುದಾಗಿ ಘೋಷಿಸಿದರು. ಮುಖ್ಯಮಂತ್ರಿ ಏಕನಾಥ್ ಶಿಂಧೆ ಅವರು ಗಡಿ ಸಮಸ್ಯೆ ಆಂದೋಲನದಲ್ಲಿ ಭಾಗವಹಿಸಿದ್ದಕ್ಕಾಗಿ ಜೈಲು ಶಿಕ್ಷೆಯನ್ನು ಅನುಭವಿಸಿದ್ದಾರೆ. ಆದ್ದರಿಂದ, ಗಡಿ ನಿವಾಸಿಗಳು ಮತ್ತು ಗಡಿ ಸಮಸ್ಯೆಗಳು ಅವರ ನಿಕಟ ವಿಷಯಗಳಾಗಿವೆ. ಆದ್ದರಿಂದ ವೈದ್ಯಕೀಯ ನೆರವು ಕೋಶವನ್ನು ಪುನರ್ ಸಂಘಟಿಸಿದ ಬಳಿಕ ಗಡಿ ಭಾಗದಲ್ಲಿರುವ ಮರಾಠಿ ಭಾಷಿಕರಿಗೆ ಹಾಗೂ ಮಹಾರಾಷ್ಟ್ರದ ನಾಗರಿಕರಿಗೆ ವೈದ್ಯಕೀಯ ನೆರವು ನೀಡಲು ಆದೇಶಿಸಿದ್ದಾರೆ. ವೈದ್ಯಕೀಯ ನೆರವು ಕೋಶದ ಮರು ಸಂಘಟನೆಯ ನಂತರ ವೈದ್ಯಕೀಯ ಚಿಕಿತ್ಸೆಗಾಗಿ ಇಲ್ಲಿಯವರೆಗೆ 181 ಕೋಟಿ ರೂ.ಗಳ ಆರ್ಥಿಕ ನೆರವು ನೀಡಲಾಗಿದೆ ಎಂದು ತಿಳಿಸಿದರು.

## ಪೌರಕಾರ್ಮಿಕರ ನೇಮಕಾತಿಗೆ ಶೀಘ್ರ ಕ್ರಮ: ಜಿಲ್ಲಾಧಿಕಾರಿ

ಬೆಳಗಾವಿ: ಸರ್ಕಾರದ ಮಾರ್ಗಸೂಚಿಯಂತೆ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ 100 ಜನ ಪೌರಕಾರ್ಮಿಕರ ನೇಮಕಾತಿಗೆ ಅಧಿಸೂಚನೆ ಹೊರಡಿಸಲಾಗುವುದು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶುಕ್ರವಾರ (ಜ.05) ನಡೆದ ಮ್ಯಾನ್ಯುವಲ್ ಸ್ಕ್ಯಾವೆಂಜರ್ ನಿಷೇಧ, ಪುನರ್ವಸತಿ ಕಾಯ್ದೆ 2003ರ ಅನುಷ್ಠಾನದ ಕುರಿತು ಜಿಲ್ಲಾ ಮಟ್ಟದ ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಈ ವೇಳೆ ಮಾತನಾಡಿದ ವಿಜಯ



ನರಗಟ್ಟಿ ಅವರು ಜಿಲ್ಲೆಯಲ್ಲಿ 368 ಪೌರ ಕಾರ್ಮಿಕರನ್ನು ಖಾಯಂಗೊಳಿಸಿ ಆದೇಶ ಪತ್ರ ವಿತರಣೆ ಮಾಡಿರುವುದು ಸಂತಸದ ವಿಷಯ. ಅದೇ ರೀತಿಯಲ್ಲಿ ಈಗಾಗಲೇ ವಾಸವಿರುವ ಪೌರಕಾರ್ಮಿಕರು ವಾಸವಿರುವ 353 ವಸತಿ ಗೃಹಗಳ ಹಕ್ಕುಪತ್ರ ನೀಡಬೇಕು ಎಂದು ಮನವಿ ಮಾಡಿಕೊಂಡರು.

ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು, 353 ವಸತಿ ಗೃಹಗಳಿಗೆ ಸಂಬಂಧಿಸಿದಂತೆ ಮಹಾನಗರ ಪಾಲಿಕೆಯಿಂದ ಸಮೀಕ್ಷೆ ಕೈಗೊಂಡು, ಅರ್ಹರ ಪಟ್ಟಿ ಸಲ್ಲಿಸಿದಲ್ಲಿ 24 ಗಂಟೆಗಳಲ್ಲಿ ಹಕ್ಕುಪತ್ರ ವಿತರಿಸಲು ಜಿಲ್ಲಾಡಳಿತದಿಂದ ಆದೇಶ ನೀಡಲಾಗುವುದು ಎಂದು ಭರವಸೆ ನೀಡಿದರು.

ಈ ಹಿಂದೆ ಜಿಲ್ಲೆಯಲ್ಲಿ ಒಟ್ಟು 383 ಮ್ಯಾನ್ಯುವಲ್ ಸ್ಕ್ಯಾವೆಂಜರ್ ಅವರನ್ನು ಗುರುತಿಸಲಾಗಿದ್ದು, ಅಂತವರಿಗೆ ಗುರುತಿನ ಚೀಟಿ ನೀಡಲು ಅನುಮತಿ ಕೋರಿ ಈಗಾಗಲೇ ಸರ್ಕಾರಕ್ಕೆ ಪತ್ರ ಕಳಿಸಲಾಗಿದೆ. ಆದರೆ ಸರ್ಕಾರದಿಂದ ಈವರೆಗೆ ಯಾವುದೇ ಪ್ರತಿಕ್ರಿಯೆ ಬಂದಿರುವುದಿಲ್ಲ ಎಂದು ಜಿಲ್ಲಾಧಿಕಾರಿ ನಿತೀಶ್ ಪಾಟೀಲ ಅವರು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಭೀಮಾಶಂಕರ ಗುಳೇದ, ಮಹಾನಗರ ಪಾಲಿಕೆ ಆಯುಕ್ತ ಅಶೋಕ ದುಡಗುಂಟಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ಕೋಶದ ಯೋಜನಾ ನಿರ್ದೇಶಕ ಮಲ್ಲಿಕಾರ್ಜುನ್ ಕಲಾದಗಿ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಲಕ್ಷ್ಮಣ ಬಬಲಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ಪೊಲೀಸ್ ಕಮೀಷನರೇಟ್ ಕಾರ್ಯಕ್ಕೆ ಬೆಳಗಾವಿ ಜನತೆಯ ಮೆಚ್ಚುಗೆ




ಬೆಳಗಾವಿ: ಪೊಲೀಸ್ ಕಮಿಷನರೇಟ್ ಪ್ರಾಯೋಜಕತ್ವದಲ್ಲಿ ಮಾದಕ ದ್ರವ್ಯ ಮುಕ್ತ ಬೆಳಗಾವಿ ನಗರ ನಿರ್ಮಿಸಲು ಶುಕ್ರವಾರ ನಗರದಲ್ಲಿ ಜನಜಾಗೃತಿ ಮೂಡಿಸಲಾಯಿತು.

ನಗರದ ವಿವಿಧ ಶಾಲೆಗಳ ವಿದ್ಯಾರ್ಥಿಗಳೊಂದಿಗೆ ಪೊಲೀಸ್ ಆಯುಕ್ತ ಸಿದ್ದರಾಮಪ್ಪ ಹಾಗೂ ಪೊಲೀಸ್ ಅಧಿಕಾರಿಗಳು, ಸಿಬ್ಬಂದಿಗಳೊಂದಿಗೆ ನಗರದ ಪ್ರಮುಖ ರಸ್ತೆಗಳಲ್ಲಿ ಪಥಸಂಚಲನ ಕೈಗೊಂಡು ಮಾದಕ ದ್ರವ್ಯ ಸೇವನೆ ವಿರುದ್ಧ ಬ್ಯಾನರ್ ಹಾಗೂ ಘೋಷಣೆಗಳೊಂದಿಗೆ ಸಾರ್ವಜನಿಕರಲ್ಲಿ ಅದರ ದುಷ್ಪರಿಣಾಮದ ಬಗ್ಗೆ ಜಾಗೃತಿ ಮೂಡಿಸಿದರು.

ಇದರೊಂದಿಗೆ ಮಾದಕ ದ್ರವ್ಯ ವಿರೋಧಿ ಜಾಗೃತಿ ಕುರಿತು ಹಿರಿಯ ಪೊಲೀಸ್ ಅಧಿಕಾರಿಗಳನ್ನು ಒಳಗೊಂಡು ಸುಮಾರು 40 ಪೊಲೀಸ್ ಅಧಿಕಾರಿಗಳು, ನಗರದ 31 ವಿವಿಧ ಶಾಲಾ-ಕಾಲೇಜುಗಳಿಗೆ ಭೇಟಿ ನೀಡಿ ಸುಮಾರು 5,500 ವಿದ್ಯಾರ್ಥಿಗಳಿಗೆ ಅದರ ದುಷ್ಪರಿಣಾಮಗಳ ಕುರಿತಾಗಿ ಅರಿವು ಮೂಡಿಸುವುದರೊಂದಿಗೆ ವಿದ್ಯಾರ್ಥಿಗಳಲ್ಲಿ ಈ ಕುರಿತು ಪ್ರಬಂಧ ಸ್ಪರ್ಧೆಯನ್ನು ಏರ್ಪಡಿಸಿ ವಿಜೇತರಿಗೆ ಬಹುಮಾನ ವಿತರಿಸಿ, ಮಾದಕ ದ್ರವ್ಯ ವಸ್ತುಗಳ ಮುಕ್ತ ಬೆಳಗಾವಿ ನಗರವನ್ನಾಗಿಸಲು ಇತರೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

# ಇಂದಿರಾ ಕ್ಯಾಂಟೀನ್ ಮತ್ತು ಮಧ್ಯಾಹ್ನದ ಶಾಲಾ ಊಟದಲ್ಲಿ ಸಿರಿಧಾನ್ಯ ಬಳಕೆ: ಮುಖ್ಯಮಂತ್ರಿ ಸಿದ್ದರಾಮಯ್ಯ ಮಹತ್ವದ ಘೋಷಣೆ

ಬೆಂಗಳೂರು: ರೈತರು – ಖರೀದಿ ದಾರದ ಸಮಾಗಮ, ಸಿರಿಧಾನ್ಯಗಳಿಂದ ತಯಾರಿಸಿರುವ ತರಹೇವಾರಿ ಆಹಾರಗಳು, ಸಿರಿಧಾನ್ಯಗಳ ಮಹತ್ವ, ಸಿಹಿ ತಿನಿಸು ತಿಂದು ಸಂಭ್ರಮಿಸಿದ ಜನರು, ನಗರದ ಅರಮನೆ ಮೈದಾನ ತ್ರಿಪುರ ವಾಸಿನಿ ಸಿರಿಧಾನ್ಯ ಭಕ್ಷ್ಯಗಳ ಪ್ರಯೋಗಶಾಲದಯಾಗಿ ಪರಿವರ್ತನೆಯಾಗಿತ್ತು. ಸೆಲ್ಫಿ ಕ್ಲಿಕ್ಕಿಸಿಕೊಳ್ಳಲು ನೂಕುನೂಗ್ಗಲು. ಹೀಗೆ ಹತ್ತು ಹಲವು ವೈಶಿಷ್ಟ್ಯಗಳನ್ನು ಹೊತ್ತು ತಂದಿದೆ ಅಂತರರಾಷ್ಟ್ರೀಯ ಸಿರಿಧಾನ್ಯ ವಾಣಿಜ್ಯ ಮೇಳ.

ವಿವಿಧ ಸಂಸ್ಥೆಗಳ ಸಹಯೋಗದಲ್ಲಿ ಕೃಷಿ ಇಲಾಖೆ, ಅರಮನೆ ಮೈದಾನದ ತ್ರಿಪುರವಾಸಿನಿಯಲ್ಲಿ ಆಯೋಜಿಸಲಾಗಿರುವ ಮೂರು ದಿನಗಳ ಅಂತಾರಾಷ್ಟ್ರೀಯ ಮಟ್ಟದ ಸಿರಿಧಾನ್ಯ ಮತ್ತು ಸಾವಯವ ಮೇಳ'ದಲ್ಲಿ ಶುಕ್ರವಾರ ಕಂಡುಬಂದ ಚಿತ್ರಣವಿದು.

ಮೇಳ ರೈತರು, ಖರೀದಿದಾರರು ಮಾರಾಟಗಾರರ ಸಮಾಗಮವಾಯಿತು. ನಾಡಿನ ಸಿರಿಧಾನ್ಯ ಆಹಾರ ಪದಾರ್ಥಗಳ ಜತೆಗೆ ಹೊರ ರಾಜ್ಯಗಳ ಸಿರಿಧಾನ್ಯಗಳ ಆಹಾರ ವಸ್ತುಗಳು ಒಂದೇ ಸೂರಿನಡಿ ಪಾಕಪ್ರಿಯರನ್ನು ಕೈಬೀಸಿ ಕರೆಯುತ್ತಿದೆ. ಆರಂಭದ ದಿನದಂದೇ ಮಳಿಗೆಳಲ್ಲಿ ಜನಸಾಗರವೇ ಹರಿದುಬಂತು. ರಾಗಿ, ಹಾರಕ, ಸಾಮೆ,ಊದಲು, ಕೊರಲು ಹಾಗೂ ಬರಗು, ನವಣೆಯಂತಹ ವೈವಿಧ್ಯಮಯ ಸಿರಿಧಾನ್ಯಗಳಿಂದ ತಯಾರಿಸಲಾಗಿದ್ದ ಸಿಹಿ ತಿನಿಸುಗಳು ಯುವ ಸಮೂಹವನ್ನು ಆಕರ್ಷಿಸಿತು. ನವಣೆ, ಸಾಮೆ, ಆರ್ಕಾ, ಊದಲು, ಕೊರಲು, ಬರಗು ಸಿರಿಧಾನ್ಯ, ಕಾಡು ಜೇನು, ಜೋನಿ ಬೆಲ್ಲ, ನೈಸರ್ಗಿಕ ಬೆಲ್ಲ, ನಾಟಿ ಬೆಲ್ಲ, ಅಗಸೆ ಬೀಜ, ಸೂರ್ಯಕಾಂತಿ ಬೀಜ, ಚಿಯಾ ಸೀಡ್, ಪಾಲಿಶ್ ರಹಿತ ಧಾನ್ಯ ಚಟ್ನಿಪುಡಿ, ಉಪ್ಪಿನಕಾಯಿ, ದೇಸೀ ತಳಿಯ ಸಿರಿಧಾನ್ಯ, ಕೈಮಗ್ಗ, ಖಾದಿ, ಕರಕುಶಲ ಉತ್ಪನ್ನಗಳು,



ಮಣ್ಣಿನ ಅಡುಗೆ ಪಾತ್ರೆ ಮಾರಾಟಕ್ಕೆ ಇಡಲಾಗಿತ್ತು.

ಅಲ್ಲದೆ, ನವಣೆ ಬಿಸಿ ಬೆಳೆಬಾತ್, ಸಾಮೆ ಪೊಂಗಲ್, ಊದಲು ಪುಳಿಯೋಗರೆ, ಸಾಮೆ ಒಬ್ಬಟ್ಟು, ನಾಟಿ ಬೆಲ್ಲದ ಟೀ, ಕಾಫಿ ಇತ್ಯಾದಿ ತಿಂಡಿಗಳ ಮಳಿಗಳಿವೆ. ಕೃಷಿ ವಿವಿಯ ಕಾಲೇಜು ವಿದ್ಯಾರ್ಥಿಗಳು ಮಳಿಗೆಗಳಿಗೆ ಭೇಟಿ ನೀಡಿ ಸಿರಿಧಾನ್ಯಗಳ ಬಗ್ಗೆ ಮಾಹಿತಿ ಪಡೆಯುತ್ತಿರುವುದು ವಿಶೇಷವಾಗಿತ್ತು. ಸಿರಿಧಾನ್ಯದಿಂದ ತಯಾರಿಸಿದ್ದ ಚಕ್ಕುಲಿ, ರಾಗಿ ಲಡ್ಡು, ರಾಗಿ, ನವಣೆ ಶ್ಯಾವಿಗೆ, ರಾಗಿ ಅಂಬಲಿ, ಸಜ್ಜೆ ಅಂಬಲಿ ಸೇರಿ ಇತರ ಸಿಹಿ ತಿನಿಸುಗಳನ್ನು ಜನರು ತಿಂದು ಸಂಭ್ರಮಿಸಿದರು. ಮೈಸೂರು ದೋಸೆ,ಮೆಣಸು ಪೊಂಗಲ್, ಮಿಲೆಟ್ ಮುರುಕ್ಕು, ಮಿಲೆಟ್ ಖಾರಾ ಚಿವ್ಡಾ, ಮಿಲೆಟ್ಸ್ ಬೈಟ್ಸ್, ಮಿಲೆಟ್ಸ್ ಸಿಹಿ ಚಿವ್ಡಾ ಸವಿದರು.

400ಕ್ಕೂ ಅಧಿಕ ಮಳಿಗೆಗಳು: ಸಿರಿಧಾನ್ಯಗಳಿಂದ ತಯಾ–ರಿಸಿದ ಹಿಟ್ಟು, ರವಾ, ಶಾವಿಗೆ, ಪಾಸ್ತಾ, ಪ್ಲೇಕ್ಸ್, ಮಾಲ್ಟ್‌ಪುಡಿ, ಬೇಕರಿ ಉತ್ಪನ್ನಗಳು, ಕುಕೀಸ್, ಲಡ್ಡು, ಮುರುಕು, ನಿಪ್ಪಟ್ಟು, ಪಾಪಡ್, ಬೇಯಿಸಲು ಸಿದ್ಧವಾಗಿರುವ ಮಿಶ್ರಣಗಳ ದೋಸೆ, ಇಡ್ಲಿ, ಉಪ್ಪಿಟ್ಟು, ಬಿಸಿಬೇಳೆ ಬಾತ್, ಪಾಯಸ, ಕಿಚಡಿ ನೋಡುಗರ ಆಕರ್ಷಣೆ ಕೇಂದ್ರವಾಗಿವೆ. ಮೇಳದಲ್ಲಿ ಅಂದಾಜು 400ಕ್ಕೂ ಅಧಿಕ ಮಳಿಗೆಗಳನ್ನು ಸ್ಥಾಪಿಸಲಾಗಿದೆ. ತರಹೇವಾರಿ ಸಿರಿಧಾನ್ಯಗಳ ಗ್ರಾಹಕರನ್ನು ಕೈಬಿಸಿ ಕರೆಯುತ್ತಿವೆ. ಕರ್ನಾಟಕ ಕೇರಳ, ಮಹಾರಾಷ್ಟ್ರ, ಆಂಧ್ರಪ್ರದೇಶ, ಮಣಿಪುರ, ಬಿಹಾರ ಸೇರಿ ದೇಶದ 17 ರಾಜ್ಯಗಳಿಂದ ಸಿರಿಧಾನ್ಯ ಕಂಪನಿಗಳು ಅಭಿವೃದ್ಧಿಪಡಿಸಿರುವ ಉತ್ಪನ್ನಗಳನ್ನು ಮಳಿಗೆಗಳಲ್ಲಿ ಪ್ರದರ್ಶನಕ್ಕೆ ಇಡಲಾಗಿದೆ. ಸಿರಿಧಾನ್ಯ ಮತ್ತು ಸಾವಯವ ಆಹಾರ ಮಳಿಗೆ, ಅಂತಾರಾಷ್ಟ್ರೀಯ ಮತ್ತು ಮಾರುಕಟ್ಟೆದಾರರ ಸಭೆ, ಗ್ರಾಹಕರ ಸಂಪರ್ಕ, ರೈತರ ಕಾರ್ಯಾಗಾರ ಪೆವಿಲಿಯನ್‌ಗಳನ್ನು ಸ್ಥಾಪಿಸಲಾಗಿದೆ. ಸಾವಯವ ಮತ್ತು ನೈಸರ್ಗಿಕ ಉತ್ಪಾದಕರು, ಸಗಟು, ಚಿಲ್ಲರೆ ವ್ಯಾಪಾ–ರಿಗಳು, ಸ್ವಸಹಾಯ ಗುಂಪುಗಳು, ರ್ತದಾರರು ಮತ್ತು ಆಮದುದಾರರು ಸೇರಿ ವ್ಯಾಪಾರ ಮತ್ತು ಉತ್ತೇಜನ, ಜ್ಞಾನ ಹಂಚಿಕೆ ವೇದಿಕೆ, ಸಿರಿಧಾನ್ಯ ಸಮ್ಮೇಳನ, ರೈತರ ಕಾರ್ಯಾಗಾರಗಳು, ಬಿ2ಬಿ, ಖರೀದಿದಾರರು ಮತ್ತು ಮಾರಾಟಗಾರರ ಭೇಟಿ, ಗ್ರಾಹಕ ಸಂಪರ್ಕ ಕಾರ್ಯಕ್ರಮ ಮಳಿಗೆಗಳನ್ನು ಪ್ರತಿಷ್ಠಾಪಿಸಲಾಗಿದೆ.

ರಾಜ್ಯದ ಸಾವಯವ ಕೃಷಿ ನೀತಿ, ಸುಸ್ಥಿರ ಪದ್ಧತಿಗಳು, ತಾಂತ್ರಿಕತೆಗಳು, ಸಿರಿಧಾನ್ಯ ಉತ್ಪನ್ನಗಳ ವೈವಿಧ್ಯಮ ತಿನಿಸುಗಳು ಮುಂತಾದವುಗಳನ್ನು ಪ್ರದರ್ಶಿಸಲಾಗಿದೆ. ಕರ್ನಾಟಕವನ್ನು ಉತ್ಪಾದಕ ರಾಜ್ಯವನ್ನಾಗಿ ಮಾಡುವ ಜತೆಗೆ ಮುಂದಿನ ಪೀಳಿಗೆಗೆ ಉತ್ತಮ ಆಹಾರ, ತಂತ್ರಜ್ಞಾನ, ಉತ್ಪಾದಕರು, ಗ್ರಾಹಕರು, ಮಾರುಕಟ್ಟೆಯನ್ನು ಸಕ್ರಿಯಗೊಳಿಸಲಾಗುತ್ತಿದೆ. ಮಳಿಗೆ



ಸಿಬ್ಬಂದಿ ಸಿರಿಧಾನ್ಯ ಬಗ್ಗೆ ಜನರಿಗೆ ಅಗತ್ಯ ಮಾಹಿತಿ ನೀಡುತ್ತಿರುವುದು ಮೇಳದಲ್ಲಿ ಕಂಡಬಂತು. ರಾಜ್ಯದ ಮೂಲೆ ಮೂಲೆಗಳಿಂದ ಸಾವಿರಾರು ರೈತರು ಮೇಳಕ್ಕೆ ಆಗಮಿಸಿ ಉತ್ಪನ್ನಗಳ ಬಗ್ಗೆ ಮಾಹಿತಿ ಪಡೆಯುತ್ತಿದ್ದರು. ಸಾರ್ವಜನಿಕರು ಸೇರಿ ವಿದ್ಯಾರ್ಥಿಗಳು ಮಳಿಗೆ ಮುಂದೆ ಸೆಲ್ಫಿ ಕ್ಲಿಕ್ಕಿಸಿಕೊಂಡು ಖುಷಿಪಟ್ಟರು. ಕೃಷಿ ಮತ್ತು ತೋಟಗಾರಿಕೆ ಇಲಾಖೆ ವಿವಿಯ ವಿಜ್ಞಾನಿಗಳು ಸಿರಿಧಾನ್ಯ ಮತ್ತು ನೈಸರ್ಗೀಕ ಕೃಷಿಯ ಬ್ಗಗೆ ಕನ್ನಡದಲ್ಲೇ ಮಾಹಿತಿ ನೀಡಿದರು. ಸಾವಯುವ ಕೃಷಿ ಪ್ರಾಮುಖ್ಯತೆ ಮತ್ತದರ ಸವಾಲುಗಳು, ಮೌಲ್ಯವರ್ಧನೆಯಲ್ಲಿ ಯುವ ನವೋದ್ಯಮಿಗಳು ಪಾತ್ರ ಸೇರಿ ಹಲವು ವಿಚಾರಗಳ ಕುರಿತು ತಜ್ಞರು ಬೆಳಕು ಚೆಲ್ಲಿದರು. ರೈತರು ಮತ್ತು ಮಾರಾಟಗಾರರ ಸಂಪರ್ಕ ಕಲ್ಪಿಸಲಾಯಿತು. ಮೇಳದಲ್ಲಿ 200 ಮಂದಿ ಮಾರಾಟಗಾರರು, ಉತ್ಪಾದಕರು ತಮ್ಮ ಹೆಸರು ನೋಂದಾಯಿಸಿಕೊಂಡಿದ್ದಾರೆ.

ಉತ್ತರ ಪ್ರದೇಶದ ಕೃಷಿ ಸಚಿವ ಸೂರ್ಯಪ್ರತಾಪ್ ಶಾಹಿ, ಸಚಿವರಾದ ಕೆ.ವೆಂಕಟೇಶ್, ಚಲುವರಾಯಸ್ವಾಮಿ, ಶಾಸಕರಾದ ಬಿ.ಆರ್,ಪಾಟೀಲ್, ವಿನಯ್‌ಕುಲಕರ್ಣಿ, ಕೋನರೆಡ್ಡಿ, ಕೃಷಿ ಇಲಾಖೆಯ ಕಾರ್ಯದರ್ಶಿ ಅನ್ಬುಕುಮಾರ್, ಆಯುಕ್ತ ಪಾಟೀಲ್ ಸೇರಿ ಮತ್ತಿರ–ರಿದ್ದರು.

**ಹೊಸ ಸಂಶೋಧನೆ ನಡೆಸಿ:**

ಸಿಎಂ ಸಿದ್ದರಾಯಮ್ಯ ಮೇಳಕ್ಕೆ ಚಾಲನೆ ನೀಡಿ ಮಾತನಾಡಿದರು. ಕೃಷಿ ಕ್ಷೇತ್ರ ಎದುರಿಸುತ್ತಿರುವ ಸವಾಲುಗಳ ಪರಿಹಾರಕ್ಕಾಗಿ ಕೃವಿ ವಿಶ್ವವಿದ್ಯಾಲಯಗಳು ಹೊಸ ಸಂಶೋಧನೆ ನಡೆಸಲು ಮುಂದಾಗಬೇಕಿದೆ. ಕೃಷಿ ವಿಶ್ವವಿದ್ಯಾಲಯಗಳು ಹೊಸ ಸಂಶೋಧನೆ ಮೂಲಕ ಕೃಷಿ ಕ್ಷೇತ್ರ ಸಮಸ್ಯೆಗಳಿಗೆ ಪರಿಹಾರ ಒದಗಿಸಬೇಕು ಎಂದರು.

ಇಂದಿರಾ ಕ್ಯಾಂಟೀನ್ ಮತ್ತು ಮಧ್ಯಾಹ್ನದ ಶಾಲಾ ಊಟದಲ್ಲಿ ಸಿರಿಧಾನ್ಯ ಬಳಕೆಗೆ ಒತ್ತು ನೀಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಹತ್ವದ ಘೋಷಣೆ ಮಾಡಿದರು.

ಹಳೆಯ ಸಂಶೋಧನೆ ಮಾದರಿ ಬದಲು ಆಧುನಿಕ ತಂತ್ರಜ್ಞಾನ ಅಳವಡಿಸಿ ಸಂಶೋಧನೆ ನಡೆಸಬೇಕು. ಗುಣಮಟ್ಟ ಬೀಜ, ಸಾವಯವ ಕೃಷಿ ಸೇರಿ ಪ್ರಮುಖ ಸಲಹೆಗಳನ್ನು ರೈತರಿಗೆ ನೀಡಬೇಕು ಎಂದರು. ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಿರಿಧಾನ್ಯಕ್ಕೆ ಹೆಚ್ಚು ಪ್ರಾಶಸ್ತ್ಯ ಸಿಗುತ್ತಿದೆ. ಅಂತಾರಾಷ್ಟ್ರೀಯ ಸಿರಿ ಧಾನ್ಯ ವರ್ಷ ಎಂದು ಘೋಷಣೆ ಮಾಡಿದ್ದರಿಂದ ರಾಜ್ಯದ ರೈತರಿಗೆ ಹೆಚ್ಚಿನ ಅನುಕೂಲವಾಗಿದೆ. ಸಿರಿಧಾನ್ಯ ಬೆಳೆಗೆ ನಮ್ಮ ಸರ್ಕಾರ ಅಗತ್ಯ ಪ್ರೋತ್ಸಾಹ ನೀಡುತ್ತಿದೆ. ಕೃಷಿಯಲ್ಲಿ ದೊಡ್ಡ ಪ್ರಮಾಣದಲ್ಲಿ ಬದಲಾವಣೆಯಾಗಬೇಕಿದೆ. ವಿದೇಶಗಳಲ್ಲಿ ಮುಂದಿನ ವರ್ಷದ ಋತುಮಾನದಲ್ಲಿ ಎಷ್ಟು ಮಳೆ ಬೀಳುವುದು, ಬಿತ್ತನೆ, ಉತ್ಪಾದನೆ, ಅಂತಾರಾಷ್ಟ್ರೀಯ ಹಾಗೂ ಸ್ಥಳೀಯ ಮಾರುಕಟ್ಟೆ ಆಧಾರಿಸಿ ವರದಿ ಸಿದ್ಧಪಡಿಸುತ್ತಾರೆ. ಅದೇರೀತಿ ಕೃಷಿ ಇಲಾಖೆ ಮತ್ತು ಕೃಷಿ ಬೆಲೆ ಆಯೋಗ ಕಾರ್ಯನಿರ್ವಹಿಸಬೇಕು ಎಂದು ಸಲಹೆ ನೀಡಿದರು.

## ಕನ್ನಡಿಗನ ಅದ್ಭುತ ಸಾಧನೆ: ತೈಲ ವರ್ಣ ಚಿತ್ರಗಳ ಮೂಲಕ ಪೌರಾಣಿಕ ಕಥೆಗಳ ಅನಾವರಣ

ಭಾರತೀಯ ಪುರಾಣಗಳ ಶ್ರೀಮಂತ ಇತಿಹಾಸದಲ್ಲಿ ಮಹಾಭಾರತವು ಸದಾ ಪ್ರಸ್ತುತವಾಗಿರುವ ಮಹಾಕಾವ್ಯವಾಗಿದೆ. ಮಹಾಭಾರತವು ಕುರುವಂಶದ ಕಥೆ, ಕುರುಕ್ಷೇತ್ರ ಯುದ್ಧದಲ್ಲಿ ಕೌರವರು ಮತ್ತು ಪಾಂಡವರ ನಡುವಿನ ಧರ್ಮಯುದ್ಧದ ಕತೆಯನ್ನು ಮಹಾಭಾರತ ನವಿರಾಗಿ ಹೇಳುತ್ತದೆ. ಶೌರ್ಯ, ನೈತಿಕತೆ ಮತ್ತು ಬ್ರಹ್ಮಾಂಡದ ಸಮತೋಲನವೇ ಮಹಾಭಾರತದ ಮೂಲತಿರುಳಾಗಿದೆ.

ಶ್ರೀ ಸ್ವಾಮಿ ಸಿ.ಜೆ ಅವರ ಮಹಾಭಾರತ ಸರಣಿಯು ಕೇವಲ ತೈಲ ವರ್ಣ ಚಿತ್ರಗಳ ಸಂಗ್ರಹವಲ್ಲ, ಬದಲಿಗೆ ಕಾಲಾತೀತವಾದ ಸಾಹಸಗಾಥೆಯ ಸೊಗಸಾದ ನಿರೂಪಣೆಯಾಗಿದೆ. ಶ್ರೀ ಸ್ವಾಮಿ ಅವರು ಕಾರ್ಪೊರೇಟ್ ಜಗತ್ತಿನಲ್ಲಿ 27 ವರ್ಷಕ್ಕೂ




ಅಧಿಕ ಅನುಭವ ಹೊಂದಿರುವ ಅನುಭವಿ ಮ್ಯಾನೇಜ್ಮೆಂಟ್ ವೃತ್ತಿಪರರಾಗಿದ್ದು, ಕಲೆಯ ಬಗ್ಗೆ ಅತ್ಯುತ್ಸಾಹ ಹೊಂದಿರುವ ವ್ಯಕ್ತಿಯಾಗಿದ್ದಾರೆ. ಈ ಸೃಜನಶೀಲ ಪ್ರಯಾಣವನ್ನು ಅವರು 2018 ರಲ್ಲಿ ಪ್ರಾರಂಭಿಸಿ ಫೆಬ್ರವರಿ 2023 ರವರೆಗೆ 5 ವರ್ಷಗಳ ಅವಧಿಯಲ್ಲಿ 178ಕ್ಕೂ ಅಧಿಕ ಮಹಾಭಾರತದ ಕಲಾಕೃತಿಗಳನ್ನು ರಚಿಸುವ ಮೂಲಕ ಮಹಾಭಾರತ ಕಲಾರಸಿಕರಿಗೆ ಕೊಡುಗೆಯನ್ನು ನೀಡಿದ್ದಾರೆ.

ಮಹಾಭಾರದ ಸರಣಿಯನ್ನು ಅನಾವರಣಗೊಳಿಸಿದ ಬಳಿಕ ಶ್ರೀ ಸ್ವಾಮಿ ಸಿ.ಜೆ ಅವರು ಹೇಳಿದರು, "ನಿಜಕ್ಕೂ ನಾನು ರೋಮಾಂಚಿತನಾಗಿದ್ದೇನೆ. ಐದು ವರ್ಷಗಳ ಅವಧಿಯನ್ನು ಮೀಸಲಿಟ್ಟು 24" ಃಜ 30" ಅಳತೆಯ ಕ್ಯಾನ್ವಾಸ್ಗಳಲ್ಲಿ ರಚಿಸಿರುವ ಮಹಾಭಾರತದ ಸರಣಿಯ 178 ತೈಲವರ್ಣ ಫ್ರೇಮ್–ಟು–ಫ್ರೇಮ್ ತೈಲವರ್ಣ ಕಲಾಕೃತಿಗಳನ್ನು ಚಿತ್ರಕಲಾ ರಸಿಕರಿಗೆ ಹಾಗು ಸಮಾಜ–ಕ್ಕೆ ಕೊಡುಗೆಯಾಗಿ ನೀಡುವ ಭಾಗ್ಯ ನನ್ನದಾಗಿದೆ. ಈ ಸರಣಿಗಾಗಿ ತೆಗೆದುಕೊಂಡಿರುವ ಸಮಯವು ಇಟಲಿಯ ಕಲಾವಿದ ಶ್ರೀ ಜಿಯಂಪಾವ್ಲ್ವ ಥೋಮಸೆಟ್ಟಿ ಅವರ ಟೈಮ್ಲೈನ್ ಅನ್ನು ಮೀರಿಸಿದೆ. ಭಾರತೀಯ ಮತ್ತು ಮಹಾಭಾರತದ ಅಧ್ಯಯನಕ್ಕಾಗಿ ಹೋಲಿಸಬಹುದಾದ ಅವಧಿಯನ್ನು ಮೀಸಲಿಟ್ಟರೂ, ಇಟಾಲಿಯನ್ ಕಲಾವಿದ ದೊಡ್ಡ ಕ್ಯಾನ್ವಾಸ್ಗಳಲ್ಲಿ ಮಹಾಭಾರತದ 25 ವರ್ಣಚಿತ್ರಗಳನ್ನು ರಚಿಸಲು 12 ವರ್ಷಗಳನ್ನು (ಅಧ್ಯಯನಕ್ಕಾಗಿ 5 ವರ್ಷ ಮತ್ತು ಕಲಾಕೃತಿ ರಚಿಸಲು 7 ವರ್ಷ) ತೆಗೆದುಕೊಂಡರು. ವಾಸ್ತವವಾಗಿ ಈ ಮಟ್ಟದ ಯಶಸ್ಸು ಸಾಧಿಸಲು ಶ್ರೀ ಜಿಯಂಪಾವ್ಲ್ವ ಥೋಮಸೆಟ್ಟಿ ಅವರೇ ನನಗೆ ಸ್ಫೂರ್ತಿ.

**ಕಲಾವಿದರ ಕುರಿತು:** ಶ್ರೀ ಸ್ವಾಮಿ ಅವರು ಮ್ಯಾನೇಜ್ಮೆಂಟ್ ವೃತ್ತಿಪರ ಮತ್ತು ಉತ್ಸಾಹಿ ಯೋಗಾಭ್ಯಾಸಿಯಾಗಿದ್ದಾರೆ. ಈ ದ್ವಂದ್ವ

## ನವಜಾತ ಶಿಶು ಮಾರಾಟ; ತಾಯಿ ಸೇರಿ ಐವರ ಬಂಧನ



ಹಾಸನ: ಹುಟ್ಟಿದ ಮಾರನೇ ದಿನವೇ ನವಜಾತ ಶಿಶುವನ್ನು ಮಾರಾಟ ಮಾಡಿರುವ ಘಟನೆ ಹಾಸನದಲ್ಲಿ ನಡೆದಿದೆ. ಸಕಲೇಶಪುರದ ಬ್ಯಾಕರಹಳ್ಳಿಯಲ್ಲಿ ಒಂದು ದಿನದ ಗುಂಡು ಮಗುವನ್ನ ಮಾರಾಟ ಮಾಡಿದ ಆರೋಪದಡಿ ತಾಯಿ ಗಿರಿಜಾ, ಆಶಾ ಕಾರ್ಯಕರ್ತೆ ಸುಮಿತ್ರಾ, ಮಗು ಖರೀದಿಸಿದ ಮಹಿಳೆ ಉಷಾ, ಶ್ರೀಕಾಂತ್, ಸುಬ್ರಮಣ್ಯ ಎಂಬುವರನ್ನು ಬಂಧಿಸಲಾಗಿದೆ. ಕಳೆದ ವರ್ಷ ನವೆಂಬರ್ 15ರಂದು ಗಿರಿಜಾ ಗಂಡು ಮಗುವಿಗೆ ಜನ್ಮ ನೀಡಿದ್ದರು. ಆದರೆ ತಮಗೆ ಈಗಾಗಲೇ ಇಬ್ಬರು ಮಕ್ಕಳಿರುವುದರಿಂದ ನವೆಂಬರ್ 16ರಂದು ಆಶಾ ಕಾರ್ಯಕರ್ತೆ ಸುಮಿತ್ರಾ ಮೂಲಕ ಚಿಕ್ಕಮಗಳೂರು ಮೂಲದ ಉಷಾ ಎಂಬುವರಿಗೆ ಮಗು ಮಾರಾಟ ಮಾಡಿದ್ದರು. ಈ ಪ್ರಕರಣವನ್ನು ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ಕಾಂತರಾಜ್ ಬಯಲಿಗೆಳೆದಿದ್ದು ಈ ಸಂಬಂಧ ಪ್ರಕರಣ ದಾಖಲಿಸಲಾಗಿದೆ.

## ಪ್ರತಿಯೊಬ್ಬರಿಂದ ಪ್ರತಿಭೆ ಪ್ರೋತ್ಸಾಹಿಸುವ ಕಾರ್ಯವಾಗಲಿ




ಗೋಕಾಕ: ಶ್ರವಣದೋಷ ಉಳ್ಳವರಿಗೆ ಅನುಕಂಪ ತೋರುವ ಬದಲು ಅವರ ಪ್ರತಿಭೆಯನ್ನು ಪ್ರೋತ್ಸಾಹಿಸುವ ಕಾರ್ಯ ಪ್ರತಿಯೊಬ್ಬರು ಮಾಡಬೇಕೆಂದು ಯುವ ನಾಯಕ ರಾಹುಲ್ ಜಾರಕಿಹೊಳಿ ಹೇಳಿದರು.

ನಗರದ ವಾಲ್ಮೀಕಿ ಕ್ರೀಡಾಂಗಣದಲ್ಲಿ ಕರ್ನಾಟಕ ಕಿವುಡರ ಕ್ರೀಡಾ ಒಕ್ಕೂಟ ಬೆಂಗಳೂರು ಸಹಯೋಗದಲ್ಲಿ ಬೆಳಗಾವಿ ಜಿಲ್ಲಾ ಕಿವುಡರ ಸಂಘ ಆಯೋಜಿಸಿದ್ದ 9ನೇ ಕರ್ನಾಟಕ ರಾಜ್ಯ ಖ20 ಟೆನಿಸ್ ಬಾಲ್ ಕಿವುಡರ ಕ್ರಿಕೆಟ್ ಚಾಂಪಿಯನ್ ಶಿಪ್ ಗೆ ಚಾಲನೆ ನೀಡಿ ಮಾತನಾಡಿದ ಅವರು, ಸತೀಶ್ ಜಾರಕಿಹೊಳಿ ಫೌಂಡೇಶನ್ ವತಿಯಿಂದ ಎಲ್ಲಾ ರೀತಿ ಕ್ರೀಡಾಪಟುಗಳನ್ನು ಪ್ರೋತ್ಸಾಹಿಸುವ ಕಾರ್ಯ ಮಾಡುತ್ತಿದ್ದೇವೆ. ಮುಂದೆಯೂ ಪ್ರೋತ್ಸಾಹಿಸುತ್ತೇವೆ, ನಮ್ಮ ಸಹಾಯ, ಸಹಕಾರ ಸದಾ ಕ್ರೀಡಾಪಟುಗಳಿಗೆ ಇರಲಿದೆ ಎಂದು ಭರವಸೆ ನೀಡಿದರು.

ಶ್ರವಣದೋಷ ಉಳ್ಳವರು ರಾಜ್ಯ ಮತ್ತು ಅಂತರಾಷ್ಟ್ರೀಯ ಮಟ್ಟದ ಕ್ರೀಡಾ ಸ್ಪರ್ಧೆಯಲ್ಲಿ ಭಾಗವಹಿಸಬೇಕು. ಕ್ರೀಡೆ ಸ್ಪರ್ಧೆಯಲ್ಲಿ ಭಾಗವಹಿಸಿ ತಮ್ಮ ಪ್ರತಿಭೆ ಅನಾವರಣಗೊಳಿಸಬೇಕು. ಶ್ರವಣದೋಷ ಉಳ್ಳ ಕೆಲವರು ಎಲ್ಲ ರಂಗಗಳಲ್ಲಿ ಪಾಲ್ಗೊಂಡು ರಾಷ್ಟ್ರ ಮಟ್ಟದಲ್ಲಿ ಹೆಸರು ವಾಸಿಯಾಗಿದ್ದಾರೆ. ಪ್ರತಿಯೊಬ್ಬ ಶ್ರವಣದೋಷ ಉಳ್ಳವರು ಆರ್ಥಿಕವಾಗಿ ಸಬಲೀಕರಣಗೊಳ್ಳಲು ಸರಕಾರ ಅನೇಕ ಯೋಜನೆಗಳನ್ನು ಜಾರಿ ತಂದಿದೆ. ಯೋಜನೆಗಳನ್ನು ಸದು ಪಯೋಗ ಪಡೆದುಕೊಳ್ಳಬೇಕು ಎಂದರು.

ಸರ್ಕಾರವು ಶ್ರವಣದೋಷ ವುಳ್ಳ ಯುವಕ–ಯುವತಿಯರಿಗೂ ಎಲ್ಲಾ ರೀತಿಯ ಸೌಕರ್ಯಗಳನ್ನು ಒದಗಿಸಬೇಕು. ಜಿಲ್ಲಾ, ತಾಲೂಕು, ಹೊಬ್ಬಳಿ ಮಟ್ಟದಲ್ಲಿಯೂ ವಿಶೇಷಚೇತನ–ರಿಗೆ ದೊರಕಬಹುದಾದ ಸೌಲಭ್ಯಗಳನ್ನು ಪ್ರಾಮಾಣಿಕವಾಗಿ ಒದಗಿಸುವ ಕಾರ್ಯ ಗಳನ್ನು ಎಲ್ಲರೂ ಮಾಡಬೇಕೆಂದು ಇದೇ ವೇಳೆ ತಿಳಿಸಿದರು. ಈ ಸಂದರ್ಭದಲ್ಲಿ ಕರ್ನಾಟಕ ಕಿವುಡರ ಕ್ರೀಡಾ ಒಕ್ಕೂಟ, ಬೆಳಗಾವಿ ಜಿಲ್ಲಾ ಕಿವುಡರ ಸಂಘದ ಸದಸ್ಯರು ಸೇರಿದಂತೆ ಹಲವು ಕ್ರೀಡಾ ಅಭಿಮಾನಿಗಳು ಇದ್ದರು.

## ಯುವತಿಯ ಮೇಲೆ ಹಸ್ತಮೈಥುನದ ಮೂಲಕ ವೀರ್ಯ ಸ್ಖಲನ ಮಾಡಿದ ಕಾಮುಕ



ಉತ್ತರ ಕನ್ನಡ : ಉತ್ತರ ಕನ್ನಡ ಜಿಲ್ಲೆಯ ಗೋಕರ್ಣದಲ್ಲಿ ರೈಲಿನಲ್ಲಿ ಪ್ರಯಾಣಿಸುತ್ತಿದ್ದ ವೇಳೆ ನಿದ್ದೆಗೆ ಜಾರಿದ ಯುವತಿಯ ಮುಖದ ಮೇಲೆ ಹಸ್ತಮೈಥುನ ಮೂಲಕ ವೀರ್ಯ ಸ್ಖಲನ ಮಾಡಿದ ಕಾಮುಕನನ್ನು ಅರೆಸ್ಟ್ ಮಾಡಲಾಗಿದೆ.

ಕೇರಳದಿಂದ ಗೋವಾಗೆ ಸಂಚರಿಸುತ್ತಿದ್ದ ರೈಲಿನಲ್ಲಿ, ಕೋ–ಝಿಕೋಡ್ ಮೂಲದ ಯುವತಿ ಹಾಗೂ ಇಬ್ಬರು ಗೆಳೆಯರೊಂದಿಗೆ ತೆರಳುತ್ತಿದ್ದರು.

ಈ ವೇಳೆ ಆಕೆಗೆ ನಿದ್ದೆ ಬಂದಿದ್ದು, ಆಕೆಯ ಜೊತೆಗಿದ್ದ ಇತರ ಇಬ್ಬರು ನಿದ್ದೆಗೆ ಜಾರಿದ್ದಾರೆ.

ರೈಲು ಬೆಳಗ್ಗೆ 7.30ರ ವೇಳೆಗೆ ಕರ್ನಾಟಕದ ಗೋಕರ್ಣ ರೈಲು ನಿಲ್ದಾಣಕ್ಕೆ ಆಗಮಿಸಿದೆ.

ಈ ವೇಳೆ ಬೇರೆ ಸೀಟಿನಲ್ಲಿದ್ದ ಆರೋಪಿ ಯುವತಿಯ ಹತ್ತಿರ ಬಂದು ಹಸ್ತಮೈಥುನ ಮಾಡಿದ್ದಾನೆ. ಯುವತಿ ನಿದ್ದೆಯಿಂದ ಎಚ್ಚರಗೊಂಡು ಸಹಾಯಕ್ಕಾಗಿ ಬೇಡಿದ್ದಾಳೆ.

ಈ ವೇಳೆ ನಿದ್ದೆಗೆ ಜಾರಿದ್ದ ಇಬ್ಬರು ಎಚ್ಚರಗೊಂಡು ಕಾಮುಕನ ತಡೆದು ನಿಲ್ಲಿಸಿದ್ದಾರೆ.

ಬಳಿಕ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ತಕ್ಷಣವೇ ಪೊಲೀಸರು ಆಗಮಿಸಿ ಕಾಮುಕನನ್ನು ವಶಕ್ಕೆ ಪಡೆದಿದ್ದಾರೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಆರೋಪಿಯ ವಿಚಾರಣೆ ನಡೆಸಿದ್ದಾರೆ.

## ಜ.9, ರಂದು ತೆರೆಯಲಿದೆ ಜ್ಯೋತಿ ಸಿಎನ್‌ಸಿ ಆಟೋಮೇಷನ್ ಐಪಿಓ

ಹುಬ್ಬಳ್ಳಿ: ಜ್ಯೋತಿ ಸಿಎನ್‌ಸಿ ಆಟೋಮೇಷನ್ ಲಿಮಿಟೆಡ್, ಮೆಟಲ್ ಕಟ್ಟಿಂಗ್ ಕಂಪ್ಯೂಟರ್ ನ್ಯೂಮರಿಕಲ್ ಕಂಟ್ರೋಲ್(ಸಿ–ಎನ್‌ಸಿ) ಯಂತ್ರಗಳನ್ನು ತಯಾರಿಸುವ ವಿಶ್ವದ ಪ್ರಮುಖ ತಯಾರಕರಲ್ಲಿ ಒಂದಾಗಿದೆ ಮತ್ತು 2023ರ ಹಣಕಾಸು ವರ್ಷದಲ್ಲಿ ಭಾರತದ ಮೂರನೇ ಅತಿದೊಡ್ಡ ಮಾರುಕಟ್ಟೆ ಪಾಲನ್ನು ಹೊಂದಿದೆ.

2022ರ ಕ್ಯಾಲೆಂಡರ್ ವರ್ಷದಲ್ಲಿ ಜಾಗತಿಕವಾಗಿ ಹನ್ನೆರಡನೇ ಅತಿ–ದೊಡ್ಡ ಮಾರುಕಟ್ಟೆ ಪಾಲನ್ನು ಹೊಂದಿದೆ. ಕಂಪನಿಯು ಜನವರಿ 9 ರದಂದು ಈಕ್ವಿಟಿ ಷೇರುಗಳ ಪಬ್ಲಿಕ್ ಇನಿಷಿಯಲ್ ಆಫರಿಂಗ್(ಐಪಿಒ) ತೆರೆಯುವ ಪ್ರಸ್ತಾಪನೆ ಸಲ್ಲಿಸಿದೆ.

ಆ್ಯಂಕರ್ ಇನ್‌ವೆಸ್ಟರ್ ಬಿಡ್ಡಿಂಗ್ ದಿನಾಂಕವು ಬಿಡ್/ ಇಷ್ಯೂಆರಂಭದ ದಿನಾಂಕಕ್ಕಿಂತ




ಒಂದು ಕೆಲಸದ ದಿನ ಮೊದಲು ಇರುತ್ತದೆ. ಅಂದರೆ ಆ ದಿನಂಕ ಸೋಮವಾರ, ಜನವರಿ 08, 2024 ಆಗಲಿದೆ. ಬಿಡ್/ಸಂಚಿಕೆ ಮುಕ್ತಾಯ ದಿನಾಂಕ ಜನವರಿ 11, 2024 ಆಗಿರುತ್ತದೆ.

ಪ್ರತಿ ಈಕ್ವಿಟಿ ಷೇರಿಗೆ 315ರಿಂದ ಪ್ರತಿ ಈಕ್ವಿಟಿ ಷೇರಿಗೆ 331ಕ್ಕೆ ಸಂಚಿಕೆಯ ದರ ಪಟ್ಟಿಯನ್ನು ನಿಗದಿಪಡಿಸಲಾಗಿದೆ. ಕನಿಷ್ಠ 45 ಈಕ್ವಿಟಿ ಷೇರುಗಳು ಮತ್ತು 45 ಈಕ್ವಿಟಿ ಷೇರುಗಳ ಮಲ್ಟಿಪಲ್ ಗಳಿಗೆ ಬಿಡ್‌ಗಳನ್ನು ಮಾಡಬಹುದು.

ಕಂಪನಿಯ ಇನಿಷಿಯಲ್ ಪಬ್ಲಿಕ್ ಆಫರಿಂಗ್ 10,000.00 ಮಿಲಿಯನ್‌ನ ತಾಜಾ ಸಂಚಿಕೆಯನ್ನು ಒಳಗೊಂಡಿದೆ.

ಕಂಪನಿಯ ದೀರ್ಘಾವಧಿಯ ಕಾರ್ಯನಿರತ ಬಂಡವಾಳದ ಅಗತ್ಯತೆಗಳು ಮತ್ತು ಸಾಮಾನ್ಯ ಕಾರ್ಪೊರೇಟ್ ಉದ್ದೇಶಗಳಿಗಾಗಿನ ಫಂಡಿಂಗ್, ಕಂಪನಿಯು ಪಡೆದ ಕೆಲವು ಸಾಲಗಳ ಪೂರ್ಣ ಅಥವಾ ಭಾಗಶಃ ಮರುಪಾವತಿ ಮತ್ತು/ ಅಥವಾ ಪೂರ್ವ–ಪಾವತಿಯ ನಿವ್ವಳ ಆದಾಯವನ್ನು ಬಳಸಿಕೊಳ್ಳಲು ಕಂಪನಿಯು ಪ್ರಸ್ತಾಪನೆ ಸಲ್ಲಿಸುತ್ತದೆ.

## ಮಾಹಿತಿ ಇಲ್ಲವೆಂದ ಗೃಹ ಸಚಿವರು; ರಾಮನ ಭಕ್ತ ಎಂದ ಶಾಸಕ ಇಕ್ಬಾಲ್ ಹುಸೇನ್

### ವಿವಾದ ಸೃಷ್ಟಿಸಿದ ಹರಿಪ್ರಸಾದ್ ಹೇಳಿಕೆ; ಬಿಜೆಪಿ ಆಕ್ರೋಶ

**ಎಚ್. ಮಾರುತಿ**

ಕೆಲವೇ ದಿನಗಳಲ್ಲಿ ನಡೆಯಲಿರುವ ರಾಮ ಮಂದಿರ ಉದ್ಘಾಟನಾ ಸಮಾರಂಭವನ್ನು ರಾಜಕೀಯ ಪ್ರೇರಿತ ಸಮಾರಂಭವೇ ಹೊರತು ಧಾರ್ಮಿಕ ಸಮಾರಂಭ ಅಲ್ಲ ಎಂದು ಹಿರಿಯ ಕಾಂಗ್ರೆಸ್ ಮುಖಂಡ ವಿಧಾನ ಪರಿಷತ್ ಸದಸ್ಯ ಬಿಕೆ ಹ–ರಿಪ್ರಸಾದ್ ನೀಡಿರುವ ಹೇಳಿಕೆ ಆಕ್ರೋಶಕ್ಕೆ ಕಾರಣವಾಗಿದೆ.

ಅಯೋಧ್ಯೆಗೆ ಬೇಟಿ ನೀಡುವ ಸಾರ್ವಜನಿಕರಿಗೆ ಸರ್ಕಾರವೇ ರಕ್ಷಣೆ ನೀಡಬೇಕು ಎಂದ ಅವರು ಗೋಧ್ರಾ ದುರಂತದ ಮಾದರಿಯ ಮತ್ತೊಂದು ದುರಂತ ಸಂಭವಿಸಬಹುದು ಎಂದು ಸಂಶಯ ವ್ಯಕ್ತಪಡಿಸಿದ್ದಾರೆ. ಒಂದು ವೇಳೆ ಪುಲ್ವಾಮಾ ಅಥವಾ ಗೋಧ್ರಾ ಮಾದರಿಯಲ್ಲಿ ದುರಂತಗಳು ನಡೆದರೆ ಬಿಜೆಪಿಯೇ ಹೊಣೆ ಎಂದರು. ಸಮಾಜದಲ್ಲಿ ಒತ್ತಡಗಳನ್ನು ಉಂಟುಮಾಡುವುದು ಬಿಜೆಪಿಗೆ ಅಭ್ಯಾಸವಾಗಿದ್ದು ಯಾವ ಮಟ್ಟಕ್ಕೆ ಬೇಕಾದರೂ ಅವರು ಇಳಿಯುತ್ತಾರೆ ಎಂದು ವ್ಯಂಗ್ಯವಾಡಿದರು.

ರಾಮ ಮಂದಿರ ಉದ್ಘಾಟನಾ ಸಮಾರಂಭಕ್ಕೆ ಅಯೋಧ್ಯೆಗೆ ಹೋಗುವವರ ರಕ್ಷಣೆ ಬಿಜೆಪಿ ಸರಕಾರಕ್ಕೇ ಸೇರಿದೆ.

ಇದು ನನ್ನ ವೈಯಕ್ತಿಕ ಅಭಿಪ್ರಾಯ ಎಂದರು.

ರಾಮಮಂದಿರ ಉದ್ಘಾಟನೆ ಧಾರ್ಮಿಕ ಕಾರ್ಯಕ್ರಮ ಅಲ್ಲ. ಇದೊಂದು ರಾಜಕೀಯ ಕಾರ್ಯಕ್ರಮ ಆಗುತ್ತಿದೆ. ಧಾರ್ಮಿಕ ಕಾರ್ಯಕ್ರಮ ಆಗಿದ್ದರೆ ನಾವೆಲ್ಲರೂ ಹೋಗುತ್ತಿದ್ದೆವು' ಎಂದು ವಿಧಾನ ಪರಿಷತ್ ಕಾಂಗ್ರೆಸ್ ಸದಸ್ಯ ಬಿ.ಕೆ. ಹರಿಪ್ರಸಾದ್ ಹೇಳಿದರು.

**ಹರಿಪ್ರಸಾದ್ ವಿರುದ್ಧ ಹೋರಾಟ:**

ಉದ್ಘಾಟನಾ ಸಮಾರಂಭಕ್ಕೆ ತೆರಳುವ



ರಾಮಭಕ್ತರಲ್ಲಿ ಭಯ ಹುಟ್ಟಿಸಲು ಹ–ರಿಪ್ರಸಾದ್ ಇಂತಹ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಅವರ ವಿರುದ್ಧ ಕಾನೂನು ಹೋರಾಟ ಮಾಡುವುದಾಗಿ ಬಿಜೆಪಿ ಮುಖಂಡ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಇಡೀ ದೇಶದಲ್ಲಿ ಸಂಭ್ರಮದ ವಾತಾವರಣ ಇರುವುದನ್ನು ಕಾಂಗ್ರೆಸ್ ಗೆ ಸಹಿಸಿಕೊಳ್ಳಲು ಸಾಧ್ಯವಾಗುತ್ತಿಲ್ಲ ಎಂದು



ಕಿಡಿ ಕಾರಿದರು.

ಹರಿಪ್ರಸಾದ್ ಹೇಳಿಕೆಗೆ ಬಿಜೆಪಿ ಮುಖಂಡ ಕೆ ಎಸ್ ಈಶ್ವರಪ್ಪ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಅವರ ಹೇಳಿಕೆ ಅಚ್ಚರಿ ಮೂಡಿಸಿದೆ. ಅಯೋಧ್ಯೆಗೆ ಬೇಟಿ ನೀಡುವ ಸಾರ್ವಜನಿಕರನ್ನು ಶ್ರೀರಾಮಚಂದ್ರ ರಕ್ಷಣೆ ಮಾಡುತ್ತಾನೆ. ರಾಮ ಮಂದಿರಕ್ಕೆ ರಾಜೀವ್ ಗಾಂಧಿ ಬೆಂಬಲ ವ್ಯಕ್ತಪಡಿಸಿದ್ದರು ಎಂದರು.

**ಮಾಹಿತಿ ಇಲ್ಲ: ಪರಮೇಶ್ವರ್**

ಗೋಧ್ರಾ ರೀತಿಯ ಮತ್ತೊಂದು ದುರಂತ ಸಂಭವಿಸಲಿದೆ ಎಂಬ ಹರಿಪ್ರಸಾದ್ ಹೇಳಿಕೆ ಕುರಿತು ನನಗೆ ಮಾಹಿತಿಯಿಲ್ಲ. ಇಲಾಖೆಯ ಗಮನಕ್ಕೂ ಆ ವಿಚಾರ ಬಂದಿಲ್ಲ.

ಹರಿಪ್ರಸಾದ್ ಅವರಿಗೆ ಮಾಹಿತಿ ಇರಬಹುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ಹೇಳಿದ್ದಾರೆ.

ಹರಿಪ್ರಸಾದ್ ಯಾವ ಮಾಹಿತಿ ಆಧರಿಸಿ ಹೇಳಿದ್ದಾರೆ ಎನ್ನುವುದು ನನಗೆ ಗೊತ್ತಿಲ್ಲ. ಇದು ಅವರ ವೈಯಕ್ತಿಕ ಹೇಳಿಕೆ ಎಂದು ಅವರೇ ಹೇಳಿಕೊಂಡಿದ್ದಾರೆ ಎಂದರು.

**ನಾನು ರಾಮಭಕ್ತ; ಶಾಸಕ ಇಕ್ಬಾಲ್ ಹುಸೇನ್**

ನಾನೂ ಕೂಡ ರಾಮಭಕ್ತನಾಗಿದ್ದು, ರಾಮನನ್ನು ಭಕ್ತಿಪೂರ್ವಕವಾಗಿ

> ಗೋಧ್ರಾ ರೀತಿಯ ಮತ್ತೊಂದು ದುರಂತ ಸಂಭವಿಸಲಿದೆ ಎಂಬ ಹರಿಪ್ರಸಾದ್ ಹೇಳಿಕೆ ಕುರಿತು ನನಗೆ ಮಾಹಿತಿಯಿಲ್ಲ. ಇಲಾಖೆಯ ಗಮನಕ್ಕೂ ಆ ವಿಚಾರ ಬಂದಿಲ್ಲ. ಹರಿಪ್ರಸಾದ್ ಅವರಿಗೆ ಮಾಹಿತಿ ಇರಬಹುದು.
>
> **ಗೃಹ ಸಚಿವ ಡಾ.ಜಿ.ಪರಮೇಶ್ವರ**

ಪೂಜೆ ಮಾಡುತ್ತೇನೆ. ಇದೇ ಕಾರಣ–ಕ್ಕಾಗಿ, ರಾಮನಗರದಲ್ಲಿ ಚಿರಾಮೋತ್ಸವ ನಡೆಸಬೇಕು ಎಂಬ ಚಿಂತನೆ ಮಾಡಿದ್ದೇನೆ ಎಂದು ಶಾಸಕ ಇಕ್ಬಾಲ್ ಹುಸೇನ್ ಹೇಳಿದರು.

ಅಯೋಧ್ಯೆ ರಾಮಮಂದಿರ ಕುರಿತು ಕಾಂಗ್ರೆಸ್ ಮತ್ತು ಬಿಜೆಪಿ ನಡುವಿನ ತಿಕ್ಕಾಟ ಕುರಿತು ಪ್ರತಿಕ್ರಿಯಿಸಿದ ಅವರು, ನಾನು ಚಿಕ್ಕ ವಯಸ್ಸಿನಿಂದ ಎಲ್ಲಾ ದೇವರುಗಳನ್ನು ಪೂಜೆ ಮಾಡಿದ್ದೇನೆ. ಹಾಗೆಯೇ ರಾಮನ ಪೂಜೆಯನ್ನೂ ಮಾಡುತ್ತೇನೆ ಎಂದರು.

ನಾವು ರಾಮನನ್ನು ಮನೆ ದೇವರು ಎಂದು ಪೂಜೆ ಮಾಡುತ್ತೇವೆ. ಅವ–ರಿಗೆ ರಾಮನ ಪೂಜೆ ಹೊಸದಿರಬಹುದು, ಆದರೆ ನಮಗೆ ಹೊಸದೇನಲ್ಲ. ಅದಕ್ಕಾಗಿಯೇ, ಅವರು ರಾಮನನ್ನು ರಾಜಕಾರಣಕ್ಕೆ ಬಳಸಿಕೊಳ್ಳುತ್ತಿದ್ದಾರೆ ಎಂದು ಬಿಜೆಪಿಯನ್ನು ಪರೋಕ್ಷವಾಗಿ ಟೀಕಿಸಿದರು.

ರಾಮಮಂದಿರ ವಿಚಾರವನ್ನು ಕೆಲವರು ರಾಜಕೀಯಕ್ಕಾಗಿ ಬಳಸಿಕೊಳ್ಳಬಹುದು. ಕೆಲವರು ಜನರಲ್ಲಿ ಗೊಂದಲ ಸೃಷ್ಟಿಸಿ ರಾಜಕೀಯ ಮಾಡುತ್ತಾರೆ. ಲೋಕಸಭಾ ಚುನಾವಣೆ ದೃಷ್ಟಿಯಿಂದ ಮಾಡುತ್ತಿರಬಹುದು. ನಾವು ಹಾಗೆ ಮಾಡುವುದಿಲ್ಲ. ಕಾಂಗ್ರೆಸ್‌ಗೆ ತನ್ನದೇ ಆದ ಬದ್ಧತೆ ಮತ್ತು ಸಿದ್ಧಾಂತವಿದೆ ಎಂದು ಹೇಳಿದರು.

## ಜಿಲ್ಲಾ ದೌರ್ಜ್ಯನ್ಯ ತಡೆ ಹಾಗೂ ಜಾಗೃತಿ ಸಮಿತಿ ಸಭೆ

# ಸ್ಮಶಾನ ಭೂಮಿ ಅಭಿವೃದ್ಧಿಗೆ ಅನುದಾನ ಕೋರಿ ಪ್ರಸ್ತಾವನೆ ಸಲ್ಲಿಸಲು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸೂಚನೆ

ಬೆಳಗಾವಿ: ಜಿಲ್ಲೆಯಲ್ಲಿರುವ ಸ್ಮಶಾನಗಳ ಅಭಿವೃದ್ಧಿ ಕಾಮಗಾರಿ ಕೈಗೆತ್ತಿಗೊಳ್ಳಲು ಅನುಕೂಲವಾಗುವಂತೆ ಪ್ರತಿ ಸ್ಮಶಾನಕ್ಕೆ ತಲಾ ಐದು ಲಕ್ಷ ರೂಪಾಯಿಗಳಂತೆ ಜಿಲ್ಲೆಗೆ 2 ಕೋಟಿ ರೂಪಾಯಿ ಅನುದಾನ ಒದಗಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಬೇಕು ಎಂದು ಸಮಾಜಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ನಿರ್ದೇಶನ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶುಕ್ರವಾರ (ಜ.05) ನಡೆದ ಜಿಲ್ಲಾ ದೌರ್ಜ್ಯನ್ಯ ತಡೆ ಹಾಗೂ ಜಾಗೃತಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರಕಾರದಿಂದ ಅನುದಾನ ಬಿಡುಗಡೆಗೊಂಡರೆ ಪರಿಶಿಷ್ಟ ಜಾತಿ ಮತ್ತು ವರ್ಗಗಳ ಜನರಿಗೆ ಸೇರಿದ ಜಿಲ್ಲೆಯ 40 ಸ್ಮಶಾನ ಭೂಮಿಗಳಲ್ಲಿ ಕುಡಿಯುವ ನೀರು, ತಂತಿ ಬೇಲಿ, ತಾತ್ಕಾಲಿಕ ಶೆಡ್ ನಿರ್ಮಾಣ ಮತ್ತಿತರ ಕಾಮಗಾರಿ ಕೈಗೊಳ್ಳಬಹುದು ಎಂದು ತಿಳಿಸಿದರು.

ಇದೇ ವೇಳೆ ಸಭೆಯಲ್ಲಿ ಮಾತನಾಡಿದ ದಲಿತ ಸಂಘಟನೆಗಳ ಮುಖಂಡರಾದ ಮಲ್ಲೇಶ್ ಚೌಗಲೆ ಸರಕಾರದ ವಿವಿಧ ಯೋಜನೆಗಳಡಿ ಆಯ್ಕೆಗೊಂಡಿರುವ ಫಲಾನುಭವಿಗಳಿಗೆ ಸುಗಮವಾಗಿ ಸಾಲ-ಸೌಲಭ್ಯಗಳನ್ನು ಒದಗಿಸಲು ಬ್ಯಾಂಕುಗಳಿಗೆ ನಿರ್ದೇಶನ ನೀಡಬೇಕು ಎಂದು ಒತ್ತಾಯಿಸಿದರು.

ಇದಕ್ಕೆ ಸಂಬಂಧಿಸಿದಂತೆ ಬ್ಯಾಂಕುಗಳ ಪ್ರತಿನಿಧಿಗಳ ಸಭೆಯನ್ನು ಕರೆದು ಸೂಕ್ತ ಪರಿಶೀಲನೆ ನಡೆಸಲಾಗುವುದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ತಿಳಿಸಿದರು.

ಕೆಲವು ಪೊಲೀಸ್ ಅಧಿಕಾರಿಗಳು ಅಟ್ರಾಸಿಟಿ ಪ್ರಕರಣಗಳನ್ನು ಕೂಲಂಕುಶವಾಗಿ ಪರಿಶೀಲಿಸದೇ ಬಿ ರಿಪೋರ್ಟ್ ಹಾಕುವುದರಿಂದ ನೊಂದವರಿಗೆ ಅನ್ಯಾಯವಾಗುತ್ತಿದೆ. ಆದ್ದರಿಂದ ಅಟ್ರಾಸಿಟಿ ಪ್ರಕರಣಗಳಲ್ಲಿ ಬಿ ರಿಪೋರ್ಟ್ ಸಲ್ಲಿಸುವಾಗ ಮಾಮವೀಯತೆಯಿಂದ ಹಾಗೂ ಸೂಕ್ಷ್ಮ ರೀತಿಯಲ್ಲಿ ಪರಿಶೀಲಿಸಬೇಕು ಎಂದು ಚೌಗುಲೆ ಒತ್ತಾಯಿಸಿದರು.

ಅದೇ ರೀತಿಯಲ್ಲಿ ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯದ ಸಹಯೋಗದೊಂದಿಗೆ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ಅವರು ಮಾಡಿಕೊಂಡರು.



**ತಕ್ಷಣ ಪರಿಹಾರ ಬಿಡುಗಡೆಗೆ ಸೂಚನೆ:**

ಪರಿಶಿಷ್ಟ ಜಾತಿ/ವರ್ಗದ ಜನರ ಮೇಲೆ ದೌರ್ಜನ್ಯ(ಅಟ್ರಾಸಿಟಿ) ಪ್ರಕರಣ ದಾಖಲಾದ 24 ಗಂಟೆಗಳಲ್ಲಿ ನೊಂದವರಿಗೆ ಪರಿಹಾರ ನೀಡಲು ಪ್ರಯತ್ನಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ತಾಂತ್ರಿಕ ಕಾರಣಗಳಿಂದ ಇದು ಸಾಧ್ಯವಾಗದಿದ್ದರೆ ಯಾವುದೇ ಕಾರಣ-ಕ್ಕೂ ಪ್ರಕರಣ ದಾಖಲಾದ 48 ಗಂಟೆ ಮೀರಬಾರದು. ಎರಡನೇ ಕಂತಿನ ಪರಿಹಾರ ದೋಷಾರೋಪ ಪಟ್ಟಿ ಸಲ್ಲಿಸಿದ ಬಳಿಕವೂ ತುರ್ತಾಗಿ ಪರಿಹಾರ ಬಿಡುಗಡೆಗೆ ಕ್ರಮ ಕೈಗೊಳ್ಳಬೇಕು ಎಂದರು.

ನಗರದ ಆರ್ಪಿ.ಡಿ. ವೃತ್ತಕ್ಕೆ ವೀರ ಮದಕರಿ ನಾಯಕರ ಹೆಸರು ನಾಮಕರಣ ಮಾಡುವ ಕುರಿತು ಪಾಲಿಕೆಯ ಚುನಾಯಿತ ಮಂಡಳಿ ಸೂಕ್ತ ನಿರ್ಧಾರ ಕೈಗೊಳ್ಳಲಿದೆ ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಹೇಳಿದರು. ಜಿಲ್ಲೆಯಲ್ಲಿ ಎಸ್.ಸಿ.ಪಿ- ಟಿ.ಎಸ್.ಪಿ ಬಹಳಷ್ಟು ಯೋಜನೆಗಳು ಸಮರ್ಪಕ ಅನುಷ್ಠಾನಗೊಳ್ಳುತ್ತಿಲ್ಲ ಈ ಕು-ರಿತು ಕ್ರಮ ವಹಿಸಬೇಕು; ಪ್ರತಿ ತಿಂಗಳು ಸ್ಥಳೀಯ ಪೊಲೀಸ್ ಠಾಣೆಗಳಲ್ಲಿ ಸಭೆಗಳನ್ನು ಆಯೋಜಿಸುವಂತೆ ಜಿಲ್ಲಾ ಪೊಲೀಸ್ ವ-ರಿಷ್ಠಾಧಿಕಾರಿಗಳು ಸೂಚಿಸಬೇಕು ಎಂದು ಜಿಲ್ಲಾ ಜಾಗೃತ ಸಮಿತಿಯ ಸದಸ್ಯ ಕರೆಪ್ಪ ಗುಡೆನ್ನವರ ಅವರು ವಿನಂತಿ ಮಾಡಿಕೊಂಡರು.

ಅಟ್ರಾಸಿಟಿ ಪ್ರಕರಣಗಳ ಸಮರ್ಪಕ ತನಿಖೆ; ಸಕಾಲದಲ್ಲಿ ಪರಿಹಾರ ಒದಗಿಸುವುದು; ಪರಿಶಿಷ್ಟ ಜಾತಿ-ಜನಾಂಗದ ಜನರಿಗೆ ಕಾನೂನು ಅರಿವು ಮೂಡಿಸುವುದು ಸೇರಿದಂತೆ ವಿವಿಧ ವಿಷಯಗಳನ್ನು ಸಭೆಯಲ್ಲಿ ಪ್ರಸ್ತಾಪಿಸಿದ ಕರೆಪ್ಪ ಗುಡೆನ್ನವರ ಅವರು, ಸಂಕಷ್ಟಕ್ಕೆ ಸಿಲುಕುವ ಸಮಾಜದ ಮುಗ್ಧ ಜನರಿಗೆ ಅಗತ್ಯ ನೆರವು ಒದಗಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಇನ್ನಷ್ಟು ಮುತುವರ್ಜಿ ವಹಿಸಬೇಕು ಎಂದು ಮನವಿ ಮಾಡಿಕೊಂಡರು.

ಜಿಲ್ಲೆಯಲ್ಲಿನ ಸ್ಮಶಾನ ಭೂಮಿ ಅಭಿವೃದ್ಧಿಗೆ ಅನುದಾನ ಕೊರತೆಯಿದ್ದಲ್ಲಿ, ಅನುದಾನ ಒದಗಿಸುವುದಾಗಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಅವರು ಭರವಸೆ ನೀಡಿದ್ದಾರೆ ಎಂದು ಬೆಳಗಾವಿ ಉತ್ತರ ವಿಧಾನ ಸಭಾ ಮತ ಕ್ಷೇತ್ರದ ಶಾಸಕ ಆಸೀಫ್ (ರಾಜು) ಸೇಠ್ ಅವರು ತಿಳಿಸಿದರು.

ಅಥಣಿ ತಾಲೂಕಿನ ಸಪ್ತಸಾಗರ ಗ್ರಾಮದಲ್ಲಿ ಪರಿಶಿಷ್ಟ ಜಾತಿ ಜನರು ಹೆಚ್ಚಾಗಿ ವಾಸವಿದ್ದು, ಪಂಚಾಯತ್ ರಾಜ್ ಇಂಜನಿಯರಿಂಗ್ ಇಲಾಖೆಯಿಂದ ಎಸ್.ಸಿ.ಪಿ-ಟಿ.ಎಸ್.ಪಿ ಅನುದಾನದಡಿ ತುರ್ತಾಗಿ ರಸ್ತೆ ನಿರ್ಮಾಣ ಕಾಮಗಾರಿ ಕೈಗೆತ್ತಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ಹರ್ಷಲ್ ಭೋಯರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಭೀಮಾಶಂಕರ ಗುಳೇದ, ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯದ ಪೊಲೀಸ್ ಅಧೀಕ್ಷಕರು ರವೀಂದ್ರ ಗಡಾದಿ, ಡಿಸಿಪಿ ರೇವಣ್ಣ ಜಗದೀಶ್, ಮಹಾನಗರ ಪಾಲಿಕೆ ಆಯುಕ್ತ ಅಶೋಕ ದುಡಗುಂಟಿ, ಜಿಲ್ಲಾ ಯೋಜನಾ ಕೋಶದ ಯೋಜನಾ ನಿರ್ದೇಶಕ ಮಲ್ಲಿಕಾರ್ಜುನ್ ಕಲಾದಗಿ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಲಕ್ಷ್ಮಣ ಬಬಲಿ, ಆಹಾರ ಇಲಾಖೆ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಜಿಲ್ಲಾ ಜಾಗೃತ ಸಮಿತಿಯ ಸದಸ್ಯರಾದ ಕರೆಪ್ಪ ಗುಡೆನ್ನವರ, ವಿಜಯ ಬಸಪ್ಪ ತಳವಾರ, ಜೀವನ ಮಾಂಜ್ರೇಕರ ಮತ್ತಿತರರು ಸಭೆಯಲ್ಲಿ ಉಪಸ್ಥಿತರಿದ್ದರು.

## ನೀರಿನ ಕಂದಾಯ ವಸೂಲಾತಿಗೆ ವಿಶೇಷ ಕೌಂಟರ್ ಆರಂಭ

ಶಿವಮೊಗ್ಗ: ಶಿವಮೊಗ್ಗ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ನಿರ್ವಹಣಾ ವಿಭಾಗ ಮತ್ತು ಉಪವಿಭಾಗವು ದಿ: 07/01/2024 ರ ಭಾನುವಾರದಂದು 2023-24 ನೇ ಸಾಲಿನ ನೀರಿನ ಕಂದಾಯ ಮತ್ತು ಬಾಕಿ ಕಂದಾಯ ವಸೂಲಾತಿಗಾಗಿ ನಗರದ "ಭಾರತೀಯ ಸಭಾಭವನ ಎದುರು, ಆರ್.ಎಂ.ಎಲ್.ನಗರ, ಬಸವೇಶ್ವರ ದೇವಸ್ಥಾನದ ಹತ್ತಿರ, ಗಾಂಧಿ ಬಜಾರ್, ದೇವರಾಜ್ ಅರಸ್ ಬಡಾವಣೆ ಪೆಟ್ರೋಲ್ ಬಂಕ್ ಹತ್ತಿರ, ಸೋಮಿನಕೊಪ್ಪ ರಸ್ತೆ, ಬಾಪೂಜಿನಗರ ಮುಖ್ಯರಸ್ತೆ ರಾಮಮಂದಿರ ಹತ್ತಿರದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಪಾರ್ಕ, ದ್ರೌಪದಮ್ಮ ಸರ್ಕಲ್ ಆಟೋ ಸ್ಟ್ಯಾಂಡ್ ಹತ್ತಿರ" ಈ ಎಲ್ಲಾ ಕಡೆಗಳಲ್ಲಿ ವಿಶೇಷ ನೀರಿನ ಕಂದಾಯ ವಸೂಲಾತಿ ಕೌಂಟರ್ಗಳನ್ನು ತೆರೆಯಲಾಗಿದೆ.

ನೀರಿನ ಖಾತೆದಾರರು ಬಾಕಿ ಉಳಿಸಿಕೊಂಡಿರುವ ನೀರಿನ ಕಂದಾಯವನ್ನು ಪಾವತಿಸದಿದ್ದಲ್ಲಿ ನೀರಿನ ಸಂಪರ್ಕವನ್ನು ಕಡಿತಗೊಳಿಸುವುದು ಅನಿವಾರ್ಯವಾಗಲಿದೆ. ಸಾರ್ವಜನಿಕರು ಸಹಕರಿಸುವಂತೆ ಕರ್ನಾಟಕ ನಗರ ನೀರುಸರಬರಾಜು ಮತ್ತು ಒಳಚರಂಡಿ ಮಂಡಳಿಯ ಸಹಾಯಕ ಕಾರ್ಯಪಾಲಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜ.06 ; ವಿದ್ಯುತ್ ವ್ಯತ್ಯಯ

ಶಿವಮೊಗ್ಗ: ಆಲ್ಕೊಳ ವಿ.ವಿ. ಕೇಂದ್ರದಲ್ಲಿ ಮೂರನೇ ತ್ರೈಮಾಸಿಕ ನಿರ್ವಹಣಾ ಕೆಲಸ ಹಮ್ಮಿಕೊಂಡಿರುವುದ-ರಿಂದ, ಈ ವಿತರಣಾ ಕೇಂದ್ರದಿಂದ ಸರಬರಾಜಾಗುವ ಕೆಳಕಂಡ ಪ್ರದೇಶಗಳಲ್ಲಿ ಜ. 06 ರಂದು ಬೆಳ್ಳಗ್ಗೆ 09-30 ರಿಂದ ಸಂಜೆ 06-00 ರವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ.

ಆಲ್ಕೊಳ, ಸಾಗರ ರಸ್ತೆ, ಗುತ್ಯಪ್ಪ ಕಾಲೋನಿ, ನೇತಾಜಿ ವೃತ್ತ, ಸಕ್ರ್ಯೂಟ್ ಹೌಸ್, ನೀಲಮೇಘಮ್ ಲೇಔಟ್, ರಾಜಮಹಲ್ ಬಡಾವಣೆ, ಪೊಲೀಸ್ ಲೇಔಟ್, ಅಲ್ ಹರೀಮ್ ಲೇಔಟ್, ವಿಜಯನಗರ, ಪಂಪ ನಗರ, ಗುತ್ಯಪ್ಪ ಕಾಲೋನಿ, ನೇತಾಜಿ ವೃತ್ತ, ಶ್ರೀರಾಮನಗರ, ಟಿಪ್ಪುನಗರ, ಪದ್ಮಾ ಟಾಕೀಸ್ ರಸ್ತೆ, ಸಿದ್ದೇಶ್ವರ ವೃತ್ತ, ಗೋಪಾಳಗೌಡ ಬಡಾವಣೆ ಎ ಯಿಂದ ಎಫ್ ಬ್ಲಾಕ್, ಅಣ್ಣಾನಗರ, ರಂಗನಾಥ ಬಡಾವಣೆ, ಕೆ.ಹೆಚ್.ಬಿ ಗೋಪಾಳ, ಜೆ.ಪಿ.ನಗರ, ಎಸ್.ವಿ.ಬಡಾವಣೆ, ಗಾಡಿಕೊಪ್ಪ, ನಂಜಪ್ಪ ಹೆಲ್ತ್ ಕೇರ್, ಶರಾವತಿ ದಂತ ವೈದ್ಯಾಕೀಯ ಕಾಲೇಜು, ಮಲ್ಲಿಗೇನಹಳ್ಳಿ, ಸೋಮಿನಕೊಪ್ಪ ಪ್ರೆಸ್ ಕಾಲೋನಿ, ಭೈರನಕೊಪ್ಪ, ಎ.ಪಿ.ಎಂ.ಸಿ ಲೇಔಟ್(ಆಶ್ರಯ ಬಡಾವಣೆ), ಭೋವಿ ಕಾಲೋನಿ, ಆಲದೇವರಹೊಸೂರು, ಶಕ್ತಿಧಾಮ, ಶಿವಸಾಯಿ ಕಾಸ್ಟಿಂಗ್ ಗೆಜ್ಜೆನಹಳ್ಳಿ, ದೇವಕಾತಿಕೊಪ್ಪ, ಶ್ರೀರಾಮ್ಪುರ, ವಿರುಪಿನಕೊಪ್ಪ, ಸಿದ್ಲಿಪುರ, ಮುದ್ದಿನಕೊಪ್ಪ, ತ್ಯಾವರೆಕೊಪ್ಪ, ಸಿಂಹಧಾಮ, ಗುಡ್ಡದಾರಿ ಕೊಪ್ಪ, ಗಾಲ್ಫ್ ಸ್ಟೇಡಿಯಂ, ಭೂಮಿಕಾ ಇಂಡಸ್ಟ್ರಿ, ಪೆಸೆಟ್ ಕಾಲೇಜ್, ಕೋಟೆ ಗಂಗೂರು, ಗೆಜ್ಜೇನಹಳ್ಳಿ, ಬಸವಗಂಗೂರು, ಸೋಮಿನಕೊಪ್ಪ, ಆದರ್ಶನಗರ, ಸಹ್ಯಾದ್ರಿ ನಗರ, ಜೆ.ಹೆಚ್. ಪಟೇಲ್ ಬಡಾವಣೆ, ಕಾಶೀಪುರ, ಕಲ್ಲಹಳ್ಳಿ, ಶಿವಪ್ಪನಾಯಕ ಬಡಾವಣೆ, ಪ್ರಿಯದರ್ಶಿನಿ ಲೇಔಟ್, ಇಂದಿರಾಗಾಂಧಿ ಲೇಔಟ್, ವಿನೋಬನಗರ, ದಾಮೋದರ್ ಕಾಲೋನಿ, ಚೇತನಾ ಸ್ಕೂಲ್, ಕಲ್ಲಹಳ್ಳಿ, ವಿನೋಬನಗರ 60ಅಡಿ ರಸ್ತೆ, ಜೈಲ್ ಸರ್ಕಲ್, ಆಟೋಕಾಂಪ್ಲೆಕ್ಸ್, ಪೊಲೀಸ್ ಚೌಕಿ, ಮೇಧಾರ ಕೇರಿ, ನರಸಿಂಹ ಬಡಾವಣೆ, ಶಾರದಮ್ಮ ಲೇಔಟ್, ಮೈತ್ರಿ ಅಪಾರ್ಟ್ಮೆಂಟ್, ಕನಕ ನಗರ, ದೇವರಾಜ್ ಅರಸ್ ಬಡಾವಣೆ, ಪಿ ಅಂಡ್ ಟಿ ಕಾಲೋನಿ, ಸೂರ್ಯ ಲೇಔಟ್, ಅರವಿಂದ ನಗರ, ಇಂಡಸ್ಟ್ರಿಯಲ್ ಏರಿಯಾ, ಎ.ಪಿ.ಎಂ.ಸಿ., ವೀರಣ್ಣ ಲೇಔಟ್, ಕಾಶೀಪುರ, ಜಯದೇವ ಬಡಾವಣೆ, ಆಲ್ಕೊಳ ವೃತ್ತ, ಸಹ್ಯಾದ್ರಿನಗರ, ಸಹಕಾರಿ ನಗರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು ಸಾರ್ವಜನಿಕರು ಸಹಕರಿಸುವಂತೆ ಮೆಸಾಂ ಪ್ರಕಟಣೆ ತಿಳಿಸಿದೆ.

## ವ್ಯಕ್ತಿ ನಾಪತ್ತೆ



ಬೆಳಗಾವಿ: ಬೆಳಗಾವಿ ತಾಲೂಕಿನ ಶ್ರೀ ರಾಮ ಕಾಲೋನಿಯ ಹನುಮಾನ ನಗರ ನಿವಾಸಿಯಾದ ಪ್ರವೀಣ ಬಾಳಪ್ಪಾ ಕೋಚರಿ (48 ವರ್ಷ) ಇವರು ಡಿ.20 2023 ರಂದು ಮದ್ಯಾಹ್ನ 2 ಗಂಟೆಗೆ ಮನೆಯಲ್ಲಿ ಯಾರಿಗೂ ಹೇಳದೆ ಹೋಗಿ ಕಾಣಿಯಾಗಿದ್ದಾರೆ ಎಂದು ಅವರ ಪತ್ನಿ ಪದ್ಮಾ ಪ್ರವೀಣ ಕೋಚರಿ ಅವರು ಬೆಳಗಾವಿಯ ಎ. ಪಿ. ಎಂ.ಸಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

ಕಾಣೆಯಾದ ವ್ಯಕ್ತಿ ಚಹರೆ ಪಟ್ಟಿ: ಎತ್ತರ 5 ಪುಟ್ 5 ಇಂಚ ಸದೃಢ ಮೈ ಕಟ್ಟು, ಗೋದಿ ಗೆಂಪು ಮೈ ಬಣ್ಣ , ಹೊಂದಿದ್ದು, ಕಪ್ಪು ಬಣ್ಣದ ಅಂಗಿ, ಕಂದು ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ ಹಾಗೂ ಕನ್ನಡ ಹಿಂದಿ ಮರಾಠಿ ಭಾಷೆ ಬಲ್ಲವರಾಗಿರುತ್ತಾರೆ.

ಸದರಿ ಕಾಣೆಯಾದ ವ್ಯಕ್ತಿ ಬಗ್ಗೆ ಮಾಹಿತಿ ದೊರೆತಲ್ಲಿ ಬೆಳಗಾವಿಯ ಎ. ಪಿ. ಎಂ.ಸಿ ಪೊಲೀಸ್ ಠಾಣೆಗೆ ಅಥವಾ ಪೊಲೀಸ್ ಠಾಣೆಯ ದೂರವಾಣಿ ಸಂಖ್ಯೆ (0831) 2405250, ಮೊ. ಸಂಖ್ಯೆ 9480804106, 9480804047 ಗೆ ಸಂಪರ್ಕಿಸಬೇಕೆಂದು ಎ. ಪಿ. ಎಂ.ಸಿ ಪೊಲೀಸ್ ಠಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಕ್ರಮ ಸಂಬಂಧ: ಬಯಲಿನಲ್ಲಿ ಸ್ವಯಂ ಹೆರಿಗೆ ಮಾಡಿಕೊಂಡ ಯುವತಿ

ತುಮಕೂರು: ಅಕ್ರಮ ಸಂಬಂಧದಿಂದ ಗರ್ಭಿಣಿಯಾಗಿದ್ದ ಯುವತಿಯೊಬ್ಬಳು ತಾನೇ ಸ್ವಯಂ ಹೆರಿಗೆ ಮಾಡಿಕೊಂಡು ಕೊನೆಗೆ ಹಸುಗೂಸಿನ ಸಾವಿಗೆ ಕಾರಣವಾದ ಘಟನೆ ಅರೇಗುಜ್ಜನಹಳ್ಳಿ ಗ್ರಾಮದಲ್ಲಿ ಬೆಳಕಿಗೆ ಬಂದಿದೆ. ಗೌರೀಪುರ ಗ್ರಾಮದ 25 ವರ್ಷದ ಯುವತಿ ಅಕ್ರಮ ಸಂಬಂಧದಿಂದ ಗರ್ಭಿಣಿಯಾಗಿದ್ದಳು. ಮನೆಯಲ್ಲಿ ಲೂಸ್ ಲೂಸ್ ಬಟ್ಟೆ ಹಾಕಿಕೊಂಡು ಗರ್ಭ ಧರಿಸಿರೋದನ್ನೇ ಮುಚ್ಚಿಟ್ಟಿದ್ದಳು. ಕೊನೆಗೆ ಯಾರಿಗೂ ಗೊತ್ತಾಗದಂತೆ ತಾನೇ ಸ್ವಯಂ ಹೆರಿಗೆ ಮಾಡಿಕೊಂಡಿದ್ದಳು. ಬಳಿಕ ಸಮಾಜಕ್ಕೆ ಹೆದರಿ ಹೆತ್ತ ಮಗುವನ್ನೇ ಬಯಲಿಗೆಸೆಯುವ ಮೂಲಕ ಕಂದನ ಸಾವಿಗೆ ಕಾರಣಳಾಗಿದ್ದಾಳೆ.

ಅವಿವಾಹಿತ ಯುವತಿಗೆ ಪೋಷಕರು ಇಲ್ಲದ ಹಿನ್ನೆಲೆ ಸ್ವಂತ ಅಕ್ಕನ ಮನೆಯಲ್ಲಿ ಆಶ್ರಯ ಪಡೆದಿದ್ದಳು. ಮೊನ್ನೆ ರಾತ್ರಿ 10 ಗಂಟೆಯ ಸುಮಾರಿಗೆ ಮನೆಯಿಂದ ಹೊರಗೆ ಹೋಗಿ, ತಾನೇ ಸ್ವಯಂ ಹೆರಿಗೆ ಮಾಡಿಕೊಂಡಿದ್ದಳು. ನಂತರ ಮಗುವನ್ನ ಅಲ್ಲಿಯೇ ಪಕ್ಕದಲ್ಲಿ ಎಸೆದು ಮನೆಗೆ ತೆರಳಿದ್ದಳು.



ಯುವತಿ ಮನೆಗೆ ಹೋಗಿ ಋತುಚಕ್ರದ ಕಾರಣ ಹೇಳಿ ಸ್ನಾನ ಮಾಡಿದ್ದಾಳೆ. ಆದರೆ ಬೆಳಿಗ್ಗೆ ಗ್ರಾಮಸ್ಥರ ಕಣ್ಣಿಗೆ ನವಜಾತ ಹೆಣ್ಣುಮಗುವಿನ ಶವ ಸಿಕ್ಕಿದೆ. ಕೂಡಲೇ ಗ್ರಾಮಸ್ಥರು ಪೊಲೀಸ-ರಿಗೆ ಮಾಹಿತಿ ನೀಡಿದ್ದಾರೆ. ಜೊತೆಗೆ ಮಕ್ಕಳ ರಕ್ಷಣಾ ಘಟಕ, ಆರೋಗ್ಯ ಇಲಾಖೆ ಸಿಬ್ಬಂದಿಗೆ ಮಾಹಿತಿ ನೀಡಿದ್ದಾರೆ. ಕೂಡಲೇ ಸ್ಥಳಕ್ಕೆ ಭೇಟಿ ಕೊಟ್ಟ ಆರೋಗ್ಯ ಇಲಾಖೆ ಸಿಬ್ಬಂದಿ ರಕ್ತಸ್ರಾವದಿಂದ ಬಳಲಿದ್ದ ಯುವತಿಯನ್ನ ಜಿಲ್ಲಾಸ್ಪತ್ರೆಗೆ ದಾಖಲಿಸಿದ್ದಾರೆ.

ಅತ್ತ ನವಜಾತ ಶಿಶುವಿನ ಶವ ಕೂಡ ಶವಾಗಾರಕ್ಕೆ ರವಾನಿಸಲಾಗಿದೆ. ಘಟನೆಯ ಸಂಬಂಧ ಮಹಿಳಾ ಪೊಲೀಸ್ ಠಾಣೆಯಲ್ಲಿ ಎಫ್ಐಆರ್ ದಾಖಲಾಗಿದ್ದು, ತನಿಖೆ ಮುಂದುವರೆದಿದೆ.

## ಬೆನಕನಹಳ್ಳಿ ಸರ್ಕಾರಿ ಶಾಲೆಯ ನೂತನ ಕೊಠಡಿ ಉದ್ಘಾಟಿಸಿದ ಎಂಎಲ್ ಸಿ ಚನ್ನರಾಜ ಹಟ್ಟಿಹೊಳಿ

ಬೆಳಗಾವಿ: ಬೆಳಗಾವಿ ಗ್ರಾಮೀಣ ಕ್ಷೇತ್ರದ ಬೆನಕನಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಮತ್ತು ಮರಾಠಿ ಶಾಲೆಗಳಲ್ಲಿ ನೂತನವಾಗಿ ನಿರ್ಮಾಣಗೊಂಡ ಹೆಚ್ಚುವರಿ ಕೊಠಡಿಗಳನ್ನು ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಉದ್ಘಾಟಿಸಿದರು.

ಈ ಸಮಯದಲ್ಲಿ ಗ್ರಾಮದ ಹಿರಿಯರು, ಕ್ಷೇತ್ರ ಶಿಕ್ಷಣಾಧಿಕಾರಿ ದಾಸಪ್ಪನವರ, ಮಹೇಶ ಕೋಲಕಾರ, ಬಾಳು ದೇಸೂರಕರ್, ಕಲ್ಲಪ್ಪ ಪಾಟೀಲ, ಕಲ್ಲಪ್ಪ ದೇಸೂರಕರ್, ಮೊನಪ್ಪ ಪಾಟೀಲ, ಪಿಡಿಓ ಸುಜಾತಾ, ಜ್ಯೋತಿಬಾ ದೇಸೂರಕರ್, ಆನಂದ ಪಾಟೀಲ, ಮೀನಾಕ್ಷಿ ಪಾಟೀಲ, ಎ.ಡಿ.ಕಾಂಬಳೆ ಉಪಸ್ಥಿತರಿದ್ದರು.



## ಗಸ್ತು ತಿರುಗುತ್ತಿದ್ದ ವಾಹನಕ್ಕೆ ಕಾರ್ ಡಿಕ್ಕಿ ಇಬ್ಬರು ಪೊಲೀಸರು ಸಾವು

ಬೆಂಗಳೂರು: ಪಶ್ಚಿಮ ಬಂಗಾಳದಲ್ಲಿ ಗಸ್ತು ತಿರುಗುತ್ತಿದ್ದ ವಾಹನಕ್ಕೆ ಕಾರ್ ಡಿಕ್ಕಿಯಾಗಿದ್ದು, ಇಬ್ಬರು ಪೊಲೀಸರು ಮೃತಪಟ್ಟಿದ್ದಾರೆ.

ಹೌರಾ ಜಿಲ್ಲೆಯಲ್ಲಿ ಗಸ್ತು ತಿರುಗುತ್ತಿದ್ದ ಪೊಲೀಸ್ ವ್ಯಾನ್ಗೆ ವೇಗವಾಗಿ ಬಂದ ಕಾರ್ ಡಿಕ್ಕಿ ಹೊಡೆದಿದೆ. ಸಬ್ಇನ್ಸ್ಪೆಕ್ಟರ್ ಸುಜೋಯ್ ದಾಸ್ ಹಾಗೂ ಹೋಮ್ ಗಾರ್ಡ್ ಪಲಾಶ್ ಸಮಂತ್ ಮೃತಪಟ್ಟಿದ್ದಾರೆ. ಚಾಲಕ ಅಬುಬಕರ್, ಗೃಹರಕ್ಷಕದಳದ ಸುಖದೇಬ್ ಬಿಸ್ವಾಸ್ ಹಾಗೂ ಅಲೋಕ್ ಬಾರ್ ಗಂಭೀರವಾಗಿ ಗಾಯಗೊಂಡಿದ್ದು ಆಸ್ಪತ್ರೆಗೆ ದಾಖಲಿಸಲಾಗಿದೆ.




ಪೊಲೀಸ್ ವಾಹನಕ್ಕೆ ಡಿಕ್ಕಿ ಹೊಡೆದ ಕಾರು ಚಾಲಕ ಸ್ಥಳದಿಂದ ಪರಾರಿಯಾಗಿದ್ದಾರೆಂದು ಪೊಲೀಸ್ ಅಧಿಕಾ-ರಿಗಳು ಮಾಹಿತಿ ನೀಡಿದ್ದಾರೆ. ಡಿಕ್ಕಿ ಹೊಡೆದ ಕಾರ್ಗಾಗಿ ಹುಡುಕಾಟ ಆರಂಭವಾಗಿದೆ.

## ವಿದ್ಯಾರ್ಥಿನಿಯರಿಗೆ ಕಿರುಕುಳ

### ಸರ್ಕಾರಿ ಶಾಲೆ ಮುಖ್ಯ ಶಿಕ್ಷಕ ಸಸ್ಪೆಂಡ್




ಮೈಸೂರು: ವಿದ್ಯಾರ್ಥಿನಿಯರೊಂದಿಗೆ ಅಸಭ್ಯವಾಗಿ ವರ್ತಿಸಿ, ಲೈಂಗಿಕ ಕಿರುಕುಳ ನೀಡುತ್ತಿದ್ದ ಆರೋಪದಲ್ಲಿ ಶಾಲೆಯ ಮುಖ್ಯ ಶಿಕ್ಷಕನನ್ನು ಅಮಾನತು ಮಾಡಿರುವ ಘಟನೆ ಮೈಸೂರು ಜಿಲ್ಲೆಯಲ್ಲಿ ನಡೆದಿದೆ.

ಪ್ರಕಾಶ್ ಅಮಾನತುಗೊಂಡಿರುವ ಮುಖ್ಯ ಶಿಕ್ಷಕ. ಮೈಸೂರು ಜಿಲ್ಲೆಯ ನಂಜನಗೂಡು ತಾಲೂಕಿನ ದಾಸನೂರು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ. ವಿದ್ಯಾರ್ಥಿನಿಯರನ್ನು ಮೈ ಕೈ ಮುಟ್ಟಿ ಮಾತನಾಡಿಸುವುದು, ಅಸಭ್ಯವಾಗಿ ವರ್ತಿಸುವುದು ಮಾಡುತ್ತಿದ್ದ ಎಂದು ಪೋಷಕರು ಶಿಕ್ಷಕನ ವಿರುದ್ಧ ದೂರು ನೀಡಿದ್ದರು. ಈ ಹಿನ್ನೆಲೆಯಲ್ಲಿ ಆರೋಪಿ ಶಿಕ್ಷಕನ ವಿರುದ್ಧ ತನಿಖೆ ನಡೆಸಲಾಗಿತ್ತು. ಪೋಕ್ಸೋ ಕೇಸ್ ದಾಖಲಿಸಿ, ಸಸ್ಪೆಂಡ್ ಮಾಡುವಂತೆ ಡಿಡಿಪಿ ಸೂಚಿಸಿದ್ದರು. ಈ ಹಿನ್ನೆಲೆಯಲ್ಲಿ ಮುಖ್ಯ ಶಿಕ್ಷಕ ಪ್ರಕಾಶ್ ನನ್ನು ಅಮಾನತು ಮಾಡಲಾಗಿದೆ.

## ಹೋಟೆಲ್ ಊಟದಲ್ಲಿ ಜಿರಳೆ ಪತ್ತೆ; ಎಫ್ಐಆರ್ ದಾಖಲು

ಬೆಂಗಳೂರು: ರಾಜಧಾನಿ ಬೆಂಗಳೂರಿನ ಪ್ರತಿಷ್ಠಿತ ಹೋಟೆಲ್ ನಲ್ಲಿ ಹೈಕೋರ್ಟ್ ವಕೀಲೆಯೊಬ್ಬ-ರಿಗೆ ಜಿರಳೆ ಪತ್ತೆಯಾಗಿದ್ದು, ಪ್ರಕರಣ ಸಂಬಂಧ ವಿಧನಸೌಧ ಠಣೆಯಲ್ಲಿ ಎಫ್ ಐ ಆರ್ ದಾಖಲಾಗಿದೆ. ಹೈಕೋರ್ಟ್ ವಕೀಲೆ ಶೀಲಾ ದೀಪಕ್ ಎಂಬುವವರು ರಾಜಭವನ ರಸ್ತೆಯಲ್ಲಿರುವ ಪ್ರತಿಷ್ಠಿತ ಹೋಟೆಲ್ ಗೆ ಊಟಕ್ಕೆ ತೆರಳಿದ್ದರು. ಭರ್ಜರಿ ಊಟವನ್ನು ಆರ್ಡರ್ ಮಾಡಿದ್ದರು.

ಅರ್ಧ ಊಟ ಸೇವಿಸಿದ್ದ ಅವರಿಗೆ ಅವರು ತಿನ್ನುತ್ತಿದ್ದ ಪನ್ನೀರ್ ಗ್ರೇವಿಯಲ್ಲಿ ಜಿರಳೆ ಪತ್ತೆಯಾಗಿದೆ. ಶಾಕ್ ಆದ ವಕೀಲೆ ಹೋಟೆಲ್ ಸಿಬ್ಬಂದಿಯನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

ಬೇರೆ ಊಟ ಕೊಡುವುದಾಗಿ ಸಿಬ್ಬಂದಿಗಳು ಸಮಜಾಯಿಷಿ ನೀಡಿದ್ದಾರೆ. ಬೇರಾವ ಊಟವೂ ಬೇಡ ಈಗಾಗಲೇ ಸೇವಿಸಿರುವ ಊಟದಲ್ಲಿ ಜಿರಳೆ ಸಿಕ್ಕಿದೆ ಊಟದ ಗುಣಮಟ್ಟ, ಹೋಟೆಲ್ ಅಡುಗೆ ಮನೆ ಶುಚಿತ್ವವನ್ನು ಪ್ರಶ್ನಿಸಿದ್ದಾರೆ. ಅಲ್ಲದೇ ಗ್ರೇವಿಯಲ್ಲಿ ಪತ್ತೆಯಾದ ಜಿರಳೆ ಹಾಗೂ ಹೋಟೆಲ್ ಅಡುಗೆ ಮನೆಗೆ ತೆರಳಿ ಅಲ್ಲಿನ ಶುಚಿತ್ವವಿಲ್ಲದ ಸ್ಥಿತಿ, ಹಾಗೇಯೇ ಬಿದ್ದಿರುವ ರಾಶಿ ರಾಶಿ ಪಾತ್ರೆಗಳನ್ನು ವಿಡಿಯೋ ಮಾಡಿದ್ದಾರೆ.

ಹೋಟೆಲ್ ಮುಖ್ಯಸ್ಥರಿಗೂ ಈ ಬಗ್ಗೆ ತರಾಟೆಗೆ ತೆಗೆದುಕೊಂಡಿದ್ದು, ಸಿಬ್ಬಂದಿಗಳು ಸೂಕ್ತವಾಗಿ ಸ್ಪಂದಿಸುತ್ತಿಲ್ಲ. ಪ್ರತಿಷ್ಠಿತ ಸ್ಟಾರ್ ಹೋಟೆಲ್ ಊಟದಲ್ಲೇ ಜಿರಳೆ ಪತ್ತೆಯಾಗಿದೆ ಎಂದರೆ ಇಲ್ಲಿನ ಶುಚಿತ್ವದ ಬಗ್ಗೆ ಪ್ರಶ್ನಿಸಬೇಕು ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಇದೀಗ ವಿಧಾನಸೌಧ ಠಾಣೆಯಲ್ಲಿ ಹೋಟೆಲ್ ಸಿಬ್ಬಂದಿಗಳ ವಿರುದ್ಧ ಐಪಿಸಿ ಸೆಕ್ಷನ್ 352, 341, 504,506 ಅಡಿ ಎಫ್ ಐ ಆರ್ ದಾಖಲಾಗಿದೆ. ಹೋಟೆಲ್ ಸಿಬ್ಬಂದಿಗಳು ಎಳೆದಾಟ, ನೂಕಾಟ ಮಾಡಿ ಬೆದರಿಕೆ ಹಾಕಿದ್ದಾರೆ ಎಂದು ದೂರಲಾಗಿದೆ.

## 'ತಹಶೀಲ್ದಾರ್' ಲೋಕಾಯುಕ್ತ ಬಲೆಗೆ

ಹಾವೇರಿ: ಲಾರಿ ಚಾಲಕನಿಂದ ಲಂಚ ಪಡೆಯುತ್ತಿದ್ದ ತಹಶೀಲ್ದಾರ್ ಲೋಕಾಯುಕ್ತ ಬಲೆಗೆ ಬಿದ್ದ ಘಟನೆ ಹಾವೇರಿ ಜಿಲ್ಲೆಯ ರಾಣೆಬೆನ್ನೂರಿನಲ್ಲಿ ನಡೆದಿದೆ.

ಲಾರಿಗೆ ಗ್ರಾವೇಲ್ ತುಂಬಲು ತಹಶೀಲ್ದಾರ್ ಹನುಮಂತಪ್ಪ12 ಸಾವಿರಕ್ಕೆ ಲಂಚಕ್ಕೆ ಬೇಡಿಕೆ ಇಟ್ಟಿದ್ದರು. ಅಂತೆಯೇ ಲಂಚ ಪಡೆಯುವಾಗ ರೆಡ್ ಹ್ಯಾಂಡ್ ಆಗಿ ಹನುಮಂತಪ್ಪ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ. ಲಾರಿ ಚಾಲಕ ಮಂಜು ವಾಲೀಕಾರ್ ಎಂಬುವವರಿಂದ ಲಂಚ ಪಡೆಯುತ್ತಿದ್ದರು. ಸದ್ಯ ಲೋಕಾಯುಕ್ತ ಅಧಿಕಾರಿಗಳು ಹನುಮಂತಪ್ಪನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

## ಸ್ನಾತಕೋತ್ತರ ವಿದಾರ್ಥಿಗಳ ದೀಕ್ಷಾರಂಭ ಕಾರ್ಯಕ್ರಮದ ಸಮಾರೋಪ

ಬೆಳಗಾವಿ: ರಾಣಿಚನ್ನಮ್ಮ ವಿಶ್ವವಿದ್ಯಾಲಯದ ಶಾಸ್ತ್ರೀಯ ಕನ್ನಡ ಭಾಷಾಅಧ್ಯಯನ ಸಂಸ್ಥೆಯಲ್ಲಿ ದಿನಾಂಕ 01-01-2024 ರಿಂದ ಸ್ನಾತಕೋತ್ತರ ವಿದಾರ್ಥಿಗಳ ದೀಕ್ಷಾರಂಭ ಕಾರ್ಯಕ್ರಮ ಪ್ರಾರಂಭವಾಗಿ 05-01-2024 ರಂದು ಸಮಾರೋಪ ನೆರವೇರಿತು.

ಮೊದಲ ಹಂತದಲ್ಲಿ ಸೋಮವಾರದಿಂದ ಗುರುವಾರದವರೆಗೆ ವಿಭಾಗದ ಪ್ರಾಧ್ಯಾಪಕರುಗಳು ಅಧ್ಯಯನ ಸಂಸ್ಥೆ ಮತ್ತು ವಿಶ್ವವಿದ್ಯಾಲಯದ ಕು-ರಿತು ವಿದ್ಯಾರ್ಥಿಗಳಿಗೆ ತರಗತಿಗಳಲ್ಲಿ ಮಾಹಿತಿಯನ್ನು ಒದಗಿಸುವುದರ ಜೊತೆಗೆ ಈ ವರ್ಷದ ಪಠ್ಯಕ್ರಮದ ಸ್ವರೂಪ ಮತ್ತುಕನ್ನಡ ಸ್ನಾತಕೋತ್ತರ ಪದವಿಯ ಪ್ರಯೋಜನಗಳ ಕುರಿತು ತಿಳಿಸಿಕೊಟ್ಟರು. ಇದರ ಸಮಾರೋಪ ಸಮಾರಂಭವು ಶುಕ್ರವಾರ ವಿಭಾಗದ ನಿರ್ದೇಶಕರಾದ ಪ್ರೊ.ಗುಂಡಣ್ಣ ಕಲಬುರ್ಗಿ ಅವರ ಅಧ್ಯಕ್ಷತೆಯಲ್ಲಿ ನಡೆಯಿತು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಂಯೋಜಕರಾದ ಪ್ರೊ. ಸಿ. ಎನ್. ವಾಘಮೋರೆ ಅವರು ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ದೊರಕುವ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ಅದೇ ರೀತಿ ಹಿಂದುಳಿದ ವರ್ಗಗಳ ಘಟಕದ ಸಂಯೋಜಕರಾದ ಪ್ರೊ. ಕೆ.ಕಾಂತರಾಜು ಅವರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ದೊರೆ ಯುವ ಸೌಲಭ್ಯಗಳನ್ನು ತಿಳಿಸುವ ಜೊತೆಯಲ್ಲಿ ವಿವಿಧ ಮಾದರಿಯ ವಿದ್ಯಾರ್ಥಿವೇತನದ ಕುರಿತು ಅಂಕಿ ಅಂಶಗಳ ಸಹಿತ ವಿವ-ರಿಸಿದರು.



ವಿಶ್ವವಿದ್ಯಾಲಯದ ಗ್ರಂಥ-ಾಲಯದಲ್ಲಿರುವ ಪುಸ್ತಕ ಮತ್ತು ಪತ್ರಿಕೆಗಳ ಅಂಕಿಅಂಶಗಳನ್ನು ನೀಡಿ ಓದಿನಿಂದ ಉಂಟಾಗುವ ಪ್ರಯೋಜನಗಳ ಕುರಿತು ಮಾತನಾಡುತ್ತಾ ವಿದ್ಯಾರ್ಥಿಗಳಿಗೆ ಗ್ರಂಥಾಲ ಯ ಗುರುತಿನ ಚೀಟಿ ಪಡೆಯುವುದು ಮತ್ತು ಪುಸ್ತಕ ಬಳಕೆಯ ಬಗ್ಗೆ ಗ್ರಂಥ-ಾಲಯ ಹಾಗೂ ಮಾಹಿತಿ ತಂತ್ರಜ್ಞಾನ ವಿಭಾಗದ ಮುಖ್ಯಸ್ಥರಾದ ಪ್ರೊ.ಓ. ಮಾರಣ್ಣನವರ ಅವರು ತಿಳಿಸಿ ಕೊಟ್ಟರು. ಆರೋಗ್ಯ ವೇನಿಜವಾದ ಭಾಗ್ಯವೆಂಬ ಹಿನ್ನೆಲೆಯಲ್ಲಿ ವಿಶ್ವವಿದ್ಯಾಲಯದ ಆರೋಗ್ಯ ಕೇಂದ್ರ ಅಧಿಕಾರಿಗಳಾದ ಡಾ.ಅಪ್ಪಾಸಾಬ ಕೋಣೆಅವರು ವಿದ್ಯಾರ್ಥಿಗಳು ಆರೋಗ್ಯವನ್ನು ಹೇಗೆ ಕಾಪಾಡಿಕೊಳ್ಳಬೇಕು, ಸ್ವಚಿಕಿತ್ಸಾ ಮನೋಭಾವವನನ್ನು ಹೇಗೆ ಬೆಳಸಿಕೊಂಡು ಬದುಕಬೇಕು ಮತ್ತು ವಿಶ್ವವಿದ್ಯಾಲಯದ ಆರೋಗ್ಯ ಕೇಂದ್ರದ ಸೌಲಭ್ಯದ ಸದುಪಯೋಗ ಪಡೆಯಲು ತಿಳಿಸಿದರು.

ಮುಂದುವರೆದು ಕ್ರೀಡಾ ವಿಭಾಗದ ನಿರ್ದೇಶಕರಾದ ಡಾ.ಜಗದೀಶ ಗಸ್ತಿಯವರು ಕ್ರೀಡ ಜೀವನದ ಅವಿಭಾಜ್ಯ ಅಂಗವಾಗಿದೆ.

ದಿನನಿತ್ಯದ ದಿನಚರಿಗಳಲ್ಲಿ ಯೋಗ ಮತ್ತು ಯಾವುದಾದರೊಂದು ಕ್ರೀಡೆಯಲ್ಲಿ ಪಾಲ್ಗೊಳ್ಳುವ ಮೂಲಕ ದೈಹಿಕ ಮತ್ತು ಮಾನಸಿಕ ಆರೋಗ್ಯವನ್ನು ಕಾಪಾಡಿಕೊಳ್ಳಲು ಕರೆಕೊಟ್ಟರು.

## ವಿದ್ಯುತ್ ತಂತಿ ತಗುಲಿ ಧಗಧಗನೇ ಹೊತ್ತಿ ಉರಿದ ಮನೆ



ಬೆಳಗಾವಿ: ವಿದ್ಯುತ್ ತಂತಿ ಮನೆಗೆ ತಗುಲಿ ಮನೆ ಬೆಂಕಗಾಹುತಿಯಾಗಿರುವ ಘಟನೆ ಖಾನಾಪುರ ತಾಲೂಕಿನ ಲಕ್ಕೆಬೈಲ್ ಗ್ರಾಮದಲ್ಲಿ ನಡೆದಿದೆ.

ಮನೆಯ ಮೇಲಿನಿಂದ ಹಾದುಹೋಗಿರುವ ವಿದ್ಯುತ್ ತಂತಿ ಮನೆಗೆ ಸ್ಪರ್ಶಿಸಿದೆ. ಇದರಿಂದ ಧಗಧಗನೇ ಬೆಂಕಿ ಹೊತ್ತಿಕೊಂಡಿದೆ. ಬೆಂಕಿ ನಂದಿಸಲು ಗ್ರಾಮಸ್ಥರು ಸಾಕಷ್ಟು ಪ್ರಯತ್ನ ನಡೆಸಿದ್ದಾರೆ. ಆದರೂ ಅಷ್ಟರೊಳಗೆ ಅಪಾರ ಪ್ರಮಾಣದ ಹಾನಿ ಸಂಭವಿಸಿದೆ.

ಹಳೆಯ ಕಾಲದ ಕಟ್ಟಿಗೆ ಮನೆ ಇದಾದ್ದರಿಂದ ಬೆಂಕಿಯ ಕೆನ್ನಾಲಿಗೆ ಬಹಳ ವೇಗವಾಗಿ ವ್ಯಾಪಿಸಿದೆ. ಅಪಾರ ಪ್ರಮಾಣದ ಹಾನಿ ಆಗಿದೆ. ಈ ಕುರಿತು ಖಾನಾಪುರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

VOL. 04 ISSUE. 285 RNI. KARKAN/2020/79084 REG.NO G-2/PMG/KA/NK/BM/139/2024-26

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka. Printed At LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089